VOLUME: 16 | 16 JUNE 2026 | ಮಂಗಳವಾರ | RS: 2 | PAGE: 06 ISSUE: 126 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಮದುವೆಯ ನಂತರ ಸಾಮಾಜಿಕ ಜಾಲತಾಣಗಳಲ್ಲಿ ಅಷ್ಟೇನೂ ಫೋಟೋಗಳನ್ನು ರಶ್ಮಿಕಾ ಅಪ್‌ಡೇಟ್ ಮಾಡುತ್ತಿರಲಿಲ್ಲ. ಆದರೆ ಕಳೆದ 10 ದಿನಗಳಿಂದ ಅಪ್‌ಲೋಡ್ ಮಾಡಿದ ಇವರ ಎಲ್ಲಾ ಚಿತ್ರಗಳಿಗೆ ಹೆಚ್ಚು ಲೈಕ್ ಮತ್ತು ಕಮೆಂಟ್ ಬಂದಿವೆ....



BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಮಧ್ಯಪ್ರಾಚ್ಯದ ಯುದ್ಧ ಅಂತ್ಯ

**ತಮ್ಮ ಟ್ರೂತ್ ಸೋಶಿಯಲ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಟ್ರಂಪ್ ಬರುವ ಜೂನ್ 19 ರಂದು ಸ್ವಿಟ್ಜರ್‌ಲೆಂಡ್‌ನ ಜಿನೆವಾದಲ್ಲಿ ಉಭಯ ದೇಶಗಳು 14 ಅಂಶಗಳ ಐತಿಹಾಸಿಕ ಶಾಂತಿ ಒಪ್ಪಂದಕ್ಕೆ ಔಪಚಾರಿಕವಾಗಿ ಸಹಿ ಹಾಕಲಿವೆ ಎಂದು ತಿಳಿಸಿದ್ದಾರೆ. ಈ ಒಪ್ಪಂದವು ಹೊರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಮತ್ತು ಇರಾನ್ ಬಂದರುಗಳ ಮೇಲಿನ ಅಮೆರಿಕ ನೌಕಾ ದಿಗ್ಬಂಧನವನ್ನು ಕೊನೆಗೊಳಿಸಲು ನೆರವಾಗಲಿದೆ. ವಿಶ್ವದ ಹಡಗುಗಳೇ, ನಿಮ್ಮ ಎಂಜಿನ್‌ಗಳನ್ನು ಸ್ಟಾರ್ಟ್ ಮಾಡಿ, ತೈಲ ಹರಿಯಲು ಬಿಡಿ. ಎಲ್ಲರಿಗೂ ಅಭಿನಂದನೆಗಳು ಎಂದು ಟ್ರಂಪ್ ಬರೆದುಕೊಂಡಿದ್ದಾರೆ.**

ವಾಷಿಂಗ್ಟನ್/ಟೆಹರಾನ್: ಕಳೆದ 106 ದಿನಗಳಿಂದ ಇಡೀ ಜಗತ್ತನ್ನೇ ಮೂರನೇ ಮಹಾಯುದ್ಧದ ಭೀತಿಯಲ್ಲಿಟ್ಟಿದ್ದ ಇರಾನ್–ಅಮೆರಿಕ–ಇಸ್ರೇಲ್ ನಡುವಿನ ಭೀಕರ ಸಂಘರ್ಷ ಕೊನೆಗೂ ಅಂತ್ಯವಾಗುವ ಕಾಲ ಸನ್ನಿಹಿತವಾಗಿದೆ. ಇರಾನ್ ಜೊತೆಗಿನ ಬಹುನಿರೀಕ್ಷಿತ ಶಾಂತಿ ಒಪ್ಪಂದವನ್ನು ಅಂತಿಮಗೊಳಿಸಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಧಿಕೃತವಾಗಿ ಪ್ರಕಟಿಸಿದ್ದಾರೆ.

ತಮ್ಮ ಟ್ರೂತ್ ಸೋಶಿಯಲ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಟ್ರಂಪ್ ಬರುವ ಜೂನ್ 19 ರಂದು ಸ್ವಿಟ್ಜರ್‌ಲೆಂಡ್‌ನ ಜಿನೆವಾದಲ್ಲಿ ಉಭಯ ದೇಶಗಳು 14 ಅಂಶಗಳ ಐತಿಹಾಸಿಕ ಶಾಂತಿ ಒಪ್ಪಂದಕ್ಕೆ ಔಪಚಾರಿಕವಾಗಿ ಸಹಿ ಹಾಕಲಿವೆ ಎಂದು ತಿಳಿಸಿದ್ದಾರೆ.

ಈ ಒಪ್ಪಂದವು ಹೊರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಮತ್ತು ಇರಾನ್ ಬಂದರುಗಳ ಮೇಲಿನ ಅಮೆರಿಕ ನೌಕಾ ದಿಗ್ಬಂಧನವನ್ನು ಕೊನೆಗೊಳಿಸಲು ನೆರವಾಗಲಿದೆ. ವಿಶ್ವದ ಹಡಗುಗಳೇ, ನಿಮ್ಮ ಎಂಜಿನ್‌ಗಳನ್ನು ಸ್ಟಾರ್ಟ್ ಮಾಡಿ, ತೈಲ ಹರಿಯಲು ಬಿಡಿ. ಎಲ್ಲರಿಗೂ ಅಭಿನಂದನೆಗಳು ಎಂದು ಟ್ರಂಪ್ ಬರೆದುಕೊಂಡಿದ್ದಾರೆ.

ಒಪ್ಪಂದಕ್ಕೆ ಸಹಿ ಬಿದ್ದ ಬೆನ್ನಲ್ಲೇ ಜಾಗತಿಕ ತೈಲ ಸಂಚಾರಕ್ಕೆ ಪ್ರಮುಖವಾಗಿರುವ ಹೊರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಅಮೆರಿಕದ ಬೆನ್ನಲ್ಲೇ ಇರಾನ್‌ನ ಉಪ ವಿದೇಶಾಂಗ ಸಚಿವ ಕಜೆಮ್ ಘರಿಬಬಾದಿ ಕೂಡ ಈ ಒಪ್ಪಂದವನ್ನು




ಅಧಿಕೃತವಾಗಿ ದೃಢಪಡಿಸಿದ್ದಾರೆ.

ಮಹತ್ವದ ಶಾಂತಿ ಒಪ್ಪಂದದ ಫೈನಲ್ ಡೀಲ್ ಹಿಂದೆ ಗಲ್ಫ್ ರಾಷ್ಟ್ರ ಕತಾರ್‌ನ ಶ್ರಮ ದೊಡ್ಡದಿದೆ. ಇರಾನ್ ರಾಜಧಾನಿ ಟೆಹರಾನ್‌ನಲ್ಲಿ ಸತತ 17 ಗಂಟೆಗಳ ಕಾಲ ಸರಣಿ ಸಭೆಗಳನ್ನು ನಡೆಸಿ ಕತಾರ್ ಮುಖಂಡರು ಮಧ್ಯಸ್ಥಿಕೆ ವಹಿಸಿದ್ದರು.

ಅಂತಿಮ ಮಾತುಕತೆಗಳು ಅಧಿಕೃತವಾಗಿ ಆರಂಭವಾಗಬೇಕಾದರೆ, ಇರಾನ್‌ನ ಒಟ್ಟು ಮುಟ್ಟುಗೋಲು ಹಣದಲ್ಲಿ ಅರ್ಧದಷ್ಟು (12 ಶತಕೋಟಿ ಡಾಲರ್) ತಕ್ಷಣ ಬಿಡುಗಡೆಯಾಗಬೇಕು, ತೈಲ ನಿರ್ಬಂಧಗಳನ್ನು ಅಮಾನತುಗೊಳಿಸಬೇಕು ಮತ್ತು ನೌಕಾ ದಿಗ್ಬಂಧನವನ್ನು ಸಂಪೂರ್ಣವಾಗಿ ತೆರವುಗೊಳಿಸಬೇಕು. ಅಲ್ಲದೆ ಈ ಒಪ್ಪಂದಕ್ಕೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಒಪ್ಪಿಗೆಯ ಮುದ್ರೆ ಇರಬೇಕಾಗುತ್ತದೆ.

ಈ ಒಪ್ಪಂದದ ಅಜೆಂಡಾದಿಂದ ಇರಾನ್‌ನ ಮಿಸೈಲ್ ಯೋಜನೆಗಳನ್ನು ಮತ್ತು ಇತರೆ ಸಶಸ್ತ್ರ ಗುಂಪುಗಳಿಗೆ ಇರಾನ್ ನೀಡುವ ಬೆಂಬಲದ ಕುರಿತಾದ ಚರ್ಚೆಗಳನ್ನು ಸಂಪೂರ್ಣ ವಾಗಿ ಹೊರಗಿಡಲಾಗಿದೆ.

ಇರಾನ್–ಅಮೆರಿಕ ನಡುವಿನ ಒಪ್ಪಂದಕ್ಕೆ ಮಿತ್ರರಾಷ್ಟ್ರ ಇಸ್ರೇಲ್‌ನಿಂದ ತೀವ್ರ ವಿರೋಧ ವ್ಯಕ್ತವಾಗಿದೆ. ನಾವು ಈ ಒಪ್ಪಂದವನ್ನು ಒಪ್ಪುವುದಿಲ್ಲ. ಇದು ನಮ್ಮ ದೇಶದ ಭದ್ರತೆಯನ್ನು ಖಾತ್ರಿಪಡಿಸುತ್ತಿಲ್ಲ. ಲೆಬನಾನ್ ಮೇಲೆ ನಮ್ಮ ದಾಳಿ ಮುಂದುವರಿಯುತ್ತದೆ ಎಂದು ಇಸ್ರೇಲ್‌ನ ಇಬ್ಬರು ಪ್ರಮುಖ ಸಚಿವರು ಗುಡುಗಿದ್ದಾರೆ.

## ಗೃಹಜ್ಯೋತಿಗೂ ಪರಿಷ್ಕರಣೆ

ಬೆಂಗಳೂರು: ಗ್ಯಾರಂಟಿ ಯೋಜನೆಗಳ ದುರ್ಬಳಕೆ ತಡೆಯಲು ಮೇಜರ್ ಸರ್ಜರಿಗೆ ಮುಂದಾಗಿರುವ ರಾಜ್ಯ ಸರ್ಕಾರ ಗೃಹಲಕ್ಷ್ಮಿ ಬೆನ್ನಲ್ಲೇ ಮನೆಗೆ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆ ಪರಿಷ್ಕರಣೆಗೂ ಮುಂದಾಗಿದೆ. 2 ದಿನಗಳಲ್ಲಿ ಸರ್ಕಾರದಿಂದ ಈ ಬಗ್ಗೆ ಅಧಿಕೃತ ಆದೇಶ ಹೊರಬೀಳುವ ಸಾಧ್ಯತೆ ಇದ್ದು, ಪರಿಷ್ಕರಣೆ ವಿಚಾರವಾಗಿ ಇಲಾಖೆಗೆ ನಿಖರ ಮಾನದಂಡ ಪ್ರಕಟವಾಗಬಹುದೆಂದು ನಿರೀಕ್ಷಿಸಲಾಗಿದೆ.

ಗೃಹಜ್ಯೋತಿ ಯೊಜನೆಯಡಿ ರಾಜ್ಯದ 1.70 ಕೋಟಿ ಕುಟುಂಬಗಳು ಉಚಿತ ವಿದ್ಯುತ್ ಪಡೆಯುತ್ತಿವೆ. ಮಹತ್ವಾಕಾಂಕ್ಷಿ ಈ ಯೋಜನೆಗೆ ಪ್ರತಿ ತಿಂಗಳು 440 ಕೋಟಿ ರೂಪಾಯಿ ಹಣವನ್ನು ಸರ್ಕಾರ ವೆಚ್ಚ ಮಾಡುತ್ತಿದೆ. ಆದರೆ ಹಲವರು ಗೃಹಬಳಕೆ ಹೆಸರಿನಲ್ಲಿ ವಾಣಿಜ್ಯ ಬಳಕೆಗೂ ಫ್ರೀ ವಿದ್ಯುತ್ ಬಳಕೆ ಮಾಡುತ್ತಿರುವ ಮಾಹಿತಿ ಸಿಕ್ಕಿದೆ. ಹೀಗಾಗಿ ಪ್ರಾಪರ್ಟಿ, ಮಳಿಗೆಗಳಿಗೆ ಫ್ರೀ ವಿದ್ಯುತ್ ಪಡೆದವರಿಗೆ ಬಿಸಿ ಮುಟ್ಟಿಸಲು ಸಿದ್ಧತೆ ನಡೆದಿದ್ದು, ಉಚಿತ ವಿದ್ಯುತ್ ಪಡೆಯುತ್ತಿರುವ ಹೊರ ರಾಜ್ಯದ ಜನರಿಗೂ ಶಾಕ್ ಕೊಡಲು ತಯಾರಿ ನಡೆದಿದೆ. ಆಧಾರ್, ಇ–ಕೆವೈಸಿ, ಮೊಬೈಲ್ ನಂಬರ್ ಮೂಲಕ ಮರುಪರಿಶೀಲನೆ ನಡೆಯಲಿದ್ದು, ಸೇವಾ ಸಿಂಧು ಪೋರ್ಟಲ್‌ನಲ್ಲಿ ಇದಕ್ಕೆ ಅವಕಾಶ ನೀಡುವ ಸಾಧ್ಯತೆ ಇದೆ.

ಇನ್ನು ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಬಗ್ಗೆ ಮಾಹಿತಿ ನೀಡಿರುವ ಸಿಎಂ ಡಿ.ಕೆ. ಶಿವಕುಮಾರ್, ವೋಟ್ ಇದ್ದವರಿಗೆ ಮಾತ್ರ ಗ್ಯಾರಂಟಿ ಯೋಜನೆ ಕೊಡುತ್ತೇವೆ ಎಂದಿದ್ದಾರೆ. ಈ ಹಿಂದೆ ತರಾತುರಿಯಲ್ಲಿ ಯಾರದ್ದೋ ನಂಬರ್ ಕೊಟ್ಟಿದ್ದಾರೆ. ಹೀಗಾಗಿ ಗೃಹಲಕ್ಷ್ಮಿ ಹಣ ಯಾರದ್ದೋ ಅಕೌಂಟ್‌ಗೆ ಹೋಗ್ತಿದೆ. ಅದರ ಬದಲು ಫಲಾನುಭವಿಗಳ ಖಾತೆಗೇ ಹಣ ಸಂದಾಯವಾಗಬೇಕು. ನಾವು ಕರ್ನಾಟಕದವರಿಗೆ ಮಾತ್ರ ಗ್ಯಾರಂಟಿಗಳನ್ನು ಕೊಡೋದು ಎಂದವರು ಸ್ಪಷ್ಟವಾಗಿ ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಬಗ್ಗೆ ಆಕ್ಷೇಪ ತೆಗೆದಿರುವ ವಿಪಕ್ಷ ಬಿಜೆಪಿಗರಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕೌಂಟರ್ ಕೊಟ್ಟಿದ್ದು, ಬಿಜೆಪಿ ತಮ್ಮ ಕಾರ್ಯಕರ್ತರಿಗೆ ಗ್ಯಾರಂಟಿ ಬೇಡ ಅಂತಾ ಅಭಿಯಾನ ಮಾಡಲಿ. ಅವರಿಗೆ ಗ್ಯಾರಂಟಿ ಬೇಡ ಅಂದ್ರೆ ಬೇಡ, ಬೇರೆಯವರು ಪಡೀತಾರೆ.

ಆದರೆ ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆ ನಿಲ್ಲಿಸುವುದಿಲ್ಲ. ಅರ್ಹರಿಗೆ ಗ್ಯಾರಂಟಿ ಸಿಗಬೇಕೆಂದು ಪರಿಷ್ಕರಣೆ ಮಾಡಲಾಗ್ತಿದೆ ಎಂದವರು ಹೇಳಿದ್ದಾರೆ.

## ದೇಣಿಗೆಯಲ್ಲಿ ಅಕ್ರಮ: ಎಸ್‌ಐಟಿ ರಚನೆ

ಲಕ್ನೋ: ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ದೇವಸ್ಥಾನದ ದೇಣಿಗೆ ನಿರ್ವಹಣೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಆರೋಪ ಈಗ ಸುಪ್ರೀಂಕೋರ್ಟ್ ಮೆಟ್ಟಿಲೇರಿದೆ. ಸಾರ್ವಜನಿಕರ ವಿಶ್ವಾಸವನ್ನು ಕಾಪಾಡಲು ಈ ಬಗ್ಗೆ ಸ್ವತಂತ್ರ ತನಿಖೆ ನಡೆಸಬೇಕು ಎಂದು ಕೋರಿ ಸಲ್ಲಿಕೆಯಾಗಿರುವ ಅರ್ಜಿಯನ್ನು ಸುಪ್ರೀಂ ಕೋರ್ಟ್ ನಡೆಸಿದೆ.

ಇದೇ ವೇಳೆ, ಪ್ರಕರಣದ ಪಾರದರ್ಶಕತೆ ಮತ್ತು ಸತ್ಯಾಸತ್ಯತೆಯನ್ನು ಬಯಲಿಗೆಳೆಯಲು ಉತ್ತರ ಪ್ರದೇಶ ಸರ್ಕಾರವು ಈಗಾಗಲೇ ಉನ್ನತ ಮಟ್ಟದ ವಿಶೇಷ ತನಿಖಾ ತಂಡವನ್ನು ರಚಿಸುವ ಮೂಲಕ ತ್ವರಿತ ಕ್ರಮ ಕೈಗೊಂಡಿದೆ. ವಕೀಲ ಅನೂಪ್ ಅವಸ್ಥಿ ಅವರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ಅಯೋಧ್ಯೆ ಮಂದಿರದ ದೇಣಿಗೆಗೆ ಸಂಬಂಧಿಸಿದ ಆರೋಪಗಳನ್ನು ನ್ಯಾಯಾಲಯವೇ ನೇರವಾಗಿ ಪರಿಶೀಲಿಸಬೇಕು ಮತ್ತು ಸ್ವತಂತ್ರ ತನಿಖೆಗೆ ಆದೇಶಿಸಬೇಕು ಎಂದು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರಿಗೆ ಮನವಿ ಮಾಡಿದ್ದಾರೆ.

ಈ ಮನವಿಗೆ ಸ್ಪಂದಿಸಿದ ಸಿಜೆಐ ಸೂರ್ಯ ಕಾಂತ್ ಅವರು, ನ್ಯಾಯಾಲಯದಲ್ಲಿ ಇಂತಹ ವಿಷಯಗಳ ಬಗ್ಗೆ ಕೇವಲ ಮೌಖಿಕವಾಗಿ ಹೇಳುವ ಬದಲು ಅಧಿಕೃತವಾಗಿ ಲಿಖಿತ ಟಿಪ್ಪಣಿಗಳನ್ನು ಸಲ್ಲಿಸುವಂತೆ ಸೂಚಿಸಿದ್ದಾರೆ. ಆ ಟಿಪ್ಪಣಿಗಳನ್ನು ಪರಿಶೀಲಿಸಿದ ನಂತರ ಯಾವುದು ಪ್ರಸ್ತುತ ಎಂಬುದನ್ನು ನಿರ್ಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಯುಪಿ ಸರ್ಕಾರದಿಂದ ಮೂವರು ಸದಸ್ಯರ ತಂಡ ರಚನೆ: ದೇಣಿಗೆ ಪೆಟ್ಟಿಗೆಗಳ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ವದಂತಿಗಳಿಗೆ ಬ್ರೇಕ್ ಹಾಕಲು ಮತ್ತು ಸತ್ಯವನ್ನು ಜನರೆದುರು ತರಲು 'ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್' ಸ್ವತಃ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಗೆ ನಿಷ್ಪಕ್ಷಪಾತ ತನಿಖೆಗಾಗಿ ವಿನಂತಿಸಿತ್ತು. ಟ್ರಸ್ಟ್‌ನ ಕೋರಿಕೆಯ ಮೇರೆಗೆ ಮುಖ್ಯಮಂತ್ರಿಗಳು ಮೂವರು ಉನ್ನತ ಅಧಿಕಾರಿಗಳ ವಿಶೇಷ ತನಿಖಾ ತಂಡವನ್ನು ರಚಿಸಿದ್ದಾರೆ.

ಕೇವಲ ನಿರ್ಮಾಣ ಕಾರ್ಯಕ್ಕೆ ನನ್ನ ಪಾತ್ರ ಸೀಮಿತ: ದೇಣಿಗೆ ವಿಷಯದ ಬಗ್ಗೆ ಕೇಳಲಾದ ಪ್ರಶ್ನೆಗಳಿಗೆ ರಾಮ ಮಂದಿರ ನಿರ್ಮಾಣ ಸಮಿತಿಯ ಮುಖ್ಯಸ್ಥ ನೃಪೇಂದ್ರ ಮಿಶ್ರಾ ಅವರು ಸ್ಪಷ್ಟನೆ ನೀಡಿದ್ದಾರೆ. ನನ್ನ ಜವಾಬ್ದಾರಿಯು ಕೇವಲ ಮಂದಿರದ ನಿರ್ಮಾಣ ಕಾರ್ಯಗಳ ಮೇಲ್ವಿಚಾರಣೆಗೆ ಮಾತ್ರ ಸೀಮಿತವಾಗಿದೆ. ಆ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಲು ನಾನು ಅಯೋಧ್ಯೆಗೆ ಬಂದಿದ್ದೇನೆ, ಹಣಕಾಸಿನ ವಿಷಯಗಳಿಗೂ ನನಗೂ ಸಂಬಂಧವಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಈ ವಿಷಯದ ಬಗ್ಗೆ ರಾಜಕೀಯ ವಲಯದಲ್ಲೂ ಚರ್ಚೆಗಳು ಆರಂಭವಾಗಿವೆ.

## ಹಾರ್ಮುಜ್ ಜಲಸಂಧಿ ಓಪನ್

ವಾಷಿಂಗ್ಟನ್: ಇರಾನ್ ಜೊತೆ ಶಾಂತಿ ಒಪ್ಪಂದವನ್ನು ಅಂತಿಮಗೊಳಿಸಲಾಗಿದೆ ಎಂದು ಅಮೆರಿಕ ಅಧ್ಯಕ್ಷಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲಾಗುವುದು, ಅಮೆರಿಕದ ನೌಕಾ ದಿಗ್ಬಂಧನವನ್ನು ತಕ್ಷಣವೇ ತೆಗೆದುಹಾಕಲಾಗುವುದು ಎಂದು ತಿಳಿಸಿದ್ದಾರೆ.

ಟ್ರೂತ್ ಸೋಶಿಯಲ್ ಪ್ಲಾಟ್‌ಫಾರ್ಮ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಟ್ರಂಪ್, ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್‌ನೊಂದಿಗಿನ ಒಪ್ಪಂದವು ಈಗ ಪೂರ್ಣಗೊಂಡಿದೆ. ಎಲ್ಲರಿಗೂ ಅಭಿನಂದನೆಗಳು! ಹಾರ್ಮುಜ್ ಜಲಸಂಧಿಯನ್ನು ಟೋಲ್–ಫ್ರೀ ಆಗಿ ತೆರೆಯಲು ನಾನು ಈ ಮೂಲಕ ಸಂಪೂರ್ಣವಾಗಿ ಅಧಿಕಾರ ನೀಡುತ್ತೇನೆ. ಅದೇ ಸಮಯದಲ್ಲಿ ಯುನೈಟೆಡ್ ಸ್ಟೇಟ್ಸ್ ನೌಕಾ ದಿಗ್ಬಂಧನವನ್ನು ತಕ್ಷಣ ತೆಗೆದುಹಾಕಲು ಅಧಿಕಾರ ನೀಡುತ್ತೇನೆ. ವಿಶ್ವದ ಹಡಗುಗಳೇ, ನಿಮ್ಮ ಎಂಜಿನ್‌ಗಳನ್ನು ಪ್ರಾರಂಭಿಸಿ. ತೈಲ ಹರಿಯಲಿ ಎಂದು ಟ್ರಂಪ್ ಬರೆದಿದ್ದಾರೆ.

ಮಾತುಕತೆಗಳ ನಂತರ ಅಮೆರಿಕ ಮತ್ತು ಇರಾನ್ ನಡುವಿನ ಶಾಂತಿ ಒಪ್ಪಂದವನ್ನು ತಲುಪಲಾಗಿದೆ ಎಂದು ಘೋಷಿಸಲು ನಾವು ಸಂತೋಷಪಡುತ್ತೇವೆ. ಲೆಬನಾನ್ ಸೇರಿದಂತೆ ಎಲ್ಲಾ ಕಡೆ ಮಿಲಿಟರಿ ಕಾರ್ಯಾಚರಣೆಗಳನ್ನು ತಕ್ಷಣ ಮತ್ತು ಶಾಶ್ವತವಾಗಿ ಕೊನೆಗೊಳಿಸುವುದಾಗಿ ಎರಡೂ ರಾಷ್ಟ್ರಗಳು ಘೋಷಿಸಿವೆ ಎಂದು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಎಕ್ಸ್ ನಲ್ಲಿ ಬರೆದಿದ್ದಾರೆ.

ಶುಕ್ರವಾರ ಸ್ವಿಟ್ಜರ್‌ಲ್ಯಾಂಡ್‌ನಲ್ಲಿ ಎರಡೂ ಕಡೆಯವರು ಒಪ್ಪಂದಕ್ಕೆ ಸಹಿ ಹಾಕಲಿದ್ದಾರೆ ಎಂದು ಪ್ರಧಾನಿ ಷರೀಫ್ ತಮ್ಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಹಾರ್ಮುಜ್ ಜಲಸಂಧಿಯು ಮತ್ತೆ ಎಲ್ಲಾ ಹಡಗುಗಳಿಗೆ ಯಾವಾಗ ತೆರೆದಿರುತ್ತದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ.

ಹಾರ್ಮುಜ್ ಜಲಸಂಧಿಯು ವಿಶ್ವದ ಅತ್ಯಂತ ಜನನಿಬಿಡ ತೈಲ ಸಾಗಣೆ ಮಾರ್ಗಗಳಲ್ಲಿ ಒಂದಾಗಿದೆ. ವಿಶ್ವದ ತೈಲ ಮತ್ತು ನೈಸರ್ಗಿಕ ಅನಿಲ ಪೂರೈಕೆಯ ಸುಮಾರು ಐದನೇ ಒಂದು ಭಾಗದಷ್ಟು ಕೇಂದ್ರಬಿಂದುವಾಗಿದೆ. ಫೆ.28 ರಂದು ಯುದ್ಧ ಪ್ರಾರಂಭವಾದಾಗ ಈ ಪ್ರಮುಖ ಜಲಮಾರ್ಗವನ್ನು ಇರಾನ್ ಮುಚ್ಚಿತು.

ಇದರಿಂದ ಭಾರತದ ತೈಲ ಮತ್ತು ಅನಿಲ ಪೂರೈಕೆಯಲ್ಲೂ ಬಿಕ್ಕಟ್ಟು ಉಂಟಾಗಿತ್ತು. ಏಪ್ರಿಲ್‌ನಲ್ಲಿ ಪಾಕಿಸ್ತಾನದಲ್ಲಿ ಶಾಂತಿ ಮಾತುಕತೆಗಳು ಪ್ರಗತಿ ಸಾಧಿಸಲು ವಿಫಲವಾದ ನಂತರ ಅಮೆರಿಕವು ಇರಾನಿನ ಬಂದರುಗಳ ಮೇಲೆ ತನ್ನ ದಿಗ್ಬಂಧನವನ್ನು ಘೋಷಿಸಿತ್ತು.

## 3.89 ಲಕ್ಷ ಗೃಹಲಕ್ಷ್ಮಿ ಫಲಾನುಭವಿಗಳಿಗೆ ಕೊಕ್..!

ಬೆಂಗಳೂರು: 5 ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಲಕ್ಷ್ಮಿಗೆ ರಾಜ್ಯ ಸರ್ಕಾರ ಮೇಜರ್ ಸರ್ಜರಿ ಮಾಡಿದೆ. ಯೋಜನೆಯ ದುರುಪಯೋಗ ಕಂಡು ಬಂದಿರುವ ಹಿನ್ನೆಲೆ ಪರಿಷ್ಕರಣೆ ನಡೆದಿದ್ದು, ಫಲಾನುಭವಿಗಳು ಮರು ಅರ್ಜಿ ಸಲ್ಲಿಸಬೇಕೆಂದು ಸ್ವತಃ ಸಿಎಂ ಡಿ.ಕೆ. ಶಿವಕುಮಾರ್ ಅವರೇ ಈಗಾಗಲೇ ಮಾಹಿತಿ ನೀಡಿದ್ದಾರೆ. ಈಗಿರುವ ಮಾಹಿತಿಯ ಪ್ರಕಾರ 1.30 ಕೋಟಿ ಗೃಹಲಕ್ಷ್ಮಿಯರ ಪೈಕಿ 3.89 ಲಕ್ಷ ಫಲಾನುಭವಿಗಳಿಗೆ ಭರ್ಜರಿ ಶಾಕ್ ಕೊಟ್ಟಿದೆ.

ವಿವಿಧ ಇಲಾಖೆಗಳ ಮಾಹಿತಿಯನ್ನು ಸಂಗ್ರಹಿಸಿ ಪರಿಶೀಲನೆ ನಡೆಸಿದ ಬಳಿಕ ಅನರ್ಹ ಫಲಾನುಭವಿಗಳನ್ನು ಗುರುತಿಸಿರುವ ಇಲಾಖೆ, ಅವರ ಖಾತೆಗಳಿಗೆ ಹಣ ವರ್ಗಾವಣೆ ಸ್ಥಗಿತಗೊಳಿಸಿದೆ. ಇಲಾಖೆಯ ಮಾಹಿತಿಯ ಪ್ರಕಾರ, ಆದಾಯ ತೆರಿಗೆ ಮತ್ತು ಜಿಎಸ್‌ಟಿ ಪಾವತಿಸುವ 1.94 ಲಕ್ಷ ಮಂದಿಯನ್ನು ಯೋಜನೆಯಿಂದ ಹೊರಗಿಡಲಾಗಿದೆ. ಜೊತೆಗೆ, ಮೃತಪಟ್ಟ 1.95 ಲಕ್ಷ ಫಲಾನುಭವಿಗಳ ಹೆಸರಿನಲ್ಲಿದ್ದ ಖಾತೆಗಳಿಗೂ ಹಣ ಜಮೆಯಾಗುತ್ತಿರುವುದು ಪತ್ತೆಯಾಗಿದ್ದು, ಅಂತಹ ಖಾತೆಗಳಿಗೆ ಸಹ ಹಣ ವರ್ಗಾವಣೆ ಬಂದ್ ಮಾಡಲಾಗಿದೆ.

ಇಲಾಖೆ ನೀಡಿರುವ ಮಾಹಿತಿ ಪ್ರಕಾರ ಅನರ್ಹ ಫಲಾನುಭವಿಗಳ ಪೈಕಿ ಬೆಂಗಳೂರು ನಗರ ಜಿಲ್ಲೆ ಮೊದಲ ಸ್ಥಾನದಲ್ಲಿದ್ದು, 47,871 ಗೃಹಲಕ್ಷ್ಮಿಯರನ್ನು ಕೈಬಿಡಲಾಗಿದೆ. ತದನಂತರ ಬೆಳಗಾವಿ, ದಕ್ಷಿಣ ಕನ್ನಡ, ಮೈಸೂರು ಹಾಗೂ ತುಮಕೂರು ಜಿಲ್ಲೆ ಅನರ್ಹರ ಪರಿಷ್ಕರಣೆಯಲ್ಲಿ ಅಗ್ರ 5ರಲ್ಲಿ ಸ್ಥಾನ ಪಡೆದಿವೆ.

## ರೈತರಿಗೆ ತೊಂದರೆಯಾಗದಂತೆ ನೋಡಿಕೊಳ್ಳಿ

ಬೆಂಗಳೂರು: ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಮರ್ಪಕವಾಗಿ ಪೂರೈಕೆ ಆಗುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿಧಾನಸೌಧದಲ್ಲಿ ಸೋಮವಾರ ಕೃಷಿ, ತೋಟಗಾರಿಕೆ, ರೇಷ್ಮೆ ಹಾಗೂ ಮೀನುಗಾರಿಕೆ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಬರ ಪರಿಸ್ಥಿತಿ ಎದುರಿಸಲು ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ರೈತರಿಗೆ ಅಗತ್ಯ ಮಾಹಿತಿಗಳನ್ನು ತಲುಪಿಸುವುದರ ಜೊತೆಗೆ ಅತಿವೃಷ್ಟಿ ಹಾಗೂ ಅನಾವೃಷ್ಟಿ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಸಿದ್ಧರಾಗುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕ್ರಿಮಿನಾಶಕ ಮತ್ತು ಇತರೆ ಔಷಧ ಸಿಂಪಡಣೆ ಸಲಕರಣೆಗಳನ್ನು ರೈತರಿಗೆ ಒದಗಿಸುವ ವ್ಯವಸ್ಥೆ ಮಾಡಬೇಕು. ಕೃಷಿ ಹೊಂಡಗಳಿಗೆ ಬಿದ್ದು ಸಾವನ್ನಪ್ಪುವ ಘಟನೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹೊಂಡಗಳಿಗೆ ಬೇಲಿ ನಿರ್ಮಿಸಲು ಯೋಜನೆ ರೂಪಿಸಬೇಕು ಎಂದು ಸೂಚಿಸಿದರು.

ಇತರೆ ರಾಜ್ಯಗಳ ಮಾದರಿ ಯೋಜನೆಗಳನ್ನು ಅಧ್ಯಯನ ಮಾಡಿ, ರಾಜ್ಯದ ಕೃಷಿ ಪದ್ಧತಿ ಹಾಗೂ ಬೆಳೆ ಮಾದರಿಗೆ ಅನುಗುಣವಾಗಿ ಜಾರಿಗೊಳಿಸುವಂತೆ ಸಲಹೆ ನೀಡಿದರು.

ಡ್ರೋಣ್, ಕೃತಕ ಬುದ್ಧಿಮತ್ತೆ ಸೇರಿದಂತೆ ಆಧುನಿಕ



ತಂತ್ರಜ್ಞಾನವನ್ನು ರೈತರಿಗೆ ತಲುಪಿಸುವ ವ್ಯವಸ್ಥೆ ಕಲ್ಪಿಸಬೇಕು. ಪ್ರಕೃತಿ ವೈಪರೀತ್ಯಗಳಿಂದ ರೈತರ ಕೃಷಿ ಚಟುವಟಿಕೆಗಳಿಗೆ ತೊಂದರೆ ಆಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದರು.

ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಖಾಲಿ ಇರುವ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡುವಂತೆ ಸೂಚಿಸಿದ ಸಿಎಂ, ಪ್ರಾಥಮಿಕ ಕೃಷಿಯ ಜೊತೆಗೆ ಪೂರಕ ಕೃಷಿ ಚಟುವಟಿಕೆಗಳ ಮೂಲಕ ರೈತರ ಆದಾಯ ಹೆಚ್ಚಿಸುವ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ತಿಳಿಸಿದರು.

## 'ಶಕ್ತಿ' ಸ್ಮಾರ್ಟ್ ಕಾರ್ಡ್‌ಗೆ ಅಂತಿಮ ಸಿದ್ಧತೆ: ಬೈರತಿ ಸುರೇಶ್

ಬೆಂಗಳೂರು: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಶಕ್ತಿ' ಯೋಜನೆಯಡಿ ಸ್ಮಾರ್ಟ್ ಕಾರ್ಡ್ ವಿತರಣೆ ಬಗ್ಗೆ ಅಂತಿಮ ರೂಪುರೇಶೆ ಸಿದ್ಧಪಡಿಸಲಾಗುತ್ತಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಸೋಮವಾರ ವಿಧಾನಸೌಧದಲ್ಲಿ ಸಾರಿಗೆ ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಸುಮಾರು 2 ಕೋಟಿಗೂ ಅಧಿಕ ಮಹಿಳೆಯರ ಉಚಿತ ಪ್ರಯಾಣಕ್ಕೆ ಸ್ಮಾರ್ಟ್ ಕಾರ್ಡ್ ವಿತರಿಸುವ ಸಾಧ್ಯತೆಗಳಿವೆ. ಈ ಸ್ಮಾರ್ಟ್ ಕಾರ್ಡ್ ವಿತರಣೆಗೆ ಸಂಬಂಧಿಸಿದಂತೆ ವಿಶೇಷ ಉದ್ದೇಶಿತ ವಾಹನಯನ್ನು ರಚನೆ ಮಾಡಿ, ಇದರಡಿಯೇ ವಿತರಣಾ ಪ್ರಕ್ರಿಯೆ ನಡೆಸಲಾಗುತ್ತದೆ ಎಂದರು.

ಇದೇವೇಳೆ, ಸ್ಮಾರ್ಟ್ ಕಾರ್ಡ್ ನ ರೂಪುರೇಶೆಯನ್ನು ಅಂತಿಮಗೊಳಿಸಲು ವಹಿವಾಟು ಸಲಹೆಗಾರರ ಸಮಿತಿಯನ್ನು ನೇಮಕ ಮಾಡಲಾಗಿದೆ. ಈ ಸಮಿತಿಯು ಸ್ಮಾರ್ಟ್ ಕಾರ್ಡ್ ಸ್ವರೂಪ, ತಾಂತ್ರಿಕ ನೆರವು, ಟೆಂಡರ್ ಪ್ರಕ್ರಿಯೆ ಮತ್ತು ವಿತರಣೆ ಪ್ರಕ್ರಿಯೆಯನ್ನು ಹೇಗೆ ನಡೆಸಬೇಕೆಂಬುದರ ಬಗ್ಗೆ ಸಾರಿಗೆ ನಿಗಮಗಳಿಗೆ ಸಲಹೆ, ಮಾರ್ಗದರ್ಶನ ನೀಡಲಿದೆ ಎಂದು ತಿಳಿಸಿದರು.

ಪಿಪಿಪಿ ಮಾದರಿಯಲ್ಲಿ ಸ್ಮಾರ್ಟ್ ಕಾರ್ಡ್



ಸಮಿತಿಯು ಈ ತಿಂಗಳಾಂತ್ಯದಲ್ಲಿ ವರದಿ ನೀಡಲಿದ್ದು, ಇದರ ಆಧಾರದಲ್ಲಿ ಸ್ಮಾರ್ಟ್ ಕಾರ್ಡ್ ಪ್ರಕ್ರಿಯೆಯನ್ನು ನಡೆಸಲಾಗುತ್ತದೆ. ಕೋಟ್ಯಂತರ ಸ್ಮಾರ್ಟ್ ಕಾರ್ಡ್ ವಿತರಣೆ ಅಗತ್ಯವಿರುವ ಹಿನ್ನೆಲೆಯಲ್ಲಿ ಟೆಂಡರ್ ಕರೆಯಲಾಗುತ್ತದೆ.

ಮಹಿಳೆಯರಿಗೆ ಉಚಿತವಾಗಿ ಸ್ಮಾರ್ಟ್ ಕಾರ್ಡ್ ದೊರೆಯಲಿದೆ. ಪುರುಷರು ಪಾವತಿ ಆಧಾರದಲ್ಲಿ ಸ್ಮಾರ್ಟ್ ಕಾರ್ಡ್ ಖರೀದಿಸಬೇಕಾಗುತ್ತದೆ. ಹೀಗೆ ಮಹಿಳಾ ಮತ್ತು ಪುರುಷ ಪ್ರಯಾಣಿಕರೆಲ್ಲರನ್ನು ಒಟ್ಟುಗೂಡಿಸಿದರೆ ಸುಮಾರು 2.5 ಕೋಟಿಯಿಂದ 3 ಕೋಟಿ ಕಾರ್ಡ್ ಗಳು ಬೇಕಾಗುತ್ತವೆ ಎಂದು ಅಂದಾಜಿಸಲಾಗಿದೆ ಎಂದು ಬೈರತಿ ಸುರೇಶ್ ತಿಳಿಸಿದರು.

ಸ್ಮಾರ್ಟ್ ಕಾರ್ಡುಗಳನ್ನು ಖಾಸಗಿ–ಸರ್ಕಾರಿ ಸಹಭಾಗಿತ್ವದಲ್ಲಿ ವಿತರಣೆ ಮಾಡಲಾಗುತ್ತದೆ. ಮಹಿಳೆಯರಿಗೆ ಉಚಿತವಾಗಿ ವಿತರಿಸಲಿದ್ದು, ಇದಕ್ಕೆ ತಗಲುವ ಸಂಸ್ಕರಣ ವೆಚ್ಚವನ್ನು ಸರ್ಕಾರ ಭರಿಸಲಿದ್ದರೆ, ಪುರುಷ ಪ್ರಯಾಣಿಕರು ಹಣ ಕೊಟ್ಟು ಖರೀದಿಸಬೇಕಾಗುತ್ತದೆ. ಸ್ಮಾರ್ಟ್ ಕಾರ್ಡ್ ಗಳ ತಾಂತ್ರಿಕ ನೆರವು ಸೇರಿದಂತೆ ಇನ್ನಿತರ ಸಹಕಾರವನ್ನು ಖಾಸಗಿ ಸಂಸ್ಥೆಯೇ ನಿರ್ವಹಣೆ ಮಾಡಲಿದೆ ಎಂದು ಅವರು ಸ್ಪಷ್ಟಪಡಿಸಿದರು.

ಎಲೆಕ್ಟ್ರಿಕ್ ವಾಹನಗಳಿಗೆ ಆದ್ಯತೆ

ಪರಿಸರ ಸಂರಕ್ಷಣೆಗೆ ನಮ್ಮ ಸರ್ಕಾರ ಆದ್ಯತೆ ನೀಡುತ್ತಿದ್ದು, ಎಲೆಕ್ಟ್ರಿಕ್ ಬಸ್ ಗಳ ಖರೀದಿಯತ್ತ ಗಮನಹರಿಸಿದೆ. ಈ ಹಿನ್ನೆಲೆಯಲ್ಲಿ ಹಂತಹಂತವಾಗಿ ನಾಲ್ಕೂ ನಿಗಮಗಳಿಗೆ 4 ಸಾವಿರಕ್ಕೂ ಅಧಿಕ ಎಲೆಕ್ಟ್ರಿಕ್ ಬಸ್ ಗಳನ್ನು ಖರೀದಿಸಲಾಗುತ್ತದೆ ಎಂದರು.

ಸಭೆಯಲ್ಲಿ ಸಾರಿಗೆ ಇಲಾಖೆ ಕಾರ್ಯದರ್ಶಿ ದೀಪಾಚೋಳನ್, ಆಯುಕ್ತರು ಮತ್ತು ಕೆಎಸ್ಆರ್ಟಿಸಿ ವ್ಯವಸ್ಥಾಪಕ ನಿರ್ದೇಶಕ ಸೆಲ್ವಮಣಿ, ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕ ಶಿವಕುಮಾರ್ ಸೇರಿದಂತೆ ಇನ್ನಿತರ ಹಿರಿಯ ಅಧಿಕಾರಿಗಳು ಇದ್ದರು.

ಭಾರತ ಸಾರಥಿ
16/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮಿಲಿಯನ್ ಡಾಲರ್ ಧನಸಹಾಯ

ಬೆಂಗಳೂರು

ಬಹುನಿರೀಕ್ಷಿತ ಲಂಕಾ ಪ್ರೀಮಿಯರ್ ಲೀಗ್ (ಎಲ್‌ಪಿಎಲ್) ಆರನೇ ಆವೃತ್ತಿ ಆರಂಭಕ್ಕೆ ದಿನಗಣನೆ ಆರಂಭವಾಗಿರುವ ಬೆನ್ನಲ್ಲೇ, ಲೀಗ್‌ನ ಪ್ರವರ್ತಕ ಸಂಸ್ಥೆ ಇನ್ನೋವೇಟಿವ್ ಪ್ರೊಡಕ್ಷನ್ ಗ್ರೂಪ್ (ಐಪಿಜಿ) ಮಹತ್ವದ ಆರ್ಥಿಕ ಬಲವನ್ನು ಪಡೆದುಕೊಂಡಿದೆ. ಅಮೆರಿಕದ ನಾಸ್ಡಾಕ್ ಷೇರು ಮಾರುಕಟ್ಟೆಯಲ್ಲಿ ಪಟ್ಟಿಯಾಗಿರುವ ಪಾಲುದಾರ ಸಂಸ್ಥೆಯಿಂದ ಮಿಲಿಯನ್ ಡಾಲರ್ ಮೊತ್ತದ ಧನಸಹಾಯ ದೊರೆತಿರುವುದು ಲೀಗ್‌ನ ಭವಿಷ್ಯದ ಬೆಳವಣಿಗೆಗೆ ಹೊಸ ಚೈತನ್ಯ ತುಂಬಿದೆ.

ಲಂಕಾ ಪ್ರೀಮಿಯರ್ ಲೀಗ್‌ನ ವಾಣಿಜ್ಯ ಹಕ್ಕುಗಳನ್ನು ಹೊಂದಿರುವ ಐಪಿಜಿ ಗ್ರೂಪ್, ಅಮೆರಿಕ ಮೂಲದ ಫ್ಲ್ಯಾಶ್ ಸ್ಪೋರ್ಟ್ಸ್ ಅಂಡ್ ಮೀಡಿಯಾ ಇಂಕ್‌ನೊಂದಿಗೆ ತನ್ನ ಸಂಪೂರ್ಣ ಶೇರು ಆಧಾರಿತ ವಿಲೀನ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಈ ಮೂಲಕ ಎಲ್‌ಪಿಎಲ್ ಸೇರಿದಂತೆ ಸಂಸ್ಥೆಯ ಎಲ್ಲಾ ಟಿ20 ಕ್ರಿಕೆಟ್ ಲೀಗ್‌ಗಳ ವಾಣಿಜ್ಯ ಹಕ್ಕುಗಳ ಪೋರ್ಟ್‌ಫೋಲಿಯೊವನ್ನು ನಾಸ್ಡಾಕ್-ಲಿಸ್ಟೆಡ್ ವೇದಿಕೆ ಯುಗ್ರೊ ಅಡಿಯಲ್ಲಿ ತರಲಾಗಿದೆ.

ಜುಲೈ 10ರಿಂದ ಆರಂಭವಾಗಲಿರುವ ಎಲ್‌ಪಿಎಲ್‌ನ ಹೊಸ ಆವೃತ್ತಿಗೆ ಮುನ್ನ ನಡೆದಿರುವ ಈ ಬೆಳವಣಿಗೆ, ಲೀಗ್‌ನ ಆರ್ಥಿಕ ಸ್ಥಿರತೆಯನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆ ಮೂಡಿಸಿದೆ. ಜೊತೆಗೆ, ಲೀಗ್‌ನ ಜಾಗತಿಕ ವಿಸ್ತರಣೆ, ಆದಾಯ ಮೂಲಗಳ ಹೆಚ್ಚಳ ಹಾಗೂ ಡಿಜಿಟಲ್ ಪರಿವರ್ತನೆಗೆ ಈ ಪಾಲುದಾರಿಕೆ ಪ್ರಮುಖ ವೇದಿಕೆಯಾಗಲಿದೆ ಎಂದು ಸಂಸ್ಥೆ ತಿಳಿಸಿದೆ.

ಹೊಸ ಒಪ್ಪಂದದ ಭಾಗವಾಗಿ, ಕ್ರೀಡಾ ಮಾರುಕಟ್ಟೆಯಲ್ಲಿ ಲಂಕಾ ಪ್ರೀಮಿಯರ್ ಲೀಗ್‌ನ ಬ್ರ್ಯಾಂಡ್ ಮೌಲ್ಯವನ್ನು ಹೆಚ್ಚಿಸುವುದು, ಅತ್ಯಾಧುನಿಕ ಡಿಜಿಟಲ್ ತಂತ್ರಜ್ಞಾನಗಳನ್ನು ಪರಿಚಯಿಸುವುದು ಮತ್ತು ವಿಶ್ವದಾದ್ಯಂತ ಹೆಚ್ಚಿನ ಸಂಖ್ಯೆಯ ಕ್ರಿಕೆಟ್ ಅಭಿಮಾನಿಗಳನ್ನು ತಲುಪುವ ಗುರಿಯನ್ನು ಹೊಂದಲಾಗಿದೆ. ಈ ಕಾರ್ಯತಂತ್ರದ ನಡೆ ಮುಂಬರುವ ಸೀಸನ್‌ಗೆ ಹೊಸ ಆಯಾಮ ನೀಡಲಿದ್ದು, ಲೀಗ್‌ನ ಅಂತರರಾಷ್ಟ್ರೀಯ ಗುರುತನ್ನು ಮತ್ತಷ್ಟು ವಿಸ್ತರಿಸುವ ನಿರೀಕ್ಷೆಯಿದೆ.

# ಭಾರತದಲ್ಲಿ ಲಿಸ್ಟ್ ಆಗಲಿರುವ ಅಮೆರಿಕದ ಮೊದಲ ಕಂಪನಿ

ಬೆಂಗಳೂರು

ಅಮೆರಿಕದ ಫೆಡರಲ್ ಸರ್ಕಾರ ಹಾಗೂ ರಾಜ್ಯ, ಸ್ಥಳೀಯ ಮತ್ತು ಶಿಕ್ಷಣ ಸಂಸ್ಥೆಗಳಿಗೆ ಕೃತಕ ಬುದ್ಧಿಮತ್ತೆ ಆಧಾರಿತ ಮಾನವ ಸಂಪನ್ಮೂಲ ಮತ್ತು ತಂತ್ರಜ್ಞಾನ ಪರಿಹಾರಗಳನ್ನು ಒದಗಿಸುವ ಪ್ರಮುಖ ಸಂಸ್ಥೆಯಾದ ಟ್ರೈಫ್ಯಾಕ್ಟಾ ಇಂಕ್, ಗುಜರಾತ್‌ನ ಗಿಫ್ಟ್ ಸಿಟಿ ವಿನಿಮಯ ಕೇಂದ್ರಗಳಲ್ಲಿ ತನ್ನ ಪ್ರಸ್ತಾವಿತ ಆರಂಭಿಕ ಸಾರ್ವಜನಿಕ ಕೊಡುಗೆಗಾಗಿ ಅಂತರರಾಷ್ಟ್ರೀಯ ಹಣಕಾಸು ಸೇವಾ ಕೇಂದ್ರಗಳ ಪ್ರಾಧಿಕಾರಕ್ಕೆ ಕರಡು ಆಫರ್ ದಾಖಲೆಯನ್ನು ಸಲ್ಲಿಸಿದೆ.

ಷೇರು ಮಾರುಕಟ್ಟೆಯಲ್ಲಿ ಲಿಸ್ಟ್ ಆದ ಬಳಿಕ, ಗಿಫ್ಟ್ ಸಿಟಿ ವ್ಯವಸ್ಥೆಯ ಮೂಲಕ ಭಾರತದಲ್ಲಿ ತನ್ನ ಈಕ್ವಿಟಿ ಷೇರುಗಳನ್ನು ಪಟ್ಟಿ ಮಾಡಿಸಿಕೊಳ್ಳುವ ಅಮೆರಿಕದಲ್ಲಿ ಪ್ರಧಾನ ಕಚೇರಿ ಹೊಂದಿರುವ ಮೊದಲ ವಿದೇಶಿ ಕಂಪನಿ ಎಂಬ ಹೆಗ್ಗಳಿಕೆಗೆ ಟ್ರೈಫ್ಯಾಕ್ಟಾ ಪಾತ್ರವಾಗುವ ಸಾಧ್ಯತೆ ಇದೆ.

ಪ್ರಸ್ತಾವಿತ ಐಪಿಓದಲ್ಲಿ ಗರಿಷ್ಠ 1.33 ಕೋಟಿ ಹೊಸ ಈಕ್ವಿಟಿ ಷೇರುಗಳ ಬಿಡುಗಡೆ ಹಾಗೂ ಈಗಿನ ಷೇರುದಾರರಾದ ರತಿಕಾ ತ್ಯಾಗಿ ಅವರಿಂದ ಗರಿಷ್ಠ 30 ಲಕ್ಷ ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆ ಒಳಗೊಂಡಿದೆ.

ಈ ಐಪಿಓ ಪ್ರಕ್ರಿಯೆ ಅಮೆರಿಕನ್ ಡಾಲರ್ ಮೌಲ್ಯದಲ್ಲಿ ನಡೆಯಲಿದ್ದು, ಕಂಪನಿಯ ಈಕ್ವಿಟಿ ಷೇರುಗಳನ್ನು ಎನ್‌ಎಸ್‌ಇ ಅಂತರರಾಷ್ಟ್ರೀಯ ವಿನಿಮಯ ಕೇಂದ್ರ ಹಾಗೂ ಇಂಡಿಯಾ ಅಂತರರಾಷ್ಟ್ರೀಯ ವಿನಿಮಯ ಕೇಂದ್ರಗಳಲ್ಲಿ ಪಟ್ಟಿ ಮಾಡಲು ಪ್ರಸ್ತಾವಿಸಲಾಗಿದೆ.

### ಐಪಿಓಗೆ ಸೆಬಿಗೆ ಕರಡು

# ಪ್ರಸ್ತಾವ ಸಲ್ಲಿಸಿದ ಜೆಪ್ಟೊ ಲಿಮಿಟೆಡ್

ಮುಂಬೈ

ದೇಶದಲ್ಲಿ ವೇಗವಾಗಿ ಬೆಳೆಯುತ್ತಿರುವ ತ್ವರಿತ ವಾಣಿಜ್ಯ ಸಂಸ್ಥೆಯಾದ ಜೆಪ್ಟೊ ಲಿಮಿಟೆಡ್, ಸಾರ್ವಜನಿಕರಿಗೆ ಷೇರು ವಿತರಿಸುವ ಉದ್ದೇಶದಿಂದ ಭಾರತೀಯ ಷೇರು ಮತ್ತು ವಿನಿಮಯ ಮಂಡಳಿಗೆ ಕರಡು ಪ್ರಸ್ತಾವ ಸಲ್ಲಿಸಿದೆ.

ಹಣಕಾಸು ವರ್ಷ 2024ರಿಂದ 2026ರವರೆಗೆ ಗ್ರಾಹಕರ ಬೇಡಿಕೆಯಲ್ಲಿ ವೇಗವಾಗಿ ಬೆಳವಣಿಗೆ ದಾಖಲಿಸಿರುವ ಸಂಸ್ಥೆಯಾಗಿ ಗುರುತಿಸಿಕೊಂಡಿರುವ ಜೆಪ್ಟೊ, ತನ್ನ ಆರಂಭಿಕ ಸಾರ್ವಜನಿಕ ಕೊಡುಗೆಯ ಮೂಲಕ ರೂ.8,010 ಕೋಟಿ ಮೌಲ್ಯದ ಹೊಸ ಈಕ್ವಿಟಿ ಷೇರುಗಳನ್ನು ಬಿಡುಗಡೆ ಮಾಡಲು ಮುಂದಾಗಿದೆ.

ಇದರ ಜೊತೆಗೆ ಪ್ರತಿ ಷೇರಿಗೆ ರೂ.5 ಮುಖಬೆಲೆ ಹೊಂದಿರುವ 11,34,66,566 ಈಕ್ವಿಟಿ ಷೇರುಗಳ ಮಾರಾಟ ಪ್ರಸ್ತಾವವೂ ಒಳಗೊಂಡಿದೆ.

ಹೊಸ ಷೇರು ಬಿಡುಗಡೆ ಮೂಲಕ ಸಂಗ್ರಹವಾಗುವ ಮೊತ್ತವನ್ನು ಪೂರೈಕೆ ಕೇಂದ್ರಗಳ ಜಾಲ ವಿಸ್ತರಣೆ, ಈಗಿರುವ ಪೂರೈಕೆ ಕೇಂದ್ರಗಳ ಗುತ್ತಿಗೆ ವ್ಯವಸ್ಥೆ ಬಲಪಡಿಸುವುದು, ತಂತ್ರಜ್ಞಾನ ಮತ್ತು ಕ್ಲೌಡ್ ಮೂಲಸೌಕರ್ಯ ಅಭಿವೃದ್ಧಿ, ಜೆಪ್ಟೊ ಮಾರುಕಟ್ಟೆ ಸಂಸ್ಥೆಯಲ್ಲಿ ಹೂಡಿಕೆ ಹಾಗೂ ವಿಲೀನ ಮತ್ತು ಸ್ವಾಧೀನ ಪ್ರಕ್ರಿಯೆಗಳ ಮೂಲಕ ವ್ಯವಹಾರ ವಿಸ್ತರಣೆಗೆ ಬಳಸಲಾಗುವುದು ಎಂದು ಕಂಪನಿ ತಿಳಿಸಿದೆ.

ದೇಶದಲ್ಲಿ ತ್ವರಿತ ವಾಣಿಜ್ಯ ಕ್ಷೇತ್ರದಲ್ಲಿ ಹೆಚ್ಚುತ್ತಿರುವ ಸ್ಪರ್ಧೆಯ ನಡುವೆ ಜೆಪ್ಟೊ ಕೈಗೊಂಡಿರುವ ಈ ಐಪಿಓ ಕ್ರಮವು ಮಾರುಕಟ್ಟೆಯಲ್ಲಿ ಮಹತ್ವದ ಬೆಳವಣಿಗೆಯಾಗಿ ಪರಿಗಣಿಸಲಾಗಿದೆ.

# ನೊವಾರ್ಟಿಸ್‌ನ 'ಪ್ಲುವಿಕ್ಟೊ' ಬಿಡುಗಡೆ

ಬೆಂಗಳೂರು

ಭಾರತದಲ್ಲಿ ಕ್ಯಾನ್ಸರ್ ಆರೈಕೆ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲಾಗಿ ನೊವಾರ್ಟಿಸ್ ಇಂಡಿಯಾ ಸಂಸ್ಥೆ 'ಪ್ಲುವಿಕ್ಟೊ' (ಲುಟೇಶಿಯಮ್-177 ವಿಪಿವೋಟೈಡ್ ಟೆಟ್ರಾಕ್ಸೆಟಾನ್) ಎಂಬ ನೂತನ ಚಿಕಿತ್ಸಾ ವಿಧಾನವನ್ನು ಬಿಡುಗಡೆ ಮಾಡಿದೆ. ಪ್ರಾಸ್ಟೇಟ್-ಸ್ಪೆಸಿಫಿಕ್ ಮೆಂಬರೇನ್ ಆಂಟಿಜೆನ್ (ಪಿಎಸ್‌ಎಂಎ)-ಪಾಸಿಟಿವ್ ಪ್ರಾಸ್ಟೇಟ್ ಕ್ಯಾನ್ಸರ್ ಹೊಂದಿರುವ ಅರ್ಹ ರೋಗಿಗಳಿಗಾಗಿ ದೇಶದ ನಿಯಂತ್ರಣ ಪ್ರಾಧಿಕಾರದಿಂದ ಅನುಮೋದನೆ ಪಡೆದ ಮೊದಲ ರೇಡಿಯೊಲಿಗಂಡ್ ಚಿಕಿತ್ಸೆಯಾಗಿದೆ.

ಆರೋಗ್ಯಕರ ಅಂಗಾಂಶಗಳಿಗೆ ಹಾನಿಯನ್ನು ಕಡಿಮೆಗೊಳಿಸುತ್ತಾ, ಪ್ರಾಸ್ಟೇಟ್ ಕ್ಯಾನ್ಸರ್ ಕೋಶಗಳನ್ನು ಅತ್ಯಂತ ನಿಖರವಾಗಿ ಗುರಿಯಾಗಿಸುವಂತೆ ಈ ಚಿಕಿತ್ಸೆಯನ್ನು ವಿನ್ಯಾಸಗೊಳಿಸಲಾಗಿದೆ. ಮೆಟಾಸ್ಟಾಟಿಕ್ ಪ್ರಾಸ್ಟೇಟ್ ಕ್ಯಾನ್ಸರ್‌ಗೆ ಇದು ಹೊಸ ಚಿಕಿತ್ಸಾ ಮಾರ್ಗವನ್ನು ಪರಿಚಯಿಸಿದ್ದು, ದೇಶಾದ್ಯಂತ ರೋಗಿಗಳು ಮತ್ತು ಅವರ ಕುಟುಂಬಗಳ ಮೇಲೆ ಇರುವ ದೈಹಿಕ ಹಾಗೂ ಭಾವನಾತ್ಮಕ ಒತ್ತಡವನ್ನು ತಗ್ಗಿಸುವ ಭರವಸೆ ಮೂಡಿಸಿದೆ.

ಭಾರತದಲ್ಲಿ ಪುರುಷರನ್ನು ಹೆಚ್ಚು ಕಾಡುತ್ತಿರುವ ಕ್ಯಾನ್ಸರ್‌ಗಳಲ್ಲಿ ಪ್ರಾಸ್ಟೇಟ್ ಕ್ಯಾನ್ಸರ್ ಪ್ರಮುಖವಾಗಿದ್ದು, ನಗರ ಪ್ರದೇಶಗಳಲ್ಲಿ ಕಂಡುಬರುವ ಮೊದಲ ಮೂರು ಕ್ಯಾನ್ಸರ್‌ಗಳಲ್ಲಿ ಇದೂ ಒಂದು.

ಪ್ರತಿ ವರ್ಷ ಸುಮಾರು 2.5 ಲಕ್ಷ ಹೊಸ ಪ್ರಕರಣಗಳು ವರದಿಯಾಗುತ್ತಿವೆ. ಆತಂಕಕಾರಿ ಅಂಶವೆಂದರೆ, ಸುಮಾರು ಶೇಕಡ 50ರಷ್ಟು ರೋಗಿಗಳು ಕ್ಯಾನ್ಸರ್ ದೇಹದ ಇತರ ಭಾಗಗಳಿಗೆ ಹರಡಿದ ಬಳಿಕವೇ ಪತ್ತೆಯಾಗುತ್ತಿದ್ದಾರೆ. ಈ ಹಂತದಲ್ಲಿ ಚಿಕಿತ್ಸೆಯ ನಿರ್ವಹಣೆ ಹೆಚ್ಚು ಸಂಕೀರ್ಣವಾಗುತ್ತದೆ.

ನೊವಾರ್ಟಿಸ್‌ನ ಏಷ್ಯಾ-ಪೆಸಿಫಿಕ್, ಮಧ್ಯಪ್ರಾಚ್ಯ ಮತ್ತು ಆಫ್ರಿಕಾ ವಿಭಾಗದ ಮುಖ್ಯಸ್ಥೆ ಜುಡಿತ್ ಲವ್ ಮಾತನಾಡಿ, "ಭಾರತವು ನೊವಾರ್ಟಿಸ್‌ಗೆ ಅತ್ಯಂತ ಪ್ರಮುಖ ಮಾರುಕಟ್ಟೆಯಾಗಿದೆ. ನಿಖರ ಆಂಕೊಲಾಜಿ ಮತ್ತು ಸುಧಾರಿತ ಕ್ಯಾನ್ಸರ್ ಚಿಕಿತ್ಸೆಗಳು ಭಾರತದಲ್ಲಿ ವೇಗವಾಗಿ ಬೆಳೆಯುತ್ತಿವೆ. 'ಪ್ಲುವಿಕ್ಟೊ' ಬಿಡುಗಡೆ ರೋಗಿಗಳಿಗೆ ಜಾಗತಿಕ ಮಟ್ಟದ ಚಿಕಿತ್ಸೆಯನ್ನು ಹತ್ತಿರಕ್ಕೆ ತರುವ ಮಹತ್ವದ ಹೆಜ್ಜೆಯಾಗಿದೆ.

ಭಾರತದ ಬೆಳೆಯುತ್ತಿರುವ ಅಣು ವೈದ್ಯಕೀಯ ಮೂಲಸೌಕರ್ಯದ ಮೂಲಕ ಈ ಚಿಕಿತ್ಸೆಯನ್ನು ಹೆಚ್ಚಿನ ಜನರಿಗೆ ತಲುಪಿಸಲು ನಾವು ಬದ್ಧರಾಗಿದ್ದೇವೆ" ಎಂದು ಹೇಳಿದರು.

# ವಿದ್ಯುತ್ ಖಾಸಗೀಕರಣಕ್ಕೆ ವಿವಿಧ ಸಂಘಟನೆಗಳಿಂದ ತೀವ್ರ ವಿರೋಧ

ಬೆಂಗಳೂರು

ರಾಜ್ಯದಲ್ಲಿ ವಿದ್ಯುತ್ ವಲಯವನ್ನು ಖಾಸಗೀಕರಣಗೊಳಿಸುವ ಹಾಗೂ ಟಾಟಾ ಪವರ್ ಕಂಪೆನಿಗೆ ವಿದ್ಯುತ್ ವಿತರಣೆಯ ಜವಾಬ್ದಾರಿ ನೀಡುವ ಯಾವುದೇ ಪ್ರಯತ್ನವನ್ನು ಕೈಬಿಡಬೇಕು ಎಂದು ರೈತ ಸಂಘಟನೆಗಳು, ಕನ್ನಡಪರ ಸಂಘಟನೆಗಳು, ಅಪಾರ್ಟ್‌ಮೆಂಟ್ ಮಾಲೀಕರ ಸಂಘಗಳು ಹಾಗೂ ರಾಜ್ಯ ವಿದ್ಯುತ್ ಗ್ರಾಹಕರ ಸಂಘದ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.

ನಗರದ ರೇಸ್ ಕೋರ್ಸ್ ರಸ್ತೆಯ ಸರ್ ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ನಡೆದ ರಾಜ್ಯಮಟ್ಟದ ಸಮಾವೇಶದಲ್ಲಿ ವಿವಿಧ ಸಂಘಟನೆಗಳ ಮುಖಂಡರು ಸರ್ಕಾರದ ಕ್ರಮದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ನೌಕರರು ಮತ್ತು ಅಧಿಕಾರಿಗಳ ಒಕ್ಕೂಟದ ಅಧ್ಯಕ್ಷ ಕೆ. ಬಲರಾಂ, "ರಾಜ್ಯದಲ್ಲಿ ವಿದ್ಯುತ್ ಖಾಸಗೀಕರಣ ಮಾಡಬಾರದು ಹಾಗೂ ವಿದ್ಯುತ್ ವಿತರಣೆಯನ್ನು ಟಾಟಾ ಪವರ್ ಕಂಪೆನಿಗೆ ನೀಡಬಾರದು ಎಂದು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ಮನವಿ ಸಲ್ಲಿಸಲಾಗುವುದು" ಎಂದು ಹೇಳಿದರು.




"ಖಾಸಗೀಕರಣವಾದರೆ ರೈತರು ಹಾಗೂ ಸಾಮಾನ್ಯ ಜನರಿಗೆ ಭಾರೀ ಹೊರೆ ಬೀಳಲಿದೆ. ಕಳೆದ 49 ವರ್ಷಗಳಿಂದ ಯಾವುದೇ ಮುಷ್ಕರವಿಲ್ಲದೆ ನಾವು ವಿದ್ಯುತ್ ವಲಯದಲ್ಲಿ ಸೇವೆ ಸಲ್ಲಿಸುತ್ತಿದ್ದೇವೆ. ರಾಜ್ಯದ ಬಹುತೇಕ ಶಾಸಕರು ಸಹ ಖಾಸಗೀಕರಣ ವಿರೋಧಿಸಿ ನಮ್ಮ ಹೋರಾಟಕ್ಕೆ ಬೆಂಬಲ ನೀಡಿದ್ದಾರೆ" ಎಂದರು.

ಒಡಿಶಾದಲ್ಲಿ ಪ್ರವಾಹದ ಸಂದರ್ಭದಲ್ಲಿ ವಿದ್ಯುತ್ ಸಂಪರ್ಕ ಅಸ್ತವ್ಯಸ್ತವಾದಾಗ ಕರ್ನಾಟಕದ ಸಾವಿರಾರು ಸಿಬ್ಬಂದಿ ತೆರಳಿ ಸೇವೆ ಸಲ್ಲಿಸಿದ್ದರು. ರಾಜ್ಯದಲ್ಲಿ ನೆರೆ ಸಂದರ್ಭಗಳಲ್ಲಿಯೂ ನೌಕರರು ಅಹೋರಾತ್ರಿ ದುಡಿದು ವಿದ್ಯುತ್ ವ್ಯವಸ್ಥೆಯನ್ನು ಪುನರ್ ಸ್ಥಾಪಿಸಿದ್ದಾರೆ ಎಂದು ಅವರು ಹೇಳಿದರು.

ಖಾಸಗೀಕರಣದಿಂದ ಕೃಷಿಗೆ ಪೂರೈಸುವ ವಿದ್ಯುತ್ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಇದ್ದು, ಇದು ರೈತರ ಬದುಕು ಹಾಗೂ ಕೃಷಿ ಉತ್ಪಾದನೆ ಮೇಲೆ ದುಷ್ಪರಿಣಾಮ ಬೀರುವ ಆತಂಕವಿದೆ ಎಂದು ಎಚ್ಚರಿಸಿದರು.

# ನೋಟ್ ಬುಕ್‌ಗಳ ವಿತರಣೆ

ಕೋಲಾರ

ಸರ್ಕಾರಿ ಶಾಲೆಯ ಮಕ್ಕಳಿಗೆ ನೋಟ್ ಪುಸ್ತಕಗಳನ್ನು ವಿತರಿಸುವ ಮೂಲಕ ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಅವರ ಹುಟ್ಟುಹಬ್ಬವನ್ನು ಅವರ ಅಭಿಮಾನಿಗಳು ಸರಳವಾಗಿ ಆಚರಿಸಿದರು. ಕೊತ್ತೂರು ಮಂಜುನಾಥ್ ಅಭಿಮಾನಿ ಬಳಗದ ಹಾಗೂ ಮಾಜಿ ತಾಲ್ಲೂಕು ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ನವೀನ್ ಗೌಡ ನೇತೃತ್ವದಲ್ಲಿ ಕೋಲಾರ ತಾಲೂಕಿನ ಗುಟ್ಟಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ಶಾಸಕ ಕೊತ್ತೂರು ಮಂಜುನಾಥ್ ಜನ್ಮದಿನದ ಪ್ರಯುಕ್ತ ನೋಟ್ ಬುಕ್ ಗಳನ್ನು ವಿತರಣೆ ಮಾಡಲಾಯಿತು.

ಮಕ್ಕಳಿಗೆ ಉಚಿತವಾಗಿ ನೋಟ್ ಪುಸ್ತಕಗಳನ್ನು ವಿತರಿಸಿ ಮಾತನಾಡಿದ ನವೀನ್ ಗೌಡ ಶಾಸಕರು ಸಾವಿರಾರು ಕೋಟಿ ಅನುದಾನ ತಂದು ಕ್ಷೇತ್ರ ಅಭಿವೃದ್ಧಿ ಮಾಡುತ್ತಿದ್ದಾರೆ. ಗ್ರಾಮೀಣ ಭಾಗದ ರಸ್ತೆಗಳನ್ನು ಶಾಸಕರು ಅಭಿವೃದ್ಧಿ ಮಾಡುತ್ತಿದ್ದು ತಾಲೂಕಿನ ಪ್ರತಿಯೊಂದು ಗ್ರಾಮಕ್ಕೂ ರಸ್ತೆ ಕಲ್ಪಿಸಲು ಯೋಜನೆಗಳನ್ನು ರೂಪಿಸುತ್ತಿದ್ದಾರೆ.

ಗ್ರಾಮೀಣ ಭಾಗದ ಮೂಲಭೂತ ಸೌಕರ್ಯಗಳ ಕಲ್ಪಿಸಲು ಆದ್ಯತೆ ನೀಡಿರುವ ಶಾಸಕರಿಗೆ ಸಚಿವಸ್ಥಾನ ಸಿಕ್ಕರೆ ಕೋಲಾರ ತಾಲ್ಲೂಕು ಅಲ್ಲದೇ ಜಿಲ್ಲೆಯ ಅಭಿವೃದ್ಧಿಗೆ ಸಹಾಯವಾಗಲಿದೆ ಎಂದ್ರು. ಪ್ರತಿವರ್ಷದಂತೆ ಈ ವರ್ಷವೂ ಶಾಸಕರ ಹುಟ್ಟು ಹಬ್ಬದ ಪ್ರಯುಕ್ತ ಹಲವು ಸಮಾಜಮುಖಿ ಕಾರ್ಯಗಳನ್ನು ಕೈಗೊಂಡಿದ್ದು ಗುಟ್ಟಹಳ್ಳಿ ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್ ಪುಸ್ತಕಗಳನ್ನು ವಿತರಿಸಲಾಗುತ್ತಿದೆ ಎಂದು ನವೀನ್ ಗೌಡ ಹೇಳಿದರು.

ಶಾಸಕ ಕೊತ್ತೂರು ಮಂಜುನಾಥ್ ಅವರಿಗೆ ಸಚಿವಸ್ಥಾನ ಸಿಗಲೇಂದು ಶಾಲೆ ಮಕ್ಕಳು ಶುಭ ಹಾರೈಸಿದರು. ಸಂಧರ್ಭದಲ್ಲಿ ಗುಟ್ಟಹಳ್ಳಿ ಹರೀಶ್, ಸತೀಶ್ ಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

### ಜಿಬಿಎ ಮತ್ತು ಪೊಲೀಸ್ ಅಧಿಕಾರಿಗಳ ಕಿರುಕುಳ ಖಂಡಿಸಿ ಜೂ.18ರಂದು

# ಫ್ರೀಡಂಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ




ಬೆಂಗಳೂರು

ಜಿಬಿಎ ಹಾಗೂ ಪೊಲೀಸ್ ಅಧಿಕಾರಿಗಳಿಂದ ನಡೆಯುತ್ತಿರುವ ನಿತ್ಯ ಕಿರುಕುಳವನ್ನು ಖಂಡಿಸಿ ಜೂನ್ 18ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಈ ಕುರಿತು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಕಾರ್ಮಿಕ ಪರಿಷತ್ತಿನ ರಾಜ್ಯಾಧ್ಯಕ್ಷ ಡಾ. ರವಿಶೆಟ್ಟಿ ಬೈಂದೂರ್, ಸಣ್ಣ ಉದ್ದಿಮೆದಾರರ 27 ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಬೆಳಗ್ಗೆ 10 ಗಂಟೆಯಿಂದ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು.

ಸಣ್ಣ ವ್ಯಾಪಾರಿಗಳ ಮೇಲೆ ನಡೆಯುತ್ತಿರುವ ದಂಡದ ಹಾವಳಿ, ಅಧಿಕಾರಿಗಳ ಕಿರುಕುಳ, ಪರವಾನಗಿ ಸಮಸ್ಯೆಗಳು ಹಾಗೂ ಜೀವನೋಪಾಯಕ್ಕೆ ಧಕ್ಕೆಯಾಗುತ್ತಿರುವ ಹಲವು ವಿಷಯಗಳ ಕುರಿತು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಸಣ್ಣ ವ್ಯಾಪಾರಿಗಳು ಮತ್ತು ಉದ್ದಿಮೆದಾರರು ಅನಗತ್ಯ ಕಿರುಕುಳಕ್ಕೆ ಒಳಗಾಗುತ್ತಿದ್ದು, ಅವರ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಸರ್ಕಾರ ಈ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಾಮಾಜಿಕ ಹೋರಾಟಗಾರ ಗಂಡಸಿ ಸದಾನಂದ ಸ್ವಾಮಿ, ಮಹಿಳಾ ಅಧ್ಯಕ್ಷೆ ಪೂಜಾ ಶೆಟ್ಟಿ, ಶೈಲೇಶ್ ಪೂಜಾರಿ, ಸುರೇಂದ್ರ ಶೆಟ್ಟಿ ಸೇರಿದಂತೆ ಅನೇಕ ಬೇಕರಿ ಮಾಲೀಕರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಪೂರೈಕೆ ಸರಪಳಿ ಆರೋಗ್ಯ ಭದ್ರತೆ ಮತ್ತು ಸಾರ್ವಜನಿಕ ಕಲ್ಯಾಣದ ಮೂಲಾಧಾರ

ಅಹಮದಾಬಾದ್

ಭಾರತದ ಆರ್ಥಿಕ ಬೆಳವಣಿಗೆ, ಆರೋಗ್ಯ ಭದ್ರತೆ, ತುರ್ತು ಪರಿಸ್ಥಿತಿ ಸಿದ್ಧತೆ ಹಾಗೂ ಸಾರ್ವಜನಿಕ ಕಲ್ಯಾಣದ ಭವಿಷ್ಯವನ್ನು ಬಲಿಷ್ಠ ಪೂರೈಕೆ ಸರಪಳಿ ವ್ಯವಸ್ಥೆಯೇ ನಿರ್ಧರಿಸಲಿದೆ ಎಂದು ಗುಜರಾತ್ ಆರೋಗ್ಯ, ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಪ್ರಫುಲ್ ಪನ್ಶೇರಿಯಾ ಹೇಳಿದ್ದಾರೆ.



ಅಹಮದಾಬಾದ್‌ನ ದಿ ಲೀಲಾ ಹೋಟೆಲ್‌ನಲ್ಲಿ ಬ್ಲೂ ಓಷನ್ ಕಾರ್ಪೊರೇಶನ್ ಆಯೋಜಿಸಿದ್ದ ಅಂತರರಾಷ್ಟ್ರೀಯ ಪ್ರೊಕ್ಯೂರ್ಮೆಂಟ್ ಮತ್ತು ಸಪ್ಲೈ ಚೈನ್ ಸಮ್ಮೇಳನ (ಖಕಖಅ 2026) ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಪೂರೈಕೆ ಸರಪಳಿ ಇನ್ನು ಕೇವಲ ವ್ಯವಹಾರಿಕ ದಕ್ಷತೆಯ ವಿಷಯವಲ್ಲ; ಅದು ಜನರ ಜೀವ ರಕ್ಷಣೆ, ಸಾರ್ವಜನಿಕ ವ್ಯವಸ್ಥೆಗಳ ಬಲವರ್ಧನೆ ಹಾಗೂ ದೀರ್ಘಕಾಲೀನ ಸ್ಥೈರ್ಯ ನಿರ್ಮಾಣದ ಕೇಂದ್ರಬಿಂದುವಾಗಿದೆ ಎಂದು ಹೇಳಿದರು. ವಿಶ್ವದ ವಿವಿಧ ದೇಶಗಳಿಂದ ಆಗಮಿಸಿದ್ದ 500ಕ್ಕೂ ಹೆಚ್ಚು ತಜ್ಞರು ಮತ್ತು ಉದ್ಯಮ ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಔಷಧಗಳು, ಲಸಿಕೆಗಳು, ವೈದ್ಯಕೀಯ ಸಾಧನಗಳು ಹಾಗೂ ತುರ್ತು ಸರಬರಾಜುಗಳು ಸಂಕಷ್ಟದ ಸಂದರ್ಭದಲ್ಲೂ ವೇಗವಾಗಿ ಮತ್ತು ವಿಶ್ವಾಸಾರ್ಹವಾಗಿ ಜನರಿಗೆ ತಲುಪುವ ವ್ಯವಸ್ಥೆ ಅಗತ್ಯವೆಂದರು.

ಸಚಿವರು ಒತ್ತಿ ಹೇಳಿದರು. ಔಷಧೋದ್ಯಮದ ಪೂರೈಕೆ ಸರಪಳಿ, ಕೋಲ್ಡ್ ಚೈನ್ ಮೂಲಸೌಕರ್ಯ, ವೈದ್ಯಕೀಯ ಲಾಜಿಸ್ಟಿಕ್ಸ್ ಹಾಗೂ ಖರೀದಿ ವ್ಯವಸ್ಥೆಗಳ ಮಹತ್ವವನ್ನು ಅವರು ವಿವರಿಸಿದರು.

ಭಾರತವು ಜಾಗತಿಕ ಉತ್ಪಾದನೆ ಮತ್ತು ಪೂರೈಕೆ ಸರಪಳಿ ಕೇಂದ್ರವಾಗಿ ಹೊರಹೊಮ್ಮುತ್ತಿರುವ ಸಂದರ್ಭದಲ್ಲಿ, ಉತ್ಪಾದನೆ, ಔಷಧೋದ್ಯಮ, ಬಂದರುಗಳು ಮತ್ತು ಲಾಜಿಸ್ಟಿಕ್ಸ್ ಕ್ಷೇತ್ರಗಳಲ್ಲಿ ಗುಜರಾತ್ ಮಹತ್ವದ ಪಾತ್ರ ವಹಿಸುತ್ತಿದೆ ಎಂಬ ಅಭಿಪ್ರಾಯ ಸಮ್ಮೇಳನದಲ್ಲಿ ವ್ಯಕ್ತವಾಯಿತು.

ಸಮ್ಮೇಳನದಲ್ಲಿ ಬ್ಲೂ ಓಷನ್ ಕಾರ್ಪೊರೇಶನ್ ಮಂಡಳಿಯ ಸದಸ್ಯ ಹಾಗೂ ಭಾರತದ ಮಾಜಿ ಕ್ರಿಕೆಟ್ ನಾಯಕ ಸೌರವ್ ಗಂಗೂಲಿ ಮಾತನಾಡಿ, ನಾಯಕತ್ವ, ಸ್ಥೈರ್ಯ ಮತ್ತು ವೃತ್ತಿಪರ ಸಾಮರ್ಥ್ಯ ವೃದ್ಧಿಯ ಅಗತ್ಯವನ್ನು ಒತ್ತಿಹೇಳಿದರು. ಭಾರತದ ಅಭಿವೃದ್ಧಿ ಪಯಣದಲ್ಲಿ ನುರಿತ ಮಾನವ ಸಂಪನ್ಮೂಲದ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ಅವರು ಹೇಳಿದರು.

# ಎರಡನೇ ಬಾರಿ 'ಅತ್ಯುತ್ತಮ ಹಣಕಾಸು ತಂತ್ರಜ್ಞಾನ ವಿಮಾ ಪ್ರಶಸ್ತಿ'

ಬೆಂಗಳೂರು

ಭಾರತದ ಪ್ರಮುಖ ಡಿಜಿಟಲ್ ಪೂರ್ಣ-ಸೇವಾ ವಿಮಾ ಸಂಸ್ಥೆಗಳಲ್ಲಿ ಒಂದಾದ ಗೋ ಡಿಜಿಟ್ ಜನರಲ್ ಇನ್ಶೂರೆನ್ಸ್ ಲಿಮಿಟೆಡ್ (ಡಿಜಿಟ್ ವಿಮಾ ಸಂಸ್ಥೆ) ಪ್ರತಿಷ್ಠಿತ ಅತ್ಯುತ್ತಮ ಬ್ಯಾಂಕುಗಳ ಪ್ರಶಸ್ತಿ 2026ರಲ್ಲಿ ಸತತ ಎರಡನೇ ಬಾರಿಗೆ 'ಅತ್ಯುತ್ತಮ ಹಣಕಾಸು ತಂತ್ರಜ್ಞಾನ ವಿಮಾ ಪ್ರಶಸ್ತಿ' ಪಡೆದು ಮತ್ತೊಮ್ಮೆ ತನ್ನ ಸಾಧನೆಯನ್ನು ಪುನರಾವರ್ತಿಸಿದೆ.




ನವದೆಹಲಿದಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಡಿಜಿಟ್ ವಿಮಾ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಸ್ಲೀನ್ ಕೊಹ್ಲಿ ಅವರಿಗೆ ಪ್ರಶಸ್ತಿಯನ್ನು ಪ್ರದಾನಿಸಿದರು.

ವಿಮಾ ಕ್ಷೇತ್ರದಲ್ಲಿ ಡಿಜಿಟಲ್ ತಂತ್ರಜ್ಞಾನ ಅಳವಡಿಕೆ, ಗ್ರಾಹಕ ಸ್ನೇಹಿ ಸೇವೆಗಳು ಹಾಗೂ ನವೀನ ಉತ್ಪನ್ನಗಳ ಮೂಲಕ ವಿಮಾ ಸೇವೆಗಳನ್ನು ಹೆಚ್ಚು ಸುಲಭ ಮತ್ತು ಸುಗಮಗೊಳಿಸಿರುವುದಕ್ಕಾಗಿ ಡಿಜಿಟ್ ವಿಮಾ ಸಂಸ್ಥೆಗೆ ಈ ಗೌರವ ಲಭಿಸಿದೆ.

ಸಂಸ್ಥೆಯು ತಂತ್ರಜ್ಞಾನ ಆಧಾರಿತ ಪರಿಹಾರಗಳ ಮೂಲಕ ವಿಮಾ ಖರೀದಿ, ಪರಿಹಾರ ಅರ್ಜಿ ಪ್ರಕ್ರಿಯೆ ಹಾಗೂ ಗ್ರಾಹಕ ಸೇವೆಗಳನ್ನು ಸರಳೀಕರಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ.

# ಸಂಭ್ರಮದಿಂದ ಜರುಗಿದ ಬೃಹತ್ 'ಪ್ರತಿಭಾ ಪುರಸ್ಕಾರ'

ಬೆಂಗಳೂರು

ಭಗವಾನ್ ಬುದ್ಧ, ಜಗಜ್ಯೋತಿ ಬಸವಣ್ಣ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯ ಅಂಗವಾಗಿ ಮೂಲನಿವಾಸಿ ಅಂಬೇಡ್ಕರ್ ಸಂಘ (ರಿ.) ವತಿಯಿಂದ ಇಂದಿರಾನಗರ ಕ್ಲಬ್ನ ಎಸಿ ಸಭಾಂಗಣದಲ್ಲಿ ಭಾನುವಾರ ಬೃಹತ್ "ಪ್ರತಿಭಾ ಪುರಸ್ಕಾರ-2026" ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಯೋಜಿಸಲಾಯಿತು.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆಗೈದ ನೂರಾರು ವಿದ್ಯಾರ್ಥಿಗಳಿಗೆ ಬೆಳ್ಳಿ ನಾಣ್ಯ ನೀಡಿ ಗೌರವಿಸಲಾಯಿತು. ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಪ್ರದಾನ ಮಾಡಿ ಸನ್ಮಾನಿಸಲಾಯಿತು. ಪರಿಸರ ಜಾಗೃತಿಯ ಅಂಗವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕುಟುಂಬಗಳಿಗೆ ಉಚಿತವಾಗಿ ಗಿಡಗಳನ್ನು ವಿತರಿಸಲಾಯಿತು.




ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಹಿರಿಯ ಐಪಿಎಸ್ ಅಧಿಕಾರಿ ಹಾಗೂ ಇಂದಿರಾನಗರ ಕ್ಲಬ್ ಅಧ್ಯಕ್ಷ ಬಿ.ಎನ್.ಎಸ್. ರೆಡ್ಡಿ, ಎಲೆಕ್ಟ್ರಾನಿಕ್ ಸಿಟಿ ವಿಭಾಗದ ಡಿಸಿಪಿ ನಾರಾಯಣ್ ಎಂ., ಹಲಸೂರು ಉಪವಿಭಾಗದ ಎಸಿಪಿ ರಂಗಪ್ಪ ಸೇರಿದಂತೆ ಹಲವು ಗಣ್ಯರು ವಿದ್ಯಾರ್ಥಿಗಳಿಗೆ ಶಿಕ್ಷಣದ ಮಹತ್ವ ಹಾಗೂ ಜೀವನದಲ್ಲಿ ಸಾಧನೆಯ ಕುರಿತು ಮಾರ್ಗದರ್ಶನ ನೀಡಿದರು.

ಮೂಲನಿವಾಸಿ ಅಂಬೇಡ್ಕರ್ ಸಂಘದ ರಾಜ್ಯ ಸಂಚಾಲಕ ಮುನಿಮಾರಪ್ಪ, ರಾಜ್ಯ ಸಂಘಟನಾ ಸಂಚಾಲಕ ಜೈಭೀಮ್ ಶ್ರೀನಿವಾಸ್ ಹಾಗೂ ಧನರಾಜ್ ನಾಗವಂಶಿ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ಮಹಿಳಾ ಘಟಕದ ರಾಜ್ಯ ಸಂಚಾಲಕಿ ಭಾಗ್ಯ ಸೇರಿದಂತೆ ಸಂಘದ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಶಿಕ್ಷಣ, ಪ್ರತಿಭಾ ಪ್ರೋತ್ಸಾಹ ಹಾಗೂ ಪರಿಸರ ಕಾಳಜಿಯನ್ನು ಒಟ್ಟಿಗೆ ಸಾರಿದ ಈ ಕಾರ್ಯಕ್ರಮ ಸಾರ್ವಜನಿಕರು ಹಾಗೂ ಪೋಷಕರಿಂದ ಮೆಚ್ಚುಗೆಗೆ ಪಾತ್ರವಾಯಿತು.

# ಡಾ.ಎಂ.ಚಂದ್ರಶೇಖರ್‌ಗೆ 25ನೇ ವರ್ಷದ ಬೆಳ್ಳಿ ಸಂಭ್ರಮ



ಕೋಲಾರ

ಡಾ.ಬಿ.ಆರ್ ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತ ಹಾಗೂ ಹಿರಿಯ ದಲಿತ ಮುಖಂಡ ಡಾ ಎಂ ಚಂದ್ರಶೇಖರ್ ರವರ ಸಾಧನೆಯ 25 ನೇ ವರ್ಷದ ಬೆಳ್ಳಿ ಸಂಭ್ರಮವನ್ನು ಜೂನ್ 17 ರಂದು ದಲಿತ ಸಂಘಟನೆಗಳ ಸಂಯುಕ್ತ ರಂಗದ ವತಿಯಿಂದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಸನ್ಮಾನ ಕಾರ್ಯಕ್ರಮ ಹಮ್ಮಿಕೊಂಡಿದ್ದು ಜಿಲ್ಲೆಯ ದಲಿತಪರ ಸಂಘಟನಗಳ ಮುಖಂಡರು ಕಾರ್ಯಕರ್ತರು ಹಿತೈಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಘಟನೆಯ ಅಧ್ಯಕ್ಷ ಡಿಪಿಎಸ್ ಮುನಿರಾಜು ಮನವಿ ಮಾಡಿದ್ದಾರೆ

ನಗರದ ನಚಿಕೇತನ ನಿಲಯದಲ್ಲಿ ಶನಿವಾರ ಕಾರ್ಯಕ್ರಮ ಕುರಿತು ವಿವಿಧ ದಲಿತಪರ ಸಂಘಟನೆಗಳ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಡಾ.ಎಂ ಚಂದ್ರಶೇಖರ್ ಸುಮಾರು 60 ವರ್ಷಗಳಿಂದ ದಲಿತ ಜನಾಂಗಗಳ ಏಳಿಗೆಗಾಗಿ ಮತ್ತು ರಾಷ್ಟದ ಸರ್ವತೋಮುಖ ಅಭಿವೃದ್ಧಿಗಾಗಿ ದುಡಿದಿದ್ದಾರೆ ಇವರ ಸೇವೆಯನ್ನು ಗುರುತಿಸಿ ಅನೇಕ ಪ್ರಶಸ್ತಿಗಳನ್ನು ನೀಡಿ ಗೌರವಿಸಿದ್ದಾರೆ ಅವರ ಸಾಧನೆಯ ಭಾಗವಾಗಿ 25 ನೆಯ ವರ್ಷದ ಬೆಳ್ಳಿ ಸಂಭ್ರಮ ಸಮಾರಂಭವು ಇದೇ ಜೂ17 ರಂದು ಟಿ ಚೆನ್ನಯ್ಯ ರಂಗಮಂದಿರದಲ್ಲಿ ಏರ್ಪಡಿಸಲಾಗಿದ್ದು ಕಾರ್ಯಕ್ರಮದಲ್ಲಿ ಭಾಗವಹಿಸಿ ಗೌರವ ಸೂಚಿಸಬೇಕಾಗಿದೆ ಎಂದು ತಿಳಿಸಿದರು.

ಪೂರ್ವಭಾವಿ ಸಭೆಯಲ್ಲಿ ದಮನಿತರ ಸೇವಾ ಸಮಿತಿ ಅಧ್ಯಕ್ಷ ಮೇಡಿಹಾಳ ಮುನಿಅಂಜಿನಪ್ಪ ಮಾತನಾಡಿ ಕಾರ್ಯಕ್ರಮದ ಭಾಗವಾಗಿ ಜೂ.17 ರಂದು ಬೆಳಗ್ಗೆ1:30 ಕ್ಕೆ ನಗರದ ಬಂಗಾರಪೇಟೆ ವೃತ್ತದಿಂದ ಬೆಳ್ಳಿ ರಥದಲ್ಲಿ ಚಂದ್ರಶೇಖರ್ ಅವರನ್ನು ಮೆರವಣಿಗೆ ಮೂಲಕ ರಂಗಮಂದಿರಕ್ಕೆ ಕರೆತರಲಾಗುತ್ತದೆ ಕಾರ್ಯಕ್ರಮದ ಉದ್ಘಾಟನೆಯನ್ನು ಶಾಸಕ ಕೊತ್ತೂರು ಮಂಜುನಾಥ್, ಮುಖ್ಯ ಅತಿಥಿಗಳಾಗಿ ಎಂಎಲ್ಸಿ ಎಂ.ಎಲ್ ಅನಿಲ್ ಕುಮಾರ್, ಜಿಲ್ಲಾಧಿಕಾರಿ ಎಂ.ಆರ್ ರವಿ, ಜಿಪಂ ಸಿಇಒ ಪ್ರವೀಣ್ ಬಿ.ಬಾಗೇವಾಡಿ, ಎಸ್ಪಿ ಕನ್ನಿಕಾ ಸಿಕ್ರಿವಾಲ, ಸೇರಿದಂತೆ ಅನೇಕ ಗಣ್ಣರು ಭಾಗವಹಿಸಲಿದ್ದು ನಿವೃತ್ತ ಐಎಎಸ್ ಅಧಿಕಾರಿ ಡಿ.ತಂಗರಾಜ್ ಅಧ್ಯಕ್ಷತೆ ವಹಿಸಲಿದ್ದು ಕಾರ್ಯಕ್ರಮದಲ್ಲಿ ಎಲ್ಲಾ ದಲಿತ ಸಮುದಾಯದ ಮುಖಂಡರು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು

ಸಭೆಯಲ್ಲಿ ವಿವಿಧ ದಲಿತಪರ ಸಂಘಟನೆಗಳ ಮುಖಂಡರಾದ ಎಂ.ಚಂದ್ರಶೇಖರ್, ಸಾಹುಕಾರ್ ಶಂಕರಪ್ಪ, ಖಾದ್ರಪುರ ಬಾಬು, ಸೂಲೂರು ಅಂಜಿನಪ್ಪ, ಮಂಜುಳಾ, ವೆಂಕಟಾಚಲಪತಿ, ಜಮ್ಮನಹಳ್ಳಿ ಕೃಷ್ಣ, ಗಾಂಧಿನಗರ ರಾಜಕುಮಾರ್, ಕೆಇಬಿ ಚಂದ್ರು, ಹೂಹಳ್ಳಿ ನಾಗೇಶ್, ರಮೇಶ್, ಮಂಜುನಾಥ್, ಯುವರಾಜ್, ಗಿರಿಜಾ, ಶಿವಣ್ಣ, ಡಿ.ಎಂ ಮುನಿರಾಜು, ಮೋಚಿಪಾಳ್ಯ ನಾಗೇಶ್, ಮತ್ತಿಕುಂಟೆ ಕೃಷ್ಣ, ಹರಳಕುಂಟೆ ರಾಜು, ಮುಂತಾದ ದಲಿತ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

# ಧರ್ಮಸ್ಥಳ ಯೋಜನೆಯಿಂದ ರೂ.30 ಸಾವಿರ ನೆರವು

ತಿಪಟೂರು

ತಾಲ್ಲೂಕಿನ ಬಜಗೂರು ವಲಯದ ಮಾಟನಹಳ್ಳಿ ಗ್ರಾಮದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸದಸ್ಯರಾದ ವಿಜಯಲಕ್ಷ್ಮಿ ಹಾಗೂ ರಾಧಾಮಣಿ ಅವರ ಮನೆಗಳಲ್ಲಿ ಸಂಭವಿಸಿದ ಸಿಲಿಂಡರ್ ಸ್ಫೋಟದಿಂದ ಅಪಾರ ಪ್ರಮಾಣದ ಆರ್ಥಿಕ ನಷ್ಟ ಉಂಟಾಗಿದ್ದು, ಸಂತ್ರಸ್ತ ಕುಟುಂಬಗಳಿಗೆ ಯೋಜನೆಯ ವತಿಯಿಂದ ಆರ್ಥಿಕ ನೆರವು ನೀಡಲಾಗಿದೆ.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಾರ್ಗದರ್ಶಕರಾದ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ಯೋಜನೆಯ ವತಿಯಿಂದ ಇಬ್ಬರು ಸದಸ್ಯರಿಗೆ ಒಟ್ಟು 30,000 ಅನುದಾನ ಮಂಜೂರು ಮಾಡಲಾಗಿದೆ.

ಯೋಜನೆಯ ಅನುದಾನದ ಚೆಕ್‌ಗಳನ್ನು ಯೋಜನಾಧಿಕಾರಿ ಸುರೇಶ್ ಅವರು ಫಲಾನುಭವಿಗಳಿಗೆ ವಿತರಿಸಿದರು. ಈ ನೆರವು ಸಂತ್ರಸ್ತ ಕುಟುಂಬಗಳಿಗೆ ಸಂಕಷ್ಟದ ಸಂದರ್ಭದಲ್ಲಿ ಸಹಾಯವಾಗಲಿದೆ ಎಂದು



ಅವರು ತಿಳಿಸಿದರು.

ಚೆಕ್ ವಿತರಣಾ ಕಾರ್ಯಕ್ರಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿಗಳು, ಗ್ರಾಮದ ಮುಖಂಡರು, ಸೇವಾಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಈ ವೇಳೆ ಫಲಾನುಭವಿಗಳು ಸಂಕಷ್ಟದ ಸಮಯದಲ್ಲಿ ನೆರವಿಗೆ ಬಂದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಡಾ. ವೀರೇಂದ್ರ ಹೆಗ್ಗಡೆ ಅವರಿಗೆ



ತಿಪಟೂರು ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದ ಆವರಣದಲ್ಲಿ ಇದೇ ಜೂನ್ 26ರಂದು ನಡೆಯಲಿರುವ ರಾಯರ ದರ್ಶನ ಆಲ್ಬಮ್ ಸಾಂಗ್ ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನಡೆಯಲಿದ್ದು,ಈ ಕಾರ್ಯಕ್ರಮಕ್ಕೆ ಆಗಮಿಸುವಂತೆ ನೊಣವಿನಕೆರೆಯ ಶ್ರೀ ಕಾಡಸಿದ್ದೇಶ್ವರ ಮಠದ ಶ್ರೀಡಾ.ಕರಿ ವೃಷಭದೇಶಿಕೇಂದ್ರ ಶಿವ ಯೋಗೀಶ್ವರ ಶ್ರೀಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಯಿತು.

# ಪೂರ್ವಭಾವಿ ಸಭೆ

ತುಮಕೂರು

ವಿವಿಧ ಜಯಂತಿ ಆಚರಣೆ ಸಂಬಂಧ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜೂನ್ 16ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ.

ಜೂನ್ 27ರಂದು ಆಚರಿಸುವ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಹಾಗೂ ಜುಲೈ 2ರಂದು ಆಚರಿಸುವ ಡಾ: ಫ.ಗು.ಹಳಕಟ್ಟಿಯವರ ಜಯಂತಿ ಕುರಿತು ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದ್ದು, ಸಮುದಾಯಗಳ ಎಲ್ಲಾ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಗೆ ಆಗಮಿಸಿ ತಮ್ಮ ಅಗತ್ಯ ಸಲಹೆಗಳನ್ನು ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ ಕು.ಮಿರ್ಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಿಪಟೂರಿನ ರೋಟರಿ ಗಡಿಯಾರ ಸ್ತಬ್ಧ



ತಿಪಟೂರು

ನಗರದ ಮಧ್ಯಭಾಗದಲ್ಲಿರುವ ರೋಟರಿ ಗಡಿಯಾರ ಹಲವು ದಿನಗಳಿಂದ ಕಾರ್ಯನಿರ್ವಹಿಸದೆ ಸ್ತಬ್ಧಗೊಂಡಿದ್ದು, ಇದನ್ನು ದುರಸ್ತಿ ಮಾಡುವಲ್ಲಿ ಸಂಬಂಧಪಟ್ಟವರು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂಬ ಆರೋಪ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ನಗರದ ಪ್ರಮುಖ ಗುರುತಿನ ಚಿಹ್ನೆಗಳಲ್ಲಿ ಒಂದಾಗಿರುವ ಈ ಗಡಿಯಾರ ಸರಿಯಾದ ಸಮಯವನ್ನು ತೋರಿಸದೆ ನಿಂತಿರುವುದರಿಂದ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನಗರದ ಸೌಂದರ್ಯ ಮತ್ತು ಶಿಸ್ತಿನ ಸಂಕೇತವಾಗಿರುವ ಗಡಿಯಾರ ನಿರ್ವಹಣೆಯ ಕೊರತೆಯಿಂದ ತನ್ನ ಮಹತ್ವ ಕಳೆದುಕೊಳ್ಳುತ್ತಿರುವುದು ಬೇಸರದ ಸಂಗತಿ ಎಂದು ನಾಗರಿಕರು ಅಭಿಪ್ರಾಯಪಟ್ಟಿದ್ದಾರೆ.

ಕೆಲವು ನಾಗರಿಕರು ಮತ್ತು ಹಿರಿಯರ ಪ್ರಕಾರ, ಸಾರ್ವಜನಿಕ ಸ್ಥಳಗಳಲ್ಲಿರುವ ಗಡಿಯಾರಗಳು ಸರಿಯಾಗಿ ಕಾರ್ಯನಿರ್ವಹಿಸುವುದು ನಗರದ ವ್ಯವಸ್ಥೆ ಮತ್ತು ಚೈತನ್ಯದ ಪ್ರತೀಕವಾಗಿದೆ. ಗಡಿಯಾರ ದೀರ್ಘಕಾಲದಿಂದ ನಿಂತಿರುವುದು ನಗರದ ನಿರ್ವಹಣಾ ವ್ಯವಸ್ಥೆಯ ಮೇಲೆಯೂ ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಅವರು ಹೇಳಿದ್ದಾರೆ.

ರೋಟರಿ ಸಂಸ್ಥೆ ಅಥವಾ ನಗರಸಭೆ ಅಧಿಕಾರಿಗಳು ತಕ್ಷಣ ಗಡಿಯಾರದ ದುರಸ್ತಿಗೆ ಕ್ರಮ ಕೈಗೊಂಡು, ಮತ್ತೆ ಸಾರ್ವಜನಿಕರ ಉಪಯೋಗಕ್ಕೆ ತರಬೇಕು ಎಂಬುದು ಸ್ಥಳೀಯರ ಒತ್ತಾಯವಾಗಿದೆ. ನಗರದ ಹೃದಯಭಾಗದಲ್ಲಿರುವ ಈ ಗಡಿಯಾರ ಪುನಃ ಕಾರ್ಯಾರಂಭ ಮಾಡಿದರೆ ಸಾರ್ವಜನಿಕರಲ್ಲಿ ಉತ್ತಮ ಸಂದೇಶ ರವಾನೆಯಾಗಲಿದೆ ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ.

ನಗರದ ಗೌರವದ ಸಂಕೇತವಾಗಿರುವ ರೋಟರಿ ಗಡಿಯಾರಕ್ಕೆ ಮರುಜೀವ ನೀಡಲು ಸಂಬಂಧಪಟ್ಟ ಅಧಿಕಾರಿಗಳು ಯಾವಾಗ ಕ್ರಮ ಕೈಗೊಳ್ಳುತ್ತಾರೆ ಎಂಬುದನ್ನು ಸಾರ್ವಜನಿಕರು ಎದುರು ನೋಡುತ್ತಿದ್ದಾರೆ.

# ಮಾವಿನಕಾಯಿಗೆ ಬೆಂಬಲ ಬೆಲೆ ನಿಗದಿಗೆ ಆಗ್ರಹ: ಜಿಲ್ಲಾಧಿಕಾರಿಗೆ ಮಾವು ಬೆಳೆಗಾರರ ಮನವಿ

ಕೋಲಾರ

ಮಾವಿನಕಾಯಿಗೆ ಸೂಕ್ತ ಬೆಲೆ ನಿಗದಿಪಡಿಸಿ ರೈತರನ್ನು ಸಂಕಷ್ಟದಿಂದ ಪಾರು ಮಾಡಬೇಕು ಎಂದು ಆಗ್ರಹಿಸಿ ಶ್ರೀನಿವಾಸಪುರ ಶ್ರೀ ಭೈರವೇಶ್ವರ ಮಾವು ಬೆಳೆಗಾರರ ಸಂಘದ ಪದಾಧಿಕಾರಿಗಳು ಜಿಲ್ಲಾಧಿಕಾರಿ ಎಂ.ಆರ್. ರವಿ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ಅಧ್ಯಕ್ಷ ಬಿ. ಸೀತಾರಾಮರೆಡ್ಡಿ ಮಾತನಾಡಿ, ಶ್ರೀನಿವಾಸಪುರ ಕ್ಷೇತ್ರ ಸೇರಿದಂತೆ ಕೋಲಾರ ಜಿಲ್ಲೆ ರಾಜ್ಯದಲ್ಲೇ ಅತಿ ಹೆಚ್ಚು ಮಾವು ಬೆಳೆಯುವ ಪ್ರದೇಶವಾಗಿದೆ. ಆದರೆ ಈ ವರ್ಷ ಮಾವಿನಕಾಯಿಗೆ ಸಮರ್ಪಕ ಬೆಲೆ ಸಿಗದ ಕಾರಣ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

ಒಂದು ಟನ್ ಮಾವಿನಕಾಯಿ ಬೆಳೆಯಲು ಸುಮಾರು ರೂ.8 ಸಾವಿರದಿಂದ ರೂ.10 ಸಾವಿರದವರೆಗೆ ವೆಚ್ಚವಾಗುತ್ತದೆ. ಆದರೆ ಪ್ರಸ್ತುತ ಕಾರ್ಖಾನೆಗಳು ಒಂದು ಟನ್‌ಗೆ ಕೇವಲ ರೂ.4 ಸಾವಿರದಿಂದ ರೂ.5 ಸಾವಿರದವರೆಗೆ ಮಾತ್ರ ಬೆಲೆ ನಿಗದಿಪಡಿಸಿವೆ. ಇದಲ್ಲದೆ ಮಾವಿನಕಾಯಿ ಕೊಯ್ದು ಸಾಗಾಟ ಮಾಡಿ ಮಾರಾಟ ಮಾಡಲು ಮತ್ತಷ್ಟು ರೂ.4 ಸಾವಿರದಿಂದ ರೂ.5 ಸಾವಿರದವರೆಗೆ ಖರ್ಚಾಗುತ್ತದೆ.

ಪರಿಣಾಮವಾಗಿ ಅನೇಕ ರೈತರು ತೋಟಗಳಲ್ಲೇ ಮಾವಿನಕಾಯಿಯನ್ನು ಕೀಳದೆ ಬಿಟ್ಟಿದ್ದಾರೆ ಎಂದು ಅವರು ತಿಳಿಸಿದರು.



ಜಿಲ್ಲಾಡಳಿತವು ಸರ್ಕಾರದ ಗಮನ ಸೆಳೆದು ಒಂದು ಟನ್ ಮಾವಿನಕಾಯಿಗೆ ಕನಿಷ್ಠ ರೂ.10 ಸಾವಿರ ಬೆಲೆ ನಿಗದಿಪಡಿಸುವಂತೆ ಮನವಿ ಮಾಡಬೇಕು ಎಂದು ಸಂಘ ಒತ್ತಾಯಿಸಿದೆ. ಕಳೆದ ವರ್ಷ ಇದೇ ರೀತಿಯ ಸಮಸ್ಯೆ ಎದುರಾದ ಸಂದರ್ಭದಲ್ಲಿ ಪಿಡಿಪಿಎಸ್ ಯೋಜನೆಯಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬೆಂಬಲ ಬೆಲೆ ಘೋಷಣೆ ಮಾಡಿದ್ದವು. ಇದೇ ಮಾದರಿಯಲ್ಲಿ ಈ ವರ್ಷವೂ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಿ ಬೆಂಬಲ ಬೆಲೆ ಘೋಷಿಸಬೇಕು ಎಂದು ರೈತರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿ ಎಂ. ರಾಮಚಂದ್ರಪ್ಪ, ಖಜಾಂಚಿ ಎಂ.ಬೈರೇಗೌಡ, ಕಾರ್ಯಕಾರಿ ಸಮಿತಿ ಸದಸ್ಯರಾದ ಕೆ.ಎಚ್.ಸಂಪತ್ ಕುಮಾರ್, ಪ್ರಸನ್ನ ಕುಮಾರ್, ವಿ.ಚೌಡರೆಡ್ಡಿ, ಜಯರಾಮರೆಡ್ಡಿ, ದೊಡ್ಡನಂಜಪ್ಪ, ಕೆ.ಟಿ.ಜಯಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹಿರಿಯ ರಾಜಕಾರಣಿ, ಮಾಜಿ ಶಾಸಕ ವೆಂಕಟಾಚಲಯ್ಯ ನಿಧನ

ದೊಡ್ಡಬಳ್ಳಾಪುರ

ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಹಾಗೂ ಹಿರಿಯ ರಾಜಕಾರಣಿ ಆರ್.ಜಿ. ವೆಂಕಟಾಚಲಯ್ಯ (90) ಅವರು ಶುಕ್ರವಾರ ಬೆಳಗಿನ ಜಾವ ನಿಧನರಾದರು. ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.



ಮೃತರು ಒಬ್ಬ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗ ಹಾಗೂ ಅಭಿಮಾನಿಗಳನ್ನು ಅಗಲಿದ್ದಾರೆ. ನಗರದ ವಿವಿಧ ಭಾಗಗಳಲ್ಲಿ ಪಾರ್ಥಿವ ಶರೀರದ ಮೆರವಣಿಗೆ ನಡೆಸಿದ ಬಳಿಕ ಅವರ ಸ್ವಗ್ರಾಮ ಹಣಬೆದಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು. ನಂತರ ಶುಕ್ರವಾರ ಸಂಜೆ ಗ್ರಾಮದಲ್ಲೇ ಅಂತ್ಯಕ್ರಿಯೆ ನೆರವೇರಿತು.

ಆರ್.ಎಲ್. ಜಾಲಪ್ಪ ಅವರ ಅತ್ಯಂತ ಆಪ್ತರಾಗಿದ್ದ ವೆಂಕಟಾಚಲಯ್ಯ ಅವರು ರಾಜಕೀಯ ಜೀವನದಲ್ಲಿ ಹಲವು ಮಹತ್ವದ ಹುದ್ದೆಗಳನ್ನು ಅಲಂಕರಿಸಿದ್ದರು. ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರು, ಜಿಲ್ಲಾ ಬ್ಯಾಂಕ್ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಹಾಗೂ ಶಾಸಕರಾಗಿ ಸೇವೆ ಸಲ್ಲಿಸಿ ಜನಪರ ಆಡಳಿತಕ್ಕೆ ಹೆಸರಾಗಿದ್ದರು.

2008ರಲ್ಲಿ ದೊಡ್ಡಬಳ್ಳಾಪುರ ಕ್ಷೇತ್ರದಲ್ಲಿ ನಡೆದ ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಅವರು, ಬಿಜೆಪಿ ಅಭ್ಯರ್ಥಿ ಜೆ. ನರಸಿಂಹಸ್ವಾಮಿ ವಿರುದ್ಧ ಕಣಕ್ಕಿಳಿದಿದ್ದರು. ಗುರು–ಶಿಷ್ಯರ ನಡುವಿನ ರಾಜಕೀಯ ಹಣಾಹಣಿಯಾಗಿ ಆ ಚುನಾವಣೆ ರಾಜ್ಯದ ಗಮನ ಸೆಳೆದಿತ್ತು. ಆರ್.ಎಲ್. ಜಾಲಪ್ಪ ಅವರು ಸಕ್ರಿಯ ರಾಜಕಾರಣದಿಂದ ದೂರವಾದ ಬಳಿಕ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕಾಂಗ್ರೆಸ್ ಪಕ್ಷ ಸಂಘಟನೆ ಸಂಕಷ್ಟಕ್ಕೆ ಸಿಲುಕಿದ್ದ ಸಂದರ್ಭದಲ್ಲಿ ವೆಂಕಟಾಚಲಯ್ಯ ಅವರು ಕೆಲವೇ ಬೆಂಬಲಿಗರೊಂದಿಗೆ ಪಕ್ಷವನ್ನು ಸಂಘಟಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು.

ಅವರ ಪರಿಶ್ರಮದಿಂದ 2013ರಲ್ಲಿ ಕ್ಷೇತ್ರದಲ್ಲಿ ಕಾಂಗ್ರೆಸ್ ಮತ್ತೆ ಬಲಿಷ್ಠವಾಗಲು ನೆರವಾಯಿತು ಎಂದು ಪಕ್ಷದ ಮುಖಂಡರು ಸ್ಮರಿಸಿದ್ದಾರೆ.

ಅವರ ನಿಧನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ, ಶಾಸಕ ಧೀರಜ್ ಮುನಿರಾಜು, ಮಾಜಿ ಶಾಸಕ ವೆಂಕಟರಮಣಯ್ಯ, ಮಾಜಿ ಸಚಿವ ರಮೇಶ್ ಕುಮಾರ್, ಕಾಂಗ್ರೆಸ್ ಯುವ ಮುಖಂಡ ರಕ್ಷಾ ರಾಮಯ್ಯ ಸೇರಿದಂತೆ ಹಲವಾರು ರಾಜಕೀಯ ನಾಯಕರು, ಸಾರ್ವಜನಿಕರು ಹಾಗೂ ಅಭಿಮಾನಿಗಳು ಸಂತಾಪ ಸೂಚಿಸಿದ್ದಾರೆ.

# ಉಚಿತ ಶಿಕ್ಷಣ ಸಾಮಗ್ರಿ ವಿತರಣೆ



ಬೂದಿಕೋಟೆ

ಶಿಕ್ಷಣವು ಮಕ್ಕಳ ಭವಿಷ್ಯ ನಿರ್ಮಾಣದ ಪ್ರಮುಖ ಅಡಿಪಾಯವಾಗಿದ್ದು, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಸಮಾಜದ ಮುಖ್ಯವಾಹಿನಿಯಲ್ಲಿ ಮುನ್ನಡೆಯಬೇಕು ಎಂಬ ಉದ್ದೇಶದಿಂದ ಕೊತ್ತೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ಸಾಮಗ್ರಿಗಳನ್ನು ವಿತರಿಸಲಾಯಿತು.

ಬೂದಿಕೋಟೆ ಹೋಬಳಿಯ ಗುಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊತ್ತೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ತಮಿಳುನಾಡಿನ ದಕಣಿಕೋಟೆ ಗ್ರಾಮದ ಜನಸೇನಾ ಸೇವಾ ಸಂಸ್ಥೆಯ ಅಧ್ಯಕ್ಷ ಚೇತನ್ ಅವರ ಅಧ್ಯಕ್ಷತೆಯಲ್ಲಿ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ಪುಸ್ತಕಗಳು, ಪೆನ್, ಪೆನ್ಸಿಲ್, ಜ್ಯೂಸ್ ಹಾಗೂ ಬಿಸ್ಕೆಟ್‌ಗಳನ್ನು ಉಚಿತವಾಗಿ ವಿತರಿಸಿ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಚೇತನ್ ಅವರು, ಶಿಕ್ಷಣವೇ ಮಕ್ಕಳ ಜೀವನದಲ್ಲಿ ಯಶಸ್ಸಿನ ದಾರಿಯನ್ನು ತೆರೆದುಕೊಡುವ ಶಕ್ತಿ. ಗ್ರಾಮೀಣ ಭಾಗದ ಮಕ್ಕಳು ಶಿಕ್ಷಣದ ಮೂಲಕ ತಮ್ಮ ಪ್ರತಿಭೆಯನ್ನು ಹೊರಹಾಕಿ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ಸಮಾಜಸೇವೆಯ ಭಾಗವಾಗಿ ವಿದ್ಯಾರ್ಥಿಗಳಿಗೆ ಅಗತ್ಯ ಶಿಕ್ಷಣ ಸಾಮಗ್ರಿಗಳನ್ನು ವಿತರಿಸುವ ಕಾರ್ಯಕ್ರಮವನ್ನು ನಮ್ಮ ಸಂಸ್ಥೆ ನಿರಂತರವಾಗಿ ಮುಂದುವರಿಸಲಿದೆ ಎಂದು ಹೇಳಿದರು.

ಶಾಲೆಯ ಮುಖ್ಯ ಶಿಕ್ಷಕ ಶ್ರೀನಿವಾಸ್ ಅವರು ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಇಂತಹ ಸೇವಾ ಕಾರ್ಯಗಳು ಪೂರಕವಾಗಿದ್ದು, ದಾನಿಗಳ ಸಹಕಾರದಿಂದ ಮಕ್ಕಳಲ್ಲಿ ಕಲಿಕೆಯ ಉತ್ಸಾಹ ಹೆಚ್ಚುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಸಹ ಶಿಕ್ಷಕರಾದ ರಾಘವೇಂದ್ರ, ರಮೇಶ್, ಅನಿಲ್, ರವಿ, ಮುನಿರಾಜ್, ಚಂದ್ರು, ವೆಂಕಟೇಶಪ್ಪ ಹಾಗೂ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅಪಘಾತ: ಇಬ್ಬರು ಬಲಿ

ಬೆಂಗಳೂರು

ಮುಂದೆ ಹೋಗುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ಹಿಂದಿನಿಂದ ಲಾರಿ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಪ್ರಯಾಣಿಕರು ಮೃತಪಟ್ಟಿರುವ ಘಟನೆ ಬಾಗಲಕೋಟೆ ಜಿಲ್ಲೆಯ ಬೀಳಗಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇಂದು ಬೆಳಗ್ಗೆ ನಡೆದಿದೆ.

ಬಾಗಲಕೋಟೆಯ ನಿವಾಸಿ ರಾಣಿ ದೇಸಾಯಿ (35) ಹಾಗೂ ನರಗುಂದ ನಿವಾಸಿ ಶಿವಕುಮಾರ್ (25) ಮೃತಪಟ್ಟವರು.

ಇಂದು ಬೆಳಗ್ಗೆ 11.30 ರ ಸುಮಾರಿನಲ್ಲಿ ರಾಷ್ಟ್ರೀಯ ಹೆದ್ದಾರಿ ಅಗನವಾಡಿ ಬಳಿ ಕೆಎಸ್‌ಆರ್‌ಟಿಸಿ ಬಸ್‌ಪ್ರಯಾಣಿಕರನ್ನು ಕರೆದುಕೊಂಡು ಹೋಗುತ್ತಿದ್ದಾಗ ಹಿಂದಿನಿಂದ ಅತಿ ವೇಗವಾಗಿ ಬಂದ ಲಾರಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಬಸ್‌ನಲ್ಲಿದ್ದ ಇಬ್ಬರು ಪ್ರಯಾಣಿಕರು ಮೃತಪಟ್ಟಿದ್ದು, ನಾಲ್ವರು ಗಾಯಗೊಂಡಿದ್ದಾರೆ.

ಸುದ್ದಿ ತಿಳಿದು ಬೀಳಗಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಗಾಯಗೊಂಡವರನ್ನು ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಿಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಲೋಕಾಯುಕ್ತರಿಂದ 56 ಅಹವಾಲು ಸ್ವೀಕಾರ

ಕೊರಟಗೆರೆ

ಗ್ರಾಮೀಣ ಭಾಗದ ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಲೋಕಾಯುಕ್ತದ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಬಾರದು. ಸಾರ್ವಜನಿಕರ ಅಹವಾಲುಗಳನ್ನು ಸಂಬಂಧಪಟ್ಟ ಅಧಿಕಾರಿಗಳು ತ್ವರಿತವಾಗಿ ಬಗೆಹರಿಸಿದರೆ ಲೋಕಾಯುಕ್ತ ಇಲಾಖೆಗೆ ಅರ್ಜಿಗಳು ಬರುವುದೇ ಇಲ್ಲ ಎಂದು ತುಮಕೂರು ಲೋಕಾಯುಕ್ತ ಎಸ್ಪಿ ವಿವೇಕಾನಂದ ಜಿ. ತುಳಸಿಗೇರಿ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಲೋಕಾಯುಕ್ತ ಇಲಾಖೆಯಿಂದ ಆಯೋಜಿಸಿದ್ದ ಸಾರ್ವಜನಿಕರ ಕುಂದುಕೊರತೆ ಸಭೆ ಹಾಗೂ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಅವರು ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಸಭೆಯಲ್ಲಿ ಕಲ್ಲುಕ್ವಾರಿಗಳ ಸ್ಫೋಟದಿಂದ ರೈತರಿಗೆ ಆಗುತ್ತಿರುವ ತೊಂದರೆ, ಜಮೀನು



ದಾಖಲೆಗಳ ಸಮಸ್ಯೆ, ಸುವರ್ಣಮುಖಿ ನದಿ ಒತ್ತುವರಿ, ಪಡಿತರ ಚೀಟಿ ವಿತರಣೆಯ ವಿಳಂಬ, ಮನೆಗಳ ಇ–ಸ್ವತ್ತು ಸಮಸ್ಯೆ, ಜಮೀನು ಸರ್ವೆ ವಿಳಂಬ ಸೇರಿದಂತೆ ಹಲವು ವಿಷಯಗಳ ಕುರಿತು ಸಾರ್ವಜನಿಕರು ದೂರುಗಳನ್ನು ಸಲ್ಲಿಸಿದರು.

ಜಮೀನು ಸರ್ವೆ, ನದಿ ಮತ್ತು ರಸ್ತೆ ಒತ್ತುವರಿ, ಅಕ್ರಮ ಕಟ್ಟಡ ನಿರ್ಮಾಣ, ಪಡಿತರ ಚೀಟಿ, ಗ್ರಾಮ ಪಂಚಾಯಿತಿ ಇ–ಸ್ವತ್ತು, ಕಲ್ಲುಕ್ವಾರಿಗಳ ಶಬ್ದ ಮಾಲಿನ್ಯ, ಮಾಹಿತಿ ಹಕ್ಕು ಅರ್ಜಿಗಳಿಗೆ ಸ್ಪಂದನೆ ಇಲ್ಲದಿರುವುದು, ಪಹಣಿ ಹಾಗೂ ಸಾಗುವಳಿ ಚೀಟಿ ಸಮಸ್ಯೆ ಸೇರಿದಂತೆ ವಿವಿಧ ಇಲಾಖೆಗಳ ವಿರುದ್ಧ ಒಟ್ಟು 56 ಅರ್ಜಿಗಳನ್ನು ಲೋಕಾಯುಕ್ತ ಅಧಿಕಾರಿಗಳು ಸ್ವೀಕರಿಸಿದರು. ಸಂಬಂಧಪಟ್ಟ ಅಧಿಕಾರಿಗಳಿಗೆ ಅರ್ಜಿಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ಸೂಚನೆ ನೀಡಲಾಯಿತು.

ಅಗ್ರಹಾರ ನಾಗರಾಜು ಅವರು ಸುವರ್ಣಮುಖಿ ನದಿಯ ವ್ಯಾಪಕ ಒತ್ತುವರಿ ಕುರಿತು ದೂರು ಸಲ್ಲಿಸಿದರು. ಹನುಮಂತಪುರ ಗ್ರಾಮದ ಸರ್ವೆ ಸಂಖ್ಯೆ 17, 18 ಮತ್ತು 19ರಲ್ಲಿ ಅಕ್ರಮವಾಗಿ 160ಕ್ಕೂ ಹೆಚ್ಚು ಇ–ಸ್ವತ್ತುಗಳನ್ನು ಮಾಡಲಾಗಿದೆ ಹಾಗೂ ಬೋಡಬಂಡೇನಹಳ್ಳಿ ಸರ್ವೆ ಸಂಖ್ಯೆ 44ರಲ್ಲಿ ಹತ್ತಾರು ಎಕರೆ ಭೂಮಿಯನ್ನು ಅಕ್ರಮವಾಗಿ ಮಂಜೂರು ಮಾಡಲಾಗಿದೆ ಎಂದು ಆರೋಪಿಸಿದರು. ಈ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಕೋಡ್ಲಹಳ್ಳಿ ಗ್ರಾಮದ ಸತ್ಯಧರ್ಮ ಮಠಕ್ಕೆ ಸೇರಿದ 18 ಎಕರೆ ಇನಾಂ ಭೂಮಿಯನ್ನು ಖಾಸಗಿ ವ್ಯಕ್ತಿಗಳ ಹೆಸರಿಗೆ ಅಕ್ರಮವಾಗಿ ವರ್ಗಾವಣೆ ಮಾಡಲಾಗಿದೆ ಎಂದು ಹೈಕೋರ್ಟ್ ವಕೀಲ ಪರಮೇಶಾರಾಧ್ಯ ಲೋಕಾಯುಕ್ತ ಎಸ್ಪಿಗೆ ದೂರು ನೀಡಿದರು. ಅಲ್ಲದೆ, ಗ್ರಾಮದಲ್ಲಿ ಅಸ್ತಿತ್ವದಲ್ಲೇ ಇಲ್ಲದ ದೇವರ ಹೆಸರಿನಲ್ಲಿ 15 ಕೋಟಿಗೂ ಅಧಿಕ ತಸ್ತಿಕ್ ಹಣವನ್ನು ಅನಧಿಕೃತವಾಗಿ ವರ್ಗಾವಣೆ ಮಾಡಲಾಗಿದೆ ಎಂಬ ಆರೋಪವನ್ನೂ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಹಶೀಲ್ದಾರ್ ಮಂಜುನಾಥ್, ಪೌತಿ ಖಾತೆಯ ಆಧಾರದ ಮೇಲೆ ಅರ್ಜಿದಾರರ ಹೆಸರಿಗೆ ಪಹಣಿ ಬದಲಾವಣೆ ಮಾಡಲಾಗಿದೆ. ಈ ಪ್ರಕ್ರಿಯೆಯಲ್ಲಿ ಕಂದಾಯ ಇಲಾಖೆಯ ಯಾವುದೇ ತಪ್ಪಿಲ್ಲ ಎಂದು ಸ್ಪಷ್ಟಪಡಿಸಿದರು. ಸಾಮಾಜಿಕ ಜಾಲತಾಣಗಳ ಮೂಲಕ ಅಧಿಕಾರಿಗಳ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡುವುದು ಹಾಗೂ ಮಾನಸಿಕ ಕಿರುಕುಳ ನೀಡುವುದು ಸರಿಯಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರಾದ ಡಾ. ಸಂತೋಷ್ ಮತ್ತು ಮಂಜುನಾಥ್, ಪೊಲೀಸ್ ನಿರೀಕ್ಷಕ ರಾಜು ಟಿ., ತಾಪಂ ಇಒ ಅಪೂರ್ವ, ಸಿಪಿಐ ಪುರುಷೋತ್ತಮ್, ಪುರಸಭೆ ಮುಖ್ಯಾಧಿಕಾರಿ ಉಮೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಕ್ಕಳು ದೇವರ ಸಮಾನರು: ನ್ಯಾ.ಎಂ.ಎಚ್.ಅಣ್ಣಯ್ಯನವರ

ರಾಮನಗರ

ಮಕ್ಕಳು ದೇವರ ಸಮಾನರು. ಅವರ ಬೆಳವಣಿಗೆ ಮತ್ತು ಶಿಕ್ಷಣದ ಹೊಣೆಗಾರಿಕೆ ಸಮಾಜ ಹಾಗೂ ಪೋಷಕರ ಮೇಲಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಎಂ.ಎಚ್. ಅಣ್ಣಯ್ಯನವರ ಅವರು ಹೇಳಿದರು.

ಅವರು ಜೂ.12ರ ಶುಕ್ರವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೋಸೈಟಿ (ರಿ), ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಲಾ ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಪ್ರತಿಯೊಂದು ಮಗುವಿಗೂ ಉಚಿತ ಹಾಗೂ ಕಡ್ಡಾಯ ಶಿಕ್ಷಣ ಪಡೆಯುವ ಹಕ್ಕಿದೆ. ಮಕ್ಕಳನ್ನು ಕೆಲಸಕ್ಕೆ ಕಳುಹಿಸುವುದರಿಂದ ಅವರು ಶಿಕ್ಷಣದಿಂದ ವಂಚಿತರಾಗುತ್ತಾರೆ. 14 ವರ್ಷದೊಳಗಿನ ಮಕ್ಕಳನ್ನು ಶಾಲೆಗೆ ಸೇರಿಸಿ ಕಡ್ಡಾಯವಾಗಿ ಶಿಕ್ಷಣ ಕೊಡಿಸಬೇಕು. ಮಕ್ಕಳ ಮನಸ್ಸು ಬಿಳಿ ಹಾಳೆ ಇದ್ದ ಹಾಗೆ, ಅವರಿಗೆ ನೀಡುವ ಉತ್ತಮ ಶಿಕ್ಷಣ, ಸಂಸ್ಕಾರ ಹಾಗೂ ಮಾರ್ಗದರ್ಶನವೇ ಅವರ ಉತ್ತಮ ಭವಿಷ್ಯ ರೂಪಿಸುತ್ತದೆ. ಒಂದು ಬಿಳಿ ಹಾಳೆ ಕವಿಯ ಕೈಗೆ ಸಿಕ್ಕರೆ ಕಾವ್ಯವಾಗುತ್ತದೆ. ನ್ಯಾಯಾಧೀಶರ ಕೈಗೆ ಸಿಕ್ಕರೆ ತೀರ್ಪಾಗುತ್ತದೆ. ಶಿಕ್ಷಕರ ಕೈಗೆ ಸಿಕ್ಕರೆ ಪಾಠವಾಗುತ್ತದೆ. ಅದೇ ರೀತಿ ಮಕ್ಕಳ ಕೈಗೆ ಪುಸ್ತಕ ಕೊಟ್ಟರೆ ಅವರು ನಾಳೆಯ ಕವಿ, ಶಿಕ್ಷಕ, ಪೊಲೀಸ್ ಅಧಿಕಾರಿ, ನ್ಯಾಯಾಧೀಶ ಅಥವಾ ಜನಪ್ರತಿನಿಧಿಯಾಗಬಹುದು ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಅವರು ಮಾತನಾಡಿ, ಬಾಲಕಾರ್ಮಿಕ ಪದ್ಧತಿ ಸಮಾಜಕ್ಕೆ ದೊಡ್ಡ ಕಳಂಕವಾಗಿದೆ. ಇದರಿಂದ ಹೊರಬರಲು ಶಿಕ್ಷಣವೇ ಮುಖ್ಯವಾಗಿದೆ. ಮಕ್ಕಳು ಓದುವ ವಯಸ್ಸಿನಲ್ಲಿ ಶಾಲೆ ಮತ್ತು ಕಾಲೇಜುಗಳಿಗೆ ಹೋಗಬೇಕು. ಪಟಾಕಿ ತಯಾರಿಕೆ, ರೇಷ್ಮೆದಾರ ತಯಾರಿಕೆ ಸೇರಿದಂತೆ ಇತರೆ ಕಾರ್ಮಿಕ ಕೆಲಸಗಳಲ್ಲಿ ಮಕ್ಕಳನ್ನು ತೊಡಗಿಸುವುದು ತಪ್ಪು, ಶಿಕ್ಷಣವನ್ನು ಪಡೆದರೆ ಬಾಲಕಾರ್ಮಿಕ ಪದ್ಧತಿಯನ್ನು ಮೆಟ್ಟಿ ನಿಲ್ಲಲು ಸಾಧ್ಯವಾಗುತ್ತದೆ. ಶಾಲೆ ಅಥವಾ ಕಾಲೇಜಿಗೆ ಹಾಜರಾಗದ ಮಕ್ಕಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಗಮನ ಹರಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಮಕ್ಕಳ ಶಿಕ್ಷಣಕ್ಕೆ ಅಡ್ಡಿಯಾಗುವ ಸಂದರ್ಭಗಳಲ್ಲಿ ಕಾನೂನು ಕ್ರಮ ಕೈಗೊಳ್ಳುವ ಕುರಿತು ಮಾತನಾಡಿದ ಅವರು, ಮಕ್ಕಳ ಶಿಕ್ಷಣದ ಮಹತ್ವ ಹಾಗೂ ಬಾಲಕಾರ್ಮಿಕತೆ ತಡೆ ಕುರಿತು ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಬಿನೋಯ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜಿನಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಕಾವೇರಿ ಟಿ., ಜಿಲ್ಲಾ ಕಾರ್ಮಿಕ ನಿರೀಕ್ಷಕರಾದ ಪ್ರದೀಪ್, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 21ರಂದು ಅಂತರಾಷ್ಟ್ರೀಯ ಯೋಗಾ ದಿನಾಚರಣೆ

ರಾಮನಗರ

ಇದೇ ಜೂ.21ರಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ 12ನೇ ಅಂತರಾಷ್ಟ್ರೀಯ ಯೋಗಾ ದಿನಾಚರಣೆಯನ್ನು ಅಚ್ಚುಕಟ್ಟಾಗಿ ಆಯೋಜಿಸಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಸೂಚನೆ ನೀಡಿದರು.

ಅವರು ಜೂ. 12ರ ಶುಕ್ರವಾರ ಈ ಕುರಿತು ಆಯೋಜಿಸಲಾಗಿದ್ದ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಂತರಾಷ್ಟ್ರೀಯ ಯೋಗಾ ದಿನಾಚರಣೆಗೆ ಎನ್.ಸಿ.ಸಿ, ಎನ್.ಎಸ್.ಎಸ್. ವಿದ್ಯಾರ್ಥಿಗಳು ಸೇರಿದಂತೆ ಪಿ.ಯು.ಸಿ, ಪದವಿ ವಿದ್ಯಾರ್ಥಿಗಳು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸರ್ಕಾರೇತರ ಸ್ವಯಂಸೇವಾ ಸಂಘಗಳ ಪ್ರತಿನಿಧಿಗಳು, ಸಾರ್ವಜನಿಕರು, ಅಧಿಕಾರಿಗಳು, ಜನಪ್ರತಿನಿಧಿಗಳು ಭಾಗವಹಿಸಲಿದ್ದು, ಅವರೆಲ್ಲರನ್ನು ಅಂದು ಬೆಳಿಗ್ಗೆ 6 ಗಂಟೆಗೆ ಜಿಲ್ಲಾ ಕ್ರೀಡಾಂಗಣಕ್ಕೆ ಹಾಜರಾಗುವಂತೆ ಮಾಹಿತಿ ನೀಡಬೇಕೆಂದು ಹೇಳಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ ಗುಂಡಿಗಳಿದ್ದರೆ ಲೋಕೋಪಯೋಗಿ ಇಲಾಖೆಯಿಂದ ಅದನ್ನು ಸಮತಟ್ಟು ಮಾಡಿಸಬೇಕು. ಉತ್ತಮ ದರ್ಜೆಯ ಮ್ಯಾಟ್‌ಗಳನ್ನು ಅಳವಡಿಸಬೇಕು. ನಗರಸಭೆ ವತಿಯಿಂದ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಹಾಗೂ ಆಯುಷ್ ಇಲಾಖೆಯಿಂದ ಉಪಹಾರದ ವ್ಯವಸ್ಥೆ ಮಾಡಿಕೊಳ್ಳುವಂತೆ ತಿಳಿಸಿದ ಅಪರ ಜಿಲ್ಲಾಧಿಕಾರಿಗಳು, ಆರೋಗ್ಯ ಇಲಾಖೆಯಿಂದ ಒಂದು ಆಂಬುಲೆನ್ಸ್ ಅನ್ನು ಸ್ಥಳದಲ್ಲಿ ನಿಯೋಜಿಸಬೇಕು, ವೈದ್ಯಾಧಿಕಾರಿಗಳು, ಸಿಬ್ಬಂದಿ ಔಷಧೋಪಚಾರವಿರಬೇಕು, ಕ್ರೀಡಾಂಗಣದಲ್ಲಿ ಉತ್ತಮ ವೇದಿಕೆ ಸಿದ್ದಪಡಿಸಬೇಕು. ಗುಣಮಟ್ಟದ ಮೈಕ್ ಅಳವಡಿಸಬೇಕು, ಮುಖ್ಯವಾಗಿ ನುರಿತ ಯೋಗ ಪಟುವನ್ನು ಆಯ್ಕೆ ಮಾಡಿಕೊಳ್ಳುವಂತೆ ತಿಳಿಸಿದ ಅವರು ಸುಮಾರು ಒಂದು ಸಾವಿರ ಜನರು ಯೋಗ ದಿನಾಚರಣೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ಜನಪ್ರತಿನಿಧಿಗಳನ್ನು ಖುದ್ದಾಗಿ ಇಲಾಖೆಯ ಅಧಿಕಾರಿಗಳೇ ಆಮಂತ್ರಿಸಬೇಕು. ಅದಕ್ಕೂ ಮುನ್ನ ಆಮಂತ್ರಣ ಪತ್ರಿಕೆಯ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಸಂಬಂಧಿಸಿದವರಿಂದ ಅನುಮತಿ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆಯುಷ್ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಬಿ.ಎಸ್. ಸೀತಾಲಕ್ಷ್ಮೀ ಅವರು ಮಾತನಾಡಿ, ಅಂತರಾಷ್ಟ್ರೀಯ ಯೋಗಾ ದಿನಾಚರಣೆ ಕಾರ್ಯಕ್ರಮದಲ್ಲಿ 45 ನಿಮಿಷಗಳ ಯೋಗ ಪ್ರಾತ್ಯಕ್ಷಿಕೆ ನಡೆಯಲಿದೆ. ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಶೇಖರ್, ಆರೋಗ್ಯ ಇಲಾಖೆ ಅಧಿಕಾರಿ ಡಾ. ಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಅನಿತಾ ಸೇರಿದಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಸದ ಮಲ್ಲೇಶ್ ಬಾಬು ವಿರುದ್ಧದ ಆರೋಪಗಳು

# ರಾಜಕೀಯ ಪ್ರೇರಿತ: ಬಾಲಕೃಷ್ಣ



ಬಂಗಾರಪೇಟೆ

ಸ್ಥಳೀಯ ಸಂಸದ ಎಂ. ಮಲ್ಲೇಶ್ ಬಾಬು ಅವರು ಕ್ಷೇತ್ರದ ಅಭಿವೃದ್ಧಿಗೆ ಯಾವುದೇ ಕೆಲಸ ಮಾಡುತ್ತಿಲ್ಲ ಎಂಬ ವಿರೋಧ ಪಕ್ಷಗಳ ಆರೋಪಗಳು ರಾಜಕೀಯ ಪ್ರೇರಿತವಾಗಿದ್ದು, ಹತಾಶೆಯ ಪರಮಾವಧಿಯಾಗಿದೆ ಎಂದು ಜೆಡಿಎಸ್ ಮುಖಂಡ ಹಾಗೂ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಬಾಲಕೃಷ್ಣ ತಿರುಗೇಟು ನೀಡಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಜೆಡಿಎಸ್ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸದರು ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗಾಗಿ ನಿರಂತರವಾಗಿ ಶ್ರಮಿಸುತ್ತಿದ್ದು, ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿಗೆ ಕೋಟ್ಯಂತರ ರೂಪಾಯಿ ಅನುದಾನ ಒದಗಿಸಿದ್ದಾರೆ ಎಂದು ಹೇಳಿದರು. ಕಣ್ಣೆದುರೇ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳನ್ನು ಸಹಿಸದ ವಿರೋಧ ಪಕ್ಷಗಳು ವಿನಾಕಾರಣ ಅಪಪ್ರಚಾರ ಮಾಡುತ್ತಿವೆ ಎಂದು ಆರೋಪಿಸಿದರು.

ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಸಾರ್ವಜನಿಕರ ಸುರಕ್ಷತೆ ಹಾಗೂ ಕತ್ತಲೆ ನಿವಾರಣೆಗೆ ಒಟ್ಟು 63.40 ಲಕ್ಷ ವೆಚ್ಚದಲ್ಲಿ ಹೈ-ಮಾಸ್ಟ್ ಮತ್ತು ಐ-ಮಾಸ್ಟ್ ದೀಪಗಳನ್ನು ಅಳವಡಿಸಲಾಗಿದೆ ಎಂದು ತಿಳಿಸಿದರು. ದೊಡ್ಡಮರಹಳ್ಳಿ, ಐಮರಸಾಪುರ, ತಮ್ಮೇನಹಳ್ಳಿ, ದಿನ್ನೂರು, ಶ್ರೀರಂಗಬೂಂದಹಳ್ಳಿ ಹಾಗೂ ರಾಮಸಂದ್ರ ಗ್ರಾಮಗಳಲ್ಲಿ ತಲಾ 4.95 ಲಕ್ಷ ವೆಚ್ಚದಲ್ಲಿ ಹೈ-ಮಾಸ್ಟ್ ದೀಪಗಳನ್ನು ಅಳವಡಿಸಲಾಗಿದ್ದು, ಬ್ಯಾಟರಾಯನಸ್ವಾಮಿ ಬೆಟ್ಟದ ವೃತ್ತ, ಬಂದಾರ್ಲಹಳ್ಳಿ ಮತ್ತು ಚಿಕ್ಕಕಳವಂಚಿ ಗ್ರಾಮಗಳಲ್ಲಿ ತಲಾ 1.50 ಲಕ್ಷ ವೆಚ್ಚದಲ್ಲಿ ಮಿನಿ ಐ-ಮಾಸ್ಟ್ ದೀಪಗಳನ್ನು ಅಳವಡಿಸಲಾಗಿದೆ ಎಂದು ವಿವರಿಸಿದರು.

ಜೆಡಿಎಸ್ ಮುಖಂಡ ಟಿ. ಯಲ್ಲಪ್ಪ ಮಾತನಾಡಿ, ಬಿಸಾನತ್ತಂ ರೈಲ್ವೆ ನಿಲ್ದಾಣದಿಂದ ಆಂಧ್ರ ಗಡಿ ರಸ್ತೆಯವರೆಗೆ 270 ಮೀಟರ್ ರಸ್ತೆಯನ್ನು ಮೂರು ಹಂತಗಳಲ್ಲಿ ಒಟ್ಟು 15 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆಯಾಗಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಹೇಳಿದರು. ತೋಪನಹಳ್ಳಿ ಶ್ರೀ ಚಂದ್ರಮೌಳೀಶ್ವರ ದೇವಸ್ಥಾನ ರಸ್ತೆ ಅಭಿವೃದ್ಧಿಗೆ 3 ಲಕ್ಷ ಹಾಗೂ ಮಾಗೊಂದಿ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ 4 ಲಕ್ಷ ಅನುದಾನ ಮಂಜೂರಾಗಿದೆ ಎಂದು ತಿಳಿಸಿದರು.

ಕ್ಷೇತ್ರದ ಶೈಕ್ಷಣಿಕ ಅಭಿವೃದ್ಧಿಗೆ ಆದ್ಯತೆ ನೀಡಿರುವ ಸಂಸದರು, ಚಿಕ್ಕಕೊಂಡಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಟ್ಟಡ ದುರಸ್ತಿಗಾಗಿ 4 ಲಕ್ಷ ಅನುದಾನ ಬಿಡುಗಡೆ ಮಾಡಿದ್ದು, ಕಾಮಗಾರಿ ಶೀಘ್ರದಲ್ಲೇ ಆರಂಭವಾಗಲಿದೆ ಎಂದರು.

ಬೂದಿಕೋಟೆ ರಸ್ತೆಯ ರೈಲ್ವೆ ಮೇಲ್ಸೇತುವೆ ಕಾಮಗಾರಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಲಾಗಿದೆ. ಜೊತೆಗೆ ಕಾಮಸಮುದ್ರ, ದೇಶಿಹಳ್ಳಿ ಹಾಗೂ ಎಸ್.ಎನ್. ರೆಸಾರ್ಟ್ ಸಮೀಪದ ರೈಲ್ವೆ ಮೇಲ್ಸೇತುವೆ ಕಾಮಗಾರಿಗಳಿಗೆ ತಾಂತ್ರಿಕ ಮಂಜೂರಾತಿ ದೊರೆತಿದ್ದು, ಶೀಘ್ರದಲ್ಲೇ ಭೂಮಿಪೂಜೆ ನೆರವೇರಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಸಹಕಾರ ಒಕ್ಕೂಟದ ನಿರ್ದೇಶಕ ಎಚ್.ಎ. ಹನುಮಂತ, ಪಾಕರಹಳ್ಳಿ ಮಂಜುನಾಥ, ನಾಡಗುಮ್ಮನಹಳ್ಳಿ ಮುನಿಕೃಷ್ಣಪ್ಪ ಸೇರಿದಂತೆ ಜೆಡಿಎಸ್ ಮುಖಂಡರು ಉಪಸ್ಥಿತರಿದ್ದರು.

# ನೀರಿನ ಸದುಪಯೋಗಕ್ಕೆ ನೀಲಿ ನಕ್ಷೆ: ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅವರಿಂದ ಹೊಸ ಪ್ರಯೋಗ

"ನಮ್ಮ ಅಜ್ಜ-ಮುತ್ತಜ್ಜರು ನೀರನ್ನು ನದಿಗಳಲ್ಲಿ ಕಂಡರು. ನಮ್ಮ ತಂದೆ-ತಾಯಿಗಳು ಬಾವಿಗಳಲ್ಲಿ ನೀರು ನೋಡಿದರು. ನಾವು ಕೊಳವೆ ಮತ್ತು ನಲ್ಲಿಗಳಲ್ಲಿ ಹರಿಯುವ ನೀರನ್ನು ನೋಡಿದ್ದೇವೆ. ಆದರೆ ನಮ್ಮ ಮಕ್ಕಳು ಈಗ ನೀರನ್ನು ಬಾಟಲಿಗಳಲ್ಲಿ ನೋಡುತ್ತಿದ್ದಾರೆ. ಇದೇ ಪರಿಸ್ಥಿತಿ ಮುಂದುವರಿದರೆ ಮುಂದಿನ ಪೀಳಿಗೆ ನೀರನ್ನು ಮಾತ್ರೆ ರೂಪದಲ್ಲಿ ಕಾಣುವ ದಿನಗಳು ದೂರವಿಲ್ಲ" ಈ ಮಾತು ಕೇವಲ ಎಚ್ಚರಿಕೆಯಲ್ಲ, ಭವಿಷ್ಯದ ಭಯಾನಕ ಚಿತ್ರಣವೂ ಹೌದು.



ನೀರು ಪ್ರಕೃತಿಯ ಅಮೂಲ್ಯ ಕೊಡುಗೆ. ಅದನ್ನು ಯಾವುದೇ ಕಾರ್ಖಾನೆಯಲ್ಲಿ ಉತ್ಪಾದಿಸಲು ಸಾಧ್ಯವಿಲ್ಲ. ಜಗತ್ತಿನ ಪ್ರತಿಯೊಂದು ಜೀವಿಗೂ ನೀರು ಅತ್ಯವಶ್ಯಕ. ಆದರೆ ನೀರಿನ ಮೌಲ್ಯ ಅರಿಯದೆ ದುರ್ಬಳಕೆ ಮಾಡುತ್ತಿರುವುದು ಭವಿಷ್ಯಕ್ಕೆ ಅಪಾಯದ ಗಂಟೆ ಮೊಳಗಿಸುತ್ತಿದೆ. ಈ ಗಂಭೀರತೆಯನ್ನು ಅರಿತ ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅವರು ಕೈಗೊಂಡಿರುವ "ನೀರಿನ ಅದಾಲತ್" ಮತ್ತು "ನೀರಿನ ಆಡಿಟ್" ಎಂಬ ಹೊಸ ಪ್ರಯೋಗ ಇದೀಗ ರಾಜ್ಯದ ಗಮನ ಸೆಳೆಯುತ್ತಿದೆ.

ಕೋಲಾರ ಜಿಲ್ಲೆಯಲ್ಲಿ ಯಾವುದೇ ನದಿ ಅಥವಾ ಜಲಾಶಯಗಳಿಲ್ಲ. ಮಳೆ ಆಧಾರಿತ ಕೆರೆಗಳು ಮತ್ತು ಅಂತರ್ಜಲವೇ ಜಿಲ್ಲೆಯ ಜೀವನಾಡಿ. ಕೃಷಿ, ಕುಡಿಯುವ ನೀರು, ಕೈಗಾರಿಕೆ, ಸಾರ್ವಜನಿಕ ಬಳಕೆ ಎಲ್ಲವೂ ಅಂತರ್ಜಲದ ಮೇಲೆಯೇ ಅವಲಂಬಿತವಾಗಿದೆ. ಕಳೆದ ಕೆಲವು ವರ್ಷಗಳಿಂದ ಕೈಗಾರಿಕೆಗಳ ಸಂಖ್ಯೆ ಹೆಚ್ಚುತ್ತಿರುವುದರಿಂದ ನೀರಿನ ಬಳಕೆಯೂ ದಿನೇ ದಿನೇ ಏರಿಕೆಯಾಗುತ್ತಿದೆ.

ಈ ಪರಿಸ್ಥಿತಿಯಲ್ಲಿ ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆ ತೀವ್ರವಾಗದಂತೆ ತಡೆಯಲು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅವರು ವೈಜ್ಞಾನಿಕ ಹಾಗೂ ವ್ಯವಸ್ಥಿತ ಕ್ರಮಗಳನ್ನು ಕೈಗೊಂಡಿದ್ದಾರೆ. ಕಳೆದ ಮಾರ್ಚ್ ತಿಂಗಳಲ್ಲಿ ಜಿಲ್ಲೆಯಾದ್ಯಂತ "ವಾಟರ್ ಅದಾಲತ್" ನಡೆಸುವ ಮೂಲಕ ನೀರಿನ ಲಭ್ಯತೆ, ಬಳಕೆ, ಸಂರಕ್ಷಣೆ ಹಾಗೂ ಸರಬರಾಜಿನ ಸಮಗ್ರ ಅಧ್ಯಯನ ನಡೆಸಲಾಗಿದೆ.

ಪ್ರತಿ ಗ್ರಾಮ ಪಂಚಾಯಿತಿ, ನಗರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ನೀರಿನ ಆಡಿಟ್ ಮಾಡಿಸಿ, ಎಲ್ಲೆಲ್ಲಿ ನೀರಿನ ಕೊರತೆ ಇದೆ, ಎಷ್ಟು ಪ್ರಮಾಣದ ನೀರು ಲಭ್ಯವಿದೆ, ಜನಸಂಖ್ಯೆಗೆ ಅನುಗುಣವಾಗಿ ಎಷ್ಟು ನೀರು ಅಗತ್ಯ ಎಂಬುದರ ಬಗ್ಗೆ ಮಾಹಿತಿ ಸಂಗ್ರಹಿಸಲಾಗಿದೆ.

ಜಿಲ್ಲೆಯಲ್ಲಿ ಒಟ್ಟು 1531 ಗ್ರಾಮಗಳಿದ್ದು, ಸುಮಾರು 12.57 ಲಕ್ಷ ಜನರಿಗೆ ಸರಾಸರಿ 72 ಎಲ್‌ಪಿಸಿಡಿ ನೀರು ಸರಬರಾಜು ಮಾಡಲಾಗುತ್ತಿದೆ. ಗ್ರಾಮೀಣ ಪ್ರದೇಶಗಳಿಗೆ ಒಟ್ಟು 93681 ಕೆಎಲ್‌ಡಿ ನೀರಿನ ಲಭ್ಯತೆ ಇದ್ದು, ಬೇಡಿಕೆ 69183 ಕೆಎಲ್‌ಡಿ ಇದೆ. ಈ ಅಂತರವನ್ನು ಸಮತೋಲನಗೊಳಿಸಲು ಜಿಲ್ಲಾಡಳಿತ ಹಲವು ಪರಿಹಾರ ಕ್ರಮಗಳನ್ನು ರೂಪಿಸಿದೆ.



ನೀರಿನ ಕೊರತೆ ಇರುವ ಪ್ರದೇಶಗಳಿಗೆ ಹೆಚ್ಚಿನ ನೀರು ಇರುವ ಭಾಗಗಳಿಂದ ನೀರು ಪೂರೈಸುವ ವ್ಯವಸ್ಥೆ ರೂಪಿಸಲಾಗಿದೆ.

ಜೊತೆಗೆ ದುರಸ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ತಕ್ಷಣ ದುರಸ್ತಿ ಮಾಡಲು ಸೂಚನೆ ನೀಡಲಾಗಿದೆ. ಜಿಲ್ಲೆಯಲ್ಲಿರುವ 1413 ಶುದ್ಧ ನೀರಿನ ಘಟಕಗಳಲ್ಲಿ 1368 ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಉಳಿದ ಘಟಕಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗಿದೆ. ಬೇಸಿಗೆ ಕಾಲದಲ್ಲಿ ನೀರಿಗಾಗಿ ಜನರು ಬೀದಿಗಿಳಿದು ಪ್ರತಿಭಟನೆ ನಡೆಸುವುದು ಕೋಲಾರ ಜಿಲ್ಲೆಯಲ್ಲಿ ಸಾಮಾನ್ಯ ಸಂಗತಿಯಾಗಿತ್ತು. ಆದರೆ ಈ ಬಾರಿ ನೀರಿನ ಅದಾಲತ್ ಮತ್ತು ಆಡಿಟ್ ಪರಿಣಾಮವಾಗಿ ನೀರಿನ ಸಮಸ್ಯೆ ಕುರಿತು ದೂರುಗಳು ಬಹಳಷ್ಟು ಕಡಿಮೆಯಾಗಿವೆ.

ಜಿಲ್ಲಾಧಿಕಾರಿಗಳು ತಹಶೀಲ್ದಾರರು, ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಸ್ಥಳೀಯ ಅಧಿಕಾರಿಗಳಿಗೆ ಸ್ಪಷ್ಟ ಜವಾಬ್ದಾರಿ ನೀಡಿರುವುದು ಈ ಯೋಜನೆಯ ಯಶಸ್ಸಿಗೆ ಪ್ರಮುಖ ಕಾರಣವಾಗಿದೆ. ಹಿಂದೆ ಟ್ಯಾಂಕರ್ ಮಾಫಿಯಾ ಹಾಗೂ ನೀರಿನ ದುರ್ಬಳಕೆಯನ್ನು ತಡೆಯಲು ವಿವಿಧ ಜಿಲ್ಲಾಧಿಕಾರಿಗಳು ಕ್ರಮ ಕೈಗೊಂಡಿದ್ದರು. ದಿವಂಗತ ಡಿ.ಕೆ.ರವಿ ಅವರು ಟ್ಯಾಂಕರ್‌ಗಳಿಗೆ ಜಿಪಿಎಸ್ ಅಳವಡಿಸಿ ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಿದ್ದರು. ಇದೀಗ ಡಾ. ಎಂ.ಆರ್. ರವಿ ಅವರು ನೀರಿನ ಆಡಿಟ್ ಮೂಲಕ ಹೊಸ ದಿಕ್ಕು ತೋರಿಸಿದ್ದಾರೆ.

ನೀರಿನ ಅದಾಲತ್ ಕೇವಲ ಸಮಸ್ಯೆ ಕೇಳುವ ಕಾರ್ಯಕ್ರಮವಲ್ಲ. ಇದು ಜನರಲ್ಲಿ ಜಾಗೃತಿ ಮೂಡಿಸುವ ವೇದಿಕೆಯಾಗಿದೆ. ನೀರನ್ನು ಮಿತವಾಗಿ ಬಳಸುವುದು, ಜಲಮೂಲಗಳನ್ನು ಸಂರಕ್ಷಿಸುವುದು, ಮಳೆನೀರು ಸಂಗ್ರಹಣೆ ಹಾಗೂ ಭವಿಷ್ಯದ ಬಗ್ಗೆ ಚಿಂತನೆ ಮಾಡುವ ಅಗತ್ಯವನ್ನು ಜನರಿಗೆ ತಿಳಿಸಲಾಗಿದೆ.

ಜನರ ಅನುಕೂಲಕ್ಕಾಗಿ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಹಾಯವಾಣಿ ತೆರೆಯಲಾಗಿದ್ದು, ನೀರಿನ ಸಮಸ್ಯೆಗಳಿಗೆ 24 ಗಂಟೆಯೊಳಗೆ ಸ್ಪಂದಿಸುವ ವ್ಯವಸ್ಥೆಯೂ ಮಾಡಲಾಗಿದೆ.

ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ಅವರ ಈ ಪ್ರಯತ್ನ ಕೇವಲ ಕೋಲಾರ ಜಿಲ್ಲೆಗೆ ಮಾತ್ರ ಸೀಮಿತವಾಗಬಾರದು. ರಾಜ್ಯದ ಇತರ ಜಿಲ್ಲೆಗಳೂ ಈ ಮಾದರಿಯನ್ನು ಅಳವಡಿಸಿಕೊಂಡರೆ ಭವಿಷ್ಯದ ಜಲ ಸಂಕಷ್ಟವನ್ನು ಬಹುಮಟ್ಟಿಗೆ ತಡೆಗಟ್ಟಬಹುದು.

ನೀರು ಎಂಬುದು ಬೆಲೆ ಕಟ್ಟಲಾಗದ ಸಂಪತ್ತು. ಅದನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿ.

ಮುಂದಿನ ಪೀಳಿಗೆಗೆ ನೀರಿನ ಭದ್ರತೆ ಒದಗಿಸಲು ಈಗಿನಿಂದಲೇ ವೈಜ್ಞಾನಿಕ ಜಲ ನಿರ್ವಹಣೆ ಅಗತ್ಯವಾಗಿದೆ.

ಈ ನಿಟ್ಟಿನಲ್ಲಿ ಕೋಲಾರ ಜಿಲ್ಲೆಯಲ್ಲಿ ನಡೆದಿರುವ ನೀರಿನ ಅದಾಲತ್ ಮತ್ತು ಆಡಿಟ್ ನಿಜಕ್ಕೂ "ಜಲ ಸಂಜೀವಿನಿ"ಯಾಗಿ ಪರಿಣಮಿಸಿದೆ ಎನ್ನುವುದರಲ್ಲಿ ಯಾವುದೇ ಅನುಮಾನವಿಲ್ಲ.

ವಿಶೇಷ ಲೇಖನ:
ಪಾ. ಶ್ರೀ. ಅನಂತರಾಮು, ಹಿರಿಯ ಪತ್ರಕರ್ತ, ಅಂಕಣಕಾರ

# 'ಬಾಲಕಾರ್ಮಿಕ ಪದ್ಧತಿ ಮುಕ್ತ ಸಮಾಜ ನಮ್ಮ ಗುರಿಯಾಗಲಿ'



ಗುಡಿಬಂಡೆ

ಬಾಲಕಾರ್ಮಿಕ ಪದ್ಧತಿ ಸಮಾಜಕ್ಕೆ ಮಾರಕವಾಗಿದ್ದು, ಈ ಸಾಮಾಜಿಕ ಪಿಡುಗನ್ನು ಬೇರುಸಹಿತ ಕಿತ್ತೆಸೆಯಲು ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕಾದ ಅವಶ್ಯಕತೆ ಇದೆ ಎಂದು ಹಿರಿಯ ಶ್ರೇಣಿ ನ್ಯಾಯಾಧೀಶ ಪ್ರೇಮ್‌ಕುಮಾರ್ ತಿಳಿಸಿದರು.

ತಾಲೂಕಿನ ವರ್ಲಕೊಂಡ ಸರ್ಕಾರಿ ಪ್ರೌಢಶಾಲೆಯಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ತಾಲೂಕು ಆಡಳಿತ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ ರವರುಗಳ ಸಹಯೋಗದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಾಲಕಾರ್ಮಿಕ ಪದ್ಧತಿ ಕೇವಲ ಕಾನೂನಿನ ಉಲ್ಲಂಘನೆಯಲ್ಲ, ಅದು ಮಗುವಿನ ಮೂಲಭೂತ ಹಕ್ಕುಗಳ ಮೇಲಿನ ದೌರ್ಜನ್ಯ. ಪ್ರತಿ ಮಗುವಿಗೂ ಉತ್ತಮ ಶಿಕ್ಷಣ, ಆರೋಗ್ಯ ಮತ್ತು ಸುರಕ್ಷಿತ ಬಾಲ್ಯ ಸಿಗುವಂತೆ ಮಾಡುವುದು ಪೋಷಕರು, ಸಾರ್ವಜನಿಕರು ಹಾಗೂ ಸರ್ಕಾರದ ಜವಾಬ್ದಾರಿಯಾಗಿದೆ. ಎಲ್ಲ ಒಟ್ಟಾಗಿ ಕೆಲಸ ಮಾಡಿದರೆ ಮಾತ್ರ ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯ ಎಂದರು.

ಬಳಿಕ ತಾಪಂ ಇಒ ನಾಗಮಣಿ ಮಾತನಾಡಿ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಮತ್ತು ಪರಿಸರ ಸಂರಕ್ಷಣೆ ಎರಡೂ ಸಮಾಜದ ಅಭಿವೃದ್ಧಿಗೆ ಅತ್ಯಂತ ಅಗತ್ಯವಾದ ಅಂಶಗಳಾಗಿವೆ. ಮಕ್ಕಳಿಗೆ ಉತ್ತಮ ಶಿಕ್ಷಣ, ಆರೋಗ್ಯ ಮತ್ತು ಸುರಕ್ಷಿತ ವಾತಾವರಣ ಒದಗಿಸುವಲ್ಲಿ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕು ಎಂದರು.

ಇದೇ ಸಮಯದಲ್ಲಿ ವಕೀಲರ ಸಂಘದ ಅಧ್ಯಕ್ಷ ಅಶ್ವತ್ಥರೆಡ್ಡಿ, ವಕೀಲೆ ಬಿ. ಪವಿತ್ರಾ ಮಾತನಾಡಿದರು. ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಬಾಲಕಾರ್ಮಿಕ ವಿರೋಧಿ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಬಳಿಕ ಶಾಲಾ ಆವರಣದಲ್ಲಿ ಸಸಿ ನೆಡುವ ಮೂಲಕ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಮಯದಲ್ಲಿ ವಲಯ ಅರಣ್ಯಾಧಿಕಾರಿ ಪೀರ್ ಸಾಹೇಬ್ ಅ.ನದಾಫ್, ವಕೀಲರಾದ ನಂದಿಶ್ವರರೆಡ್ಡಿ, ಪ್ಯಾನಲ್ ವಕೀಲರಾದ ನರೇಂದ್ರ, ಗ್ರಾಮ ಪಂಚಾಯಿತಿ ಪಿಡಿಒ ಸತ್ಯ ಪ್ರಸಾದ್, ಶಿಕ್ಷಣ ಇಲಾಖೆಯ ಟಿ.ಪಿ.ಓ ಹನುಮಂತರಾಯಪ್ಪ, ಶಾಲೆಯ ಮುಖ್ಯ ಶಿಕ್ಷಕಿ ನಳಿನಾಕ್ಷಿ, ಸಹಶಿಕ್ಷಕರು, ನ್ಯಾಯಾಲಯದ ಸಿಬ್ಬಂದಿ ಸುರೇಶ್ ಸೇರಿದಂತೆ ಹಲವರಿದ್ದರು.

# ಎಲ್‌ಕೆಜಿ, ಯುಕೆಜಿ ಪ್ರಾರಂಭಕ್ಕೆ ಒತ್ತಾಯ



ಕೋಲಾರ

ರಾಜ್ಯದ ಪ್ರತಿ ಹಳ್ಳಿಯಲ್ಲಿರುವ ರೈತರ ಮಕ್ಕಳ ವಿಧ್ಯಾಭ್ಯಾಸಕ್ಕಾಗಿ ಸರ್ಕಾರಿ/ಅನುದಾನಿತ ಶಾಲೆಗಳಲ್ಲಿ ದ್ವಿಭಾಷೆ ನೀತಿಯಡಿ ಎಲ್.ಕೆ.ಜಿ. ಮತ್ತು ಯು.ಕೆ.ಜಿಯನ್ನು ಪ್ರಾರಂಭಿಸಲು ಒತ್ತಾಯಿಸಿ, ಹಾಗೂ ಸರ್ಕಾರಿ ಶಾಲೆಗಳು ಹಾಗೂ ಅನುದಾನಿತ ಶಾಲೆಗಳ ಮದ್ಯೆ ಇರುವ ಹಲವು ತಾರತಮ್ಯಗಳನ್ನು ಹಾಗೂ ಬೇಡಿಕೆಗಳನ್ನು ಬಗೆ ಹರಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘದ ಹಾಗೂ ಹಸಿರುಸೇನೆ ವತಿಯಿಂದ ಉಪನಿರ್ದೇಶಕಿ ಡಿ.ಡಿ.ಪಿ.ಐ ಅಲ್ಲಮ್ ಪರ್ವಿನ್ ತಾಜ್ ಅವರ ಮುಖಾಂತರ ಮುಖ್ಯಮಂತ್ರಿಗಳಿಗೆ ಹಾಗೂ ಆಯುಕ್ತರಿಗೆ ಮನವಿ ಸಲ್ಲಿಸಿದರು.

ರಾಜ್ಯದ ರೈತರ ಮಕ್ಕಳ ವಿಧ್ಯಾಭ್ಯಾಸಕ್ಕಾಗಿ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ ಉಳಿವಿಗಾಗಿ ಪ್ರತಿ ಹಳ್ಳಿ ಹಾಗೂ ನಗರದಲ್ಲಿರುವ ರಾಜ್ಯದ ಸರ್ಕಾರಿ/ಅನುದಾನಿತ ಶಾಲೆಗಳಲ್ಲಿ ಎಲ್.ಕೆ.ಜಿ. ಮತ್ತು ಯು.ಕೆ.ಜಿಯಿಂದ ದ್ವಿಭಾಷೆ ನೀತಿಯಲ್ಲಿ ಪ್ರಾರಂಭಿಸಬೇಕು.

ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕೆ ಅನುಕೂಲವಾಗುವಂತೆ ಪ್ರತಿ ವಿಷಯವಾರು ಒಬ್ಬೊಬ್ಬ ಶಿಕ್ಷಕರನ್ನು ನೇಮಿಸಿ, 6ನೇ ಗ್ಯಾರೆಂಟಿಯನ್ನು ಜಾರಿ ಮಾಡಿ. ಈಗಾಗಲೇ ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷೆ ನೀತಿಯನ್ನು ಆರಂಭಿಸಿರುವ ಸರ್ಕಾರಕ್ಕೆ ಮೊದಲನೇಯದಾಗಿ ಅಭಿನಂದನೆಗಳು. ಅದೇ ರೀತಿ ಅನುದಾನಿತ ಶಾಲೆಗಳಲ್ಲಿ ಸಹ ದ್ವಿಭಾಷ ನೀತಿಯನ್ನು ಅನುಸರಿಸಲು ಅವಕಾಶ ನೀಡಿಬೇಕು.

ಸರ್ಕಾರಿ ಶಾಲೆಗಳ ಹೆಚ್ಚುವರಿ ಶಿಕ್ಷಕರನ್ನು 10 ಜನಕ್ಕೆ ಒಬ್ಬರಂತೆ ಹಾಗೂ 11 ಜನಕ್ಕೆ ಇಬ್ಬರಂತೆ ಮಕ್ಕಳ ಸಂಖ್ಯೆ ಅನುಗುಣವಾಗಿ ಹೆಚ್ಚುವರಿ ಶಿಕ್ಷಕರನ್ನು ತೆಗೆದು ಅವಶ್ಯಕತೆ ಇರುವ ಕಡೆ ನೇಮಕ ಮಾಡುತ್ತಿರುವುದು ಒಳ್ಳೆಯ ವಿಷಯವೇ?.

ಆದರೆ ಅನುದಾನಿತ ಶಾಲೆಗಳಲ್ಲಿ ಇರುವ ಹೆಚ್ಚುವರಿ ಶಿಕ್ಷಕರನ್ನು 40 ಜನಕ್ಕೆ ಒಬ್ಬರು ಶಿಕ್ಷಕರು, 80 ಜನಕ್ಕೆ ಇಬ್ಬರು ಶಿಕ್ಷಕರು, 120 ಜನಕ್ಕೆ ಮೂರು ಶಿಕ್ಷಕರು, 160 ಜನಕ್ಕೆ ನಾಲ್ಕು ಶಿಕ್ಷಕರು, 200 ಜನಕ್ಕೆ ಐದು ಶಿಕ್ಷಕರು, 240 ಕ್ಕೆ 6 ಜನ ಶಿಕ್ಷಕರು, ನೇಮಿಸಿ ಆದೇಶಿಸಿರುತ್ತೀರಿ.

ಇದರಿಂದ ಮಕ್ಕಳ ವಿಧ್ಯಾಭ್ಯಾಸಕ್ಕೆ ತೊಂದರೆಯಾಗುತ್ತದೆ. ಸರ್ಕಾರಿ ಶಾಲೆಗಳ ಶಿಕ್ಷಕರಂತೆ ಅನುದಾನಿತ ಶಾಲಾ ಶಿಕ್ಷಕರನ್ನು 10 ಜನಕ್ಕೆ ಒಬ್ಬ ಶಿಕ್ಷಕರು, 11 ಕ್ಕೆ ಇಬ್ಬರು ಶಿಕ್ಷಕರು ನೇಮಕ ಮಾಡಿ ಆದೇಶವನ್ನು ಮಾಡಬೇಕೆಂದು ಒತ್ತಾಯಿಸುತ್ತೇವೆ.

ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ ಡ್ಲ್ಯೂಪಿ ಸಂಖ್ಯೆ ಎನ್.ಓ.ಎಸ್32598-32830/2011 ದಿ.13-03-2012 ರಂತೆ ತಡೆಯಾಜ್ಞೆ ಇದ್ದು, ಇದರನ್ವಯ ಅನುದಾನಿತ ಶಾಲಾ ಶಿಕ್ಷಕರಿಗೆ ವರ್ಗಾವಣೆಯನ್ನು ಸರ್ಕಾರಿ ಶಾಲೆಗಳ ಕಿರಿಯ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳ ಮಾನದಂಡದಂತೆ ಕ್ರಮ ವಹಿಸಲು ಕೋರುತ್ತೇವೆ.

# 'ಶಿಕ್ಷಣ ಮತ್ತು ಆರೋಗ್ಯ ಜೀವನದ ಅಮೂಲ್ಯ ಸಂಪತ್ತು'

ಬೂದಿಕೋಟೆ

ಶಿಕ್ಷಣ ಮತ್ತು ಆರೋಗ್ಯವು ಪ್ರತಿಯೊಬ್ಬರ ಜೀವನದ ಪ್ರಮುಖ ಆಧಾರಸ್ತಂಭಗಳಾಗಿದ್ದು, ಓದು, ಜ್ಞಾನ ಹಾಗೂ ಧಾರ್ಮಿಕ ಗ್ರಂಥಗಳ ಅರಿವು ವ್ಯಕ್ತಿಯ ಜೀವನಕ್ಕೆ ಸರಿಯಾದ ದಿಕ್ಕನ್ನು ತೋರಿಸುತ್ತದೆ ಎಂದು ದಾನಿ ರಾಬರ್ಟ್ ಡಿ.ರೋಜಾ ಹೇಳಿದರು.



ಬಂಗಾರಪೇಟೆ ತಾಲೂಕಿನ ಕೀಲುಕೊಪ್ಪ ಗ್ರಾಮದ ಶ್ರೀ ಶನೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಅನುದಾನಿತ ಶಾಲೆಯ 1ರಿಂದ 7ನೇ ತರಗತಿ ವಿದ್ಯಾರ್ಥಿಗಳಿಗೆ ಹೋಪ್ ಮಿನಿಸ್ಟರ್ಸ್ ವತಿಯಿಂದ ಉಚಿತ ಪುಸ್ತಕಗಳು ಹಾಗೂ ಲೇಖನಿ ಸಾಮಗ್ರಿಗಳನ್ನು ವಿತರಿಸಿ ಅವರು ಮಾತನಾಡಿದರು.

ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಉದ್ದೇಶ ಒಂದೇ ಆಗಿದ್ದು, ಗ್ರಾಮೀಣ ಭಾಗದ ಬಡ ಹಾಗೂ ಕಾರ್ಮಿಕ ವರ್ಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ಮುಖ್ಯವಾಗಿದೆ. ಗುರು-ಹಿರಿಯರಿಗೆ ಗೌರವ ನೀಡಿ, ಶ್ರದ್ಧೆಯಿಂದ ವ್ಯಾಸಂಗ ಮಾಡಿದರೆ ಜೀವನದಲ್ಲಿ ಯಶಸ್ಸು ಸಾಧಿಸಬಹುದು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ದೇಶದ ಅಭಿವೃದ್ಧಿಗೆ ಶಿಕ್ಷಣ ಅತ್ಯಗತ್ಯ. ಶಾಲೆಗೆ ನಿಯಮಿತವಾಗಿ ಹಾಜರಾಗಬೇಕು ಮತ್ತು ಉತ್ತಮ ಶಿಕ್ಷಣ ಪಡೆದು ಭವಿಷ್ಯ ರೂಪಿಸಿಕೊಳ್ಳಬೇಕು. ಹಣ ಕಳೆದುಹೋಗಬಹುದು, ಆದರೆ ವಿದ್ಯೆ ಎಂದಿಗೂ ಕಳೆದುಹೋಗದ ಅಮೂಲ್ಯ ಆಸ್ತಿ. ಪೋಷಕರು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅವರು ತಿಳಿಸಿದರು.

ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಕೆ. ಶಶಿಕಲಾ ಮಾತನಾಡಿ, ಶಾಲೆಗಳ ಬಲವರ್ಧನೆಗೆ ದಾನಿಗಳ ಸಹಕಾರ ಅತ್ಯಂತ ಮುಖ್ಯವಾಗಿದೆ. ವಿದ್ಯಾರ್ಥಿಗಳು ವಿದ್ಯಾಭ್ಯಾಸವನ್ನು ಮಧ್ಯದಲ್ಲೇ ನಿಲ್ಲಿಸದೆ ಪದವಿವರೆಗೆ ಮುಂದುವರಿಸಬೇಕು. ಸರ್ಕಾರಿ ಶಾಲೆಗಳಲ್ಲಿ ಓದಿದ ಅನೇಕರು ಇಂದು ದೇಶ-ವಿದೇಶಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ ಎಂದು ಹೇಳಿದರು.

ಹೋಪ್ ಮಿನಿಸ್ಟರ್ಸ್ ಸಂಸ್ಥೆಯು ಕಳೆದ 15 ವರ್ಷಗಳಿಂದ ಗ್ರಾಮೀಣ ಪ್ರದೇಶಗಳ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಿಗೆ ಉಚಿತ ನೋಟ್ ಪುಸ್ತಕಗಳು ಮತ್ತು ಲೇಖನಿ ಸಾಮಗ್ರಿಗಳನ್ನು ವಿತರಿಸುತ್ತಿದ್ದು, ಸಂಸ್ಥೆಯ ಸೇವೆಯನ್ನು ಕಾರ್ಯಕ್ರಮದಲ್ಲಿ ಶ್ಲಾಘಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಶ್ಯಾಮಮೂರ್ತಿ, ಮುಖ್ಯಶಿಕ್ಷಕ ಎಚ್.ಎಲ್. ಆನಂದ್, ಶಿಕ್ಷಕರಾದ ಎಸ್. ಗಿರಿಜಮ್ಮ, ಉಷಾರಾಣಿ, ಶಶಿಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 1 ಕೋಟಿ ರೂ.ವೆಚ್ಚದ ಮೋರಿ ರಿಪೇರಿ ಕಾಮಗಾರಿಗೆ ಶಾಸಕ ಸುಬ್ಬಾರೆಡ್ಡಿ ಗುದ್ದಲಿಪೂಜೆ

ಗುಡಿಬಂಡೆ

ಹಲವು ವರ್ಷಗಳಿಂದ ಸಾರ್ವಜನಿಕರ ಪ್ರಮುಖ ಬೇಡಿಕೆಯಾಗಿದ್ದ ಗುಡಿಬಂಡೆ ಪಟ್ಟಣದ ಮುಖ್ಯ ರಸ್ತೆಯ ಮಸೀದಿ ಸಮೀಪದ ಮೋರಿ ದುರಸ್ತಿ ಕಾಮಗಾರಿಗೆ ಶಾಸಕ ಸುಬ್ಬಾರೆಡ್ಡಿ ಗುದ್ದಲಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು. ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ಈ ಕಾಮಗಾರಿ ಕೈಗೊಳ್ಳಲಾಗುತ್ತಿದೆ.

ಈ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಶಾಸಕ ಸುಬ್ಬಾರೆಡ್ಡಿ, ಗುಡಿಬಂಡೆ ಪಟ್ಟಣದ ಮುಖ್ಯ ರಸ್ತೆ ಅಗಲೀಕರಣ ಕಾಮಗಾರಿ ವೇಳೆ ಮಸೀದಿ ಸಮೀಪದ ಮೋರಿ ದುರಸ್ತಿ ಅಗತ್ಯವಿತ್ತು. ಆದರೆ ಆ ಸಂದರ್ಭದಲ್ಲಿ ಅನುದಾನದ ಕೊರತೆಯಿಂದ ಕಾಮಗಾರಿ ಕೈಗೆತ್ತಿಕೊಳ್ಳಲು ಸಾಧ್ಯವಾಗಿರಲಿಲ್ಲ. ಜೊತೆಗೆ ಈ ಮೋರಿಯು ರಾಜಕಾಲುವೆ ನೀರು ಹರಿಯುವ ಕಾಲುವೆ ಮೇಲೆ ಇರುವ ಕಾರಣ ಮಳೆ ಬಂದರೇ ಸಾಕಷ್ಟು ಸಮಸ್ಯೆಯಾಗುತ್ತಿತ್ತು,



ಜೊತೆಗೆ ಮೋರಿ ತುಂಬಾ ಹಳೆಯದ್ದಾಗಿದ್ದರಿಂದ ಮೋರಿ ಕುಸಿಯುವ ಬೀತಿ ಸಹ ಜನರಿಗಿತ್ತು. ಈ ಕಾರಣದಿಂದ ಸ್ಥಳೀಯರು ಮೋರಿ ದುರಸ್ಥಿ ಮಾಡಿಕೊಡುವಂತೆ ಸಾಕಷ್ಟು ಬಾರ ಮನವಿ ಸಹ ಮಾಡಿದ್ದರು.

ಇದೀಗ ಸರ್ಕಾರದಿಂದ 1 ಕೋಟಿ ರೂ. ಅನುದಾನ ಮಂಜೂರಾಗಿದ್ದು, ಕಾಮಗಾರಿಗೆ ಇಂದು ಗುದ್ದಲಿ ಪೂಜೆ ನೆರವೇರಿಸಲಾಗಿದೆ. ಟೆಂಡರ್ ಪ್ರಕಾರ ಆರು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಬೇಕು.

ಆದರೆ ಗುತ್ತಿಗೆದಾರರು ನಾಲ್ಕು ತಿಂಗಳ ಒಳಗೆ ಕಾಮಗಾರಿ ಪೂರ್ಣಗೊಳಿಸುವುದಾಗಿ ತಿಳಿಸಿದ್ದಾರೆ.

ಜೊತೆಗೆ ಗುತ್ತಿಗೆದಾರರಿಗೆ ಗುಣಮಟ್ಟದ ಕಾಮಗಾರಿ ನಿರ್ವಹಿಸುವಂತೆ ಸೂಚನೆ ಸಹ ನೀಡಿದ್ದು, ಕಾಮಗಾರಿಯಲ್ಲಿ ಲೋಪದೋಷಗಳು ಕಂಡು ಬಂದರೇ ನನ್ನ ಗಮನಕ್ಕೆ ತನ್ನಿ ಸರಿಪಡಿಸುವ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

ಇನ್ನೂ ಇದೇ ಸಮಯದಲ್ಲಿ ಸಚಿವ ಸ್ಥಾನದ ಕುರಿತು ಮಾತನಾಡಿದ ಶಾಸಕರು, ಕೆಲವು ದಿನಗಳ ಹಿಂದೆಯಷ್ಟೆ ನಾನು ದೆಹಲಿಯಲ್ಲಿ ನಮ್ಮ ಪಕ್ಷದ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ, ಕೆ.ಸಿ.ವೇಣುಗೋಪಾಲ್, ಸಿಎಂ ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ ಮೊದಲಾದವರನ್ನು ನಾನು ಭೇಟಿ ಸಚಿವ ಸ್ಥಾನದ ಬೇಡಿಕೆಯಿಟ್ಟಿದ್ದೇನೆ. ಮೊದಲ ಬಾರಿ ಸಿದ್ದರಾಮಯ್ಯನವರ ಸಂಪುಟದಲ್ಲಿ ಸಚಿವ ಸ್ಥಾನ ಕೇಳಿದ್ದೆ, ಎರಡನೇ ಅವಧಿಯಲ್ಲಿ ಸಚಿವ ಸ್ಥಾನ ಕೊಡುವ ಭರವಸೆ ನೀಡಿದ್ದರು. ಅದರಂತೆ ಇದೀಗ ನನಗೆ ಸಚಿವ ಸ್ಥಾನ ಕೊಡಿ ಎಂದು ಕೇಳಿದ್ದು, ಸಚಿವ ಸ್ಥಾನ ನೀಡುವ ಭರವಸೆ ನೀಡಿದ್ದಾರೆ, ನನಗೂ ಸಚಿವ ಸ್ಥಾನ ಸಿಗುವ ಸಂಪೂರ್ಣ ಭರವಸೆ ಇದೆ ಎಂದರು.

ಈ ಸಮಯದಲ್ಲಿ ತಹಸೀಲ್ದಾರ್ ಸಿಗ್ಬತ್ತುಲ್ಲಾ, ಪಪಂ ಅಧ್ಯಕ್ಷ ವಿಕಾಸ್, ಮುಖ್ಯಾಧಿಕಾರಿ ಆರತಿ, ಲೋಕೋಪಯೋಗಿ ಇಲಾಖೆಯ ಪೂಜಪ್ಪ, ಮುಖಂಡರಾದ ಆದಿರೆಡ್ಡಿ, ಬಾಬು, ಚಾಂದ್ ಪಾಷ, ಕೃಷ್ಣೇಗೌಡ, ಅಂಬರೀಶ್, ರಿಯಾಜ್ ಪಾಷ, ನಂಜುಂಡ, ಗಂಗರಾಜು, ಮಂಜುನಾಥ್ ಸೇರಿದಂತೆ ಹಲವರು ಹಾಜರಿದ್ದರು.

# ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ನೆರವು ನೀಡಲು ಅರ್ಜಿ ಆಹ್ವಾನ

ತುಮಕೂರು

ತೋಟಗಾರಿಕೆ ಇಲಾಖೆ ವತಿಯಿಂದ 2026–27ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ, ತೋಟಗಾರಿಕೆ ರೈತರಿಗೆ ಹಾಗೂ ಉದ್ದಿಮೆದಾರರಿಗೆ ನೆರವು ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯ ವಿವಿಧ ಕಾರ್ಯಕ್ರಮಗಳಡಿ ಹಣ್ಣಿನ ಬೆಳೆಗಳಾದ ಬಾಳೆ, ಮಾವು, ಪಪ್ಪಾಯ, ಬೆಣ್ಣೆಹಣ್ಣು, ಹಲಸು ಹಾಗೂ ದಾಳಿಂಬೆ ಹೊಸ ಪ್ರದೇಶ ವಿಸ್ತರಣೆ, ಅಪ್ರಧಾನ ಹಣ್ಣಿನ ಬೆಳೆಗಳಾದ ಡ್ರ್ಯಾಗನ್ ಹಣ್ಣು, ಬೆಣ್ಣೆಹಣ್ಣು, ಹಲಸು ಹಾಗೂ ದಾಳಿಂಬೆ ಹೊಸ ಪ್ರದೇಶ ವಿಸ್ತರಣೆ, ಹೈಬ್ರಿಡ್ ತರಕಾರಿ ಬೆಳೆಗಳ ಹೊಸ ಪ್ರದೇಶ ವಿಸ್ತರಣೆ, ಗೋಡಂಬಿ, ಕೋಕೊ, ಕಾಳು ಮೆಣಸು ಬೆಳೆಗಳ ಹೊಸಪ್ರದೇಶ ವಿಸ್ತರಣೆ, ಅಣಬೆ ಉತ್ಪಾದನ ಘಟಕಾ, ಹಸಿರು ಮನೆ, ನೆರಳು ಪರದೆ ಹಾಗೂ ವೈಯಕ್ತಿಕ ನೀರು ಸಂಗ್ರಹಣಾ ಘಟಕಗಳ ನಿರ್ಮಾಣಕ್ಕೆ, ಸಂರಕ್ಷಿತ ಬೇಸಾಯ ಕಾರ್ಯಕ್ರಮದಡಿ ಪ್ಲಾಸ್ಟಿಕ್‌ಹೊದಿಕೆ, ಪಕ್ಷಿನಿರೋಧಕ ಬಲೆ ಅಳವಡಿಕೆ, ಸಮಗ್ರ ಕೀಟ, ರೋಗ ಮತ್ತು ಪೋಷಕಾಂಶಗಳ ನಿರ್ವಹಣೆ, ಕೋಯ್ಲೋತ್ತರ ನಿರ್ವಹಣೆಗಾಗಿ, ಪಾರಂಗೇಟ್ ಪ್ಯಾಕ್‌ಹೌಸ್, ಎರೆಹುಳು ಗೊಬ್ಬರ ಉತ್ಪಾದನಾ ಘಟಕ, ಕಡಿಮೆ ವೆಚ್ಚದ ಈರುಳ್ಳಿ ಶೇಖರಣಾ ಘಟಕ, ಸ್ಟ್ಯಾಟಿಕ್ ಮೊಬೈಲ್ ವೆಂಡಿಂಗ್ ಕಾರ್ಟ್ ಖರೀದಿಸಲು, ನೆರವು ನೀಡಲಾಗುವುದು.

ಹಳೆ ತೋಟಗಳ ಪುನಃಶ್ಚೇತನ, ಜೇನು ಸಾಕಾಣಿಕೆ, ಮಿನಿಟ್ರಾಕ್ಟರ್‌ಗಳಿಗೆ ಸಹಾಯಧನ ನೀಡಲಾಗುವುದು. ಮಾರ್ಗಸೂಚಿಯನ್ವಯ ವಿವಿಧ ಕಾರ್ಯಕ್ರಮಗಳನ್ನಾಧರಿಸಿ ಶೇ.25 ರಿಂದ 50 ರಷ್ಟು ಸಹಾಯಧನ ನೀಡಲಾಗುವುದು.

ಆಸಕ್ತ ರೈತರು ಹಾಗೂ ಉದ್ದಿಮೆದಾರರು ಅರ್ಜಿಯೊಂದಿಗೆ ಪಹಣಿ, ಬೆಳೆ ದೃಡೀಕರಣ, ಚೆಕ್‌ಬಂಧಿ, ಆಧಾರ್ ಪ್ರತಿ, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ಜಾತಿ ಪ್ರಮಾಣ ಪತ್ರ (ಪ.ಜಾತಿ ಮತ್ತು ಪ.ಪಂಗಡ ರೈತರಿಗೆ), ಜಂಟಿ ಖಾತೆ ಇದ್ದಲ್ಲಿ ಒಪ್ಪಿಗೆ ಪ್ರಮಾಣಪತ್ರ, ಖಾತೆದಾರರು ಮರಣ ಹೊಂದಿದ್ದಲ್ಲಿ ಮರಣ ಪ್ರಮಾಣಪತ್ರ ಮತ್ತು ಇತರೆ ದಾಖಲಾತಿಗಳನ್ನು ಜೂನ್ 15 ರಿಂದ 25ರೊಳಗಾಗಿ ಆಯಾ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ/ಹತ್ತಿರದ ಗ್ರಾಮ ಪಂಚಾಯಿತಿ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು(ಜಿಪಂ) ತುಮಕೂರು– 8095042988, ಗುಬ್ಬಿ–9535781963, ಕುಣಿಗಲ್–8884984999, ತಿಪಟೂರು–7022225169, ಚಿ.ನಾ.ಹಳ್ಳಿ–9686056705, ತುರುವೇಕೆರೆ–8088688759, ಶಿರಾ–9611789551, ಕೊರಟಗೆರೆ–9448001644, ಮಧುಗಿರಿ– 9611789551, ಪಾವಗಡ–9845268382ನ್ನು ಸಂಪರ್ಕಿಸಬಹುದಾಗಿದೆ ಎಂದು ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿದ್ದಲಿಂಗಯ್ಯ ವೃತ್ತ, ಸಾಲುಮರದ ತಿಮ್ಮಕ್ಕ ಆಸ್ಪತ್ರೆಗೆ ನಾಮಕರಣಕ್ಕೆ ಒತ್ತಾಯ

ಮಾಗಡಿ

ಕನ್ನಡದ ಖ್ಯಾತ ಬಂಡಾಯ ಕವಿ ಹಾಗೂ ದಲಿತ ಚಳವಳಿಯ ಪ್ರಮುಖ ಧ್ವನಿಯಾಗಿದ್ದ ಡಾ. ಸಿದ್ದಲಿಂಗಯ್ಯ ಅವರ ಹೆಸರನ್ನು ಮಾಗಡಿ ಪಟ್ಟಣದ ಪ್ರಮುಖ ವೃತ್ತಕ್ಕೆ ನಾಮಕರಣ ಮಾಡಬೇಕು ಹಾಗೂ ರೂ.42 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ನೂತನ ಸರ್ಕಾರಿ ಆಸ್ಪತ್ರೆಗೆ ಸಾಲುಮರದ ತಿಮ್ಮಕ್ಕ ಅವರ ಹೆಸರನ್ನು ಇಟ್ಟು ಗೌರವಿಸಬೇಕು ಎಂದು ಸಂಬುದ್ಧ ಜನಸೇವಾ ಟ್ರಸ್ಟ್, ಭೀಮ ಪಡೆ ಪದಾಧಿಕಾರಿಗಳು ಹಾಗೂ ದಲಿತ ಮುಖಂಡರು ಒತ್ತಾಯಿಸಿದರು.

ಈ ಕುರಿತು ತಹಶೀಲ್ದಾರ್ ಹಾಗೂ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಭೀಮ ಪಡೆ ಅಧ್ಯಕ್ಷ ಹಾಗೂ ತಾಲೂಕು ಭೂನ್ಯಾಯ ಮಂಡಳಿ ಸದಸ್ಯ ಚಿಕ್ಕರಾಜು, ಮಾಗಡಿ ತಾಲೂಕಿನ ಮಂಚನಬೆಲೆ ಗ್ರಾಮದಲ್ಲಿ ಜನಿಸಿದ ಡಾ.ಸಿದ್ದಲಿಂಗಯ್ಯ ಅವರು ಬಂಡಾಯ ಸಾಹಿತ್ಯ ಮತ್ತು ದಲಿತ ಚಳವಳಿಯ ಮೂಲಕ ಕನ್ನಡ ನಾಡಿಗೆ ಅಪಾರ ಕೊಡುಗೆ ನೀಡಿದ್ದಾರೆ.

ಅವರ ಸ್ಮರಣಾರ್ಥ ಪಟ್ಟಣದ ಪ್ರಮುಖ ವೃತ್ತ ಅಥವಾ ಮುಖ್ಯ ರಸ್ತೆಗೆ ಅವರ ಹೆಸರನ್ನು ನಾಮಕರಣ ಮಾಡುವುದರ ಜೊತೆಗೆ ಭವ್ಯ ಪ್ರತಿಮೆ ಸ್ಥಾಪಿಸಬೇಕು ಎಂದು ಆಗ್ರಹಿಸಿದರು.

ಸಾಲುಮರದ ತಿಮ್ಮಕ್ಕ ಅವರು ತಮ್ಮ ಜೀವಿತಾವಧಿಯಲ್ಲಿ ಪರಿಸರ ಸಂರಕ್ಷಣೆಗೆ ನೂರಾರು ಆಲದ ಮರಗಳನ್ನು



ನೆಟ್ಟು ಬೆಳೆಸಿದ್ದು, ಅಂತರರಾಷ್ಟ್ರೀಯ ಮಟ್ಟದಲ್ಲಿ ಮಾಗಡಿ ತಾಲೂಕಿಗೆ ಕೀರ್ತಿ ತಂದಿದ್ದಾರೆ. ಆದ್ದರಿಂದ ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ನೂತನ ಸರ್ಕಾರಿ ಆಸ್ಪತ್ರೆಗೆ ಅವರ ಹೆಸರನ್ನು ಇಟ್ಟು, ಆಸ್ಪತ್ರೆಯ ಮುಂಭಾಗದಲ್ಲಿ ಅವರ ಪ್ರತಿಮೆ ನಿರ್ಮಿಸಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಶಾಸಕ ಎಚ್.ಸಿ. ಬಾಲಕೃಷ್ಣ ಅವರು ಮಾಗಡಿ ಪಟ್ಟಣದ ಅಭಿವೃದ್ಧಿಗೆ ನೂರಾರು ಕೋಟಿ ರೂಪಾಯಿ ಅನುದಾನ ತಂದು ಹಲವು ಮಹತ್ವದ ಕಾಮಗಾರಿಗಳನ್ನು ಕೈಗೊಂಡಿರುವುದನ್ನು ಅಭಿನಂದಿಸಿದ ಮುಖಂಡರು, ಈ ಇಬ್ಬರು ಮಹನೀಯರ ಹೆಸರನ್ನು ನಾಮಕರಣ ಮಾಡುವುದರಿಂದ ಪಟ್ಟಣದ ಗೌರವ ಮತ್ತಷ್ಟು ಹೆಚ್ಚಲಿದೆ ಎಂದು ಅಭಿಪ್ರಾಯಪಟ್ಟರು.

ಸಂಬುದ್ಧ ಜನಸೇವಾ ಟ್ರಸ್ಟ್ ರಾಜ್ಯಾಧ್ಯಕ್ಷ ಶಿವಶಂಕರ್ ಮಾತನಾಡಿ, ಡಾ. ಸಿದ್ದಲಿಂಗಯ್ಯ ಅವರು ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಜಾತಿ ರಹಿತ ಸಮಾಜದ ಕನಸನ್ನು ತಮ್ಮ ಸಾಹಿತ್ಯದ ಮೂಲಕ ಜನರಿಗೆ ತಲುಪಿಸಿದ ಮಹಾನ್ ಸಾಹಿತಿ ಎಂದು ಹೇಳಿದರು. ಹೊಸಪೇಟೆ ವೃತ್ತಕ್ಕೆ ಸಿದ್ದಲಿಂಗಯ್ಯ ಅವರ ಹೆಸರನ್ನು ಹಾಗೂ ನೂತನ ಆಸ್ಪತ್ರೆಗೆ ಸಾಲುಮರದ ತಿಮ್ಮಕ್ಕ ಅವರ ಹೆಸರನ್ನು ನಾಮಕರಣ ಮಾಡಬೇಕು ಎಂದು ಒತ್ತಾಯಿಸಿದರು.

ತಹಶೀಲ್ದಾರ್ ರಂಜಿತ್ ಕೆ.ಆರ್. ಮನವಿ ಸ್ವೀಕರಿಸಿ, ವಿಷಯವನ್ನು ಶಾಸಕ ಹಾಗೂ ಸಂಬಂಧಿತ ಅಧಿಕಾರಿಗಳ ಗಮನಕ್ಕೆ ತರುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಿ. ಜಯರಾಮು, ರಾಜು, ರವಿಕುಮಾರ್, ಗೋಪಾಲ್, ಕೃಷ್ಣಮೂರ್ತಿ, ನಾಗರಾಜು, ದಯಾನಂದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನೋಟ್ ಬುಕ್‌ಗಳ ವಿತರಣೆ

ಕೋಲಾರ

ಸರ್ಕಾರಿ ಶಾಲೆಯ ಮಕ್ಕಳಿಗೆ ನೋಟ್ ಪುಸ್ತಕಗಳನ್ನು ವಿತರಿಸುವ ಮೂಲಕ ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಅವರ ಹುಟ್ಟುಹಬ್ಬವನ್ನು ಅವರ ಅಭಿಮಾನಿಗಳು ಸರಳವಾಗಿ ಆಚರಿಸಿದರು. ಕೊತ್ತೂರು ಮಂಜುನಾಥ್ ಅಭಿಮಾನಿ ಬಳಗದ ಹಾಗೂ ಮಾಜಿ ತಾಲ್ಲೂಕು ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ನವೀನ್ ಗೌಡ ನೇತೃತ್ವದಲ್ಲಿ ಕೋಲಾರ ತಾಲೂಕಿನ ಗುಟ್ಟಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ಶಾಸಕ ಕೊತ್ತೂರು ಮಂಜುನಾಥ್ ಜನ್ಮದಿನದ ಪ್ರಯುಕ್ತ ನೋಟ್ ಬುಕ್ ಗಳನ್ನು ವಿತರಣೆ ಮಾಡಲಾಯಿತು.

ಮಕ್ಕಳಿಗೆ ಉಚಿತವಾಗಿ ನೋಟ್ ಪುಸ್ತಕಗಳನ್ನು ವಿತರಿಸಿ ಮಾತನಾಡಿದ ನವೀನ್ ಗೌಡ ಶಾಸಕರು ಸಾವಿರಾರು ಕೋಟಿ ಅನುದಾನ ತಂದು ಕ್ಷೇತ್ರ ಅಭಿವೃದ್ಧಿ ಮಾಡುತ್ತಿದ್ದಾರೆ. ಗ್ರಾಮೀಣ ಭಾಗದ ರಸ್ತೆಗಳನ್ನು ಶಾಸಕರು ಅಭಿವೃದ್ಧಿ ಮಾಡುತ್ತಿದ್ದು ತಾಲೂಕಿನ ಪ್ರತಿಯೊಂದು ಗ್ರಾಮಕ್ಕೂ ರಸ್ತೆ ಕಲ್ಪಿಸಲು ಯೋಜನೆಗಳನ್ನು ರೂಪಿಸುತ್ತಿದ್ದಾರೆ.

ಗ್ರಾಮೀಣ ಭಾಗದ ಮೂಲಭೂತ ಸೌಕರ್ಯಗಳ ಕಲ್ಪಿಸಲು ಆದ್ಯತೆ ನೀಡಿರುವ ಶಾಸಕರಿಗೆ ಸಚಿವಸ್ಥಾನ ಸಿಕ್ಕರೆ ಕೋಲಾರ ತಾಲ್ಲೂಕು ಅಲ್ಲದೇ ಜಿಲ್ಲೆಯ ಅಭಿವೃದ್ಧಿಗೆ ಸಹಾಯವಾಗಲಿದೆ ಎಂದು. ಪ್ರತಿವರ್ಷದಂತೆ ಈ ವರ್ಷವೂ ಶಾಸಕರ ಹುಟ್ಟು ಹಬ್ಬದ ಪ್ರಯುಕ್ತ ಹಲವು ಸಮಾಜಮುಖಿ ಕಾರ್ಯಗಳನ್ನು ಕೈಗೊಂಡಿದ್ದು ಗುಟ್ಟಹಳ್ಳಿ ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್ ಪುಸ್ತಕಗಳನ್ನು ವಿತರಿಸಲಾಗುತ್ತಿದೆ ಎಂದು ನವೀನ್ ಗೌಡ ಹೇಳಿದರು.

ಶಾಸಕ ಕೊತ್ತೂರು ಮಂಜುನಾಥ್ ಅವರಿಗೆ ಸಚಿವಸ್ಥಾನ ಸಿಗಲೇಂದು ಶಾಲೆ ಮಕ್ಕಳು ಶುಭ ಹಾರೈಸಿದರು. ಸಂಧರ್ಭದಲ್ಲಿ ಗುಟ್ಟಹಳ್ಳಿ ಹರೀಶ್, ಸತೀಶ್ ಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

# ‘ಮಕ್ಕಳ ಶಿಕ್ಷಣ ಬಡತನ ನಿರ್ಮೂಲನೆಗೆ ಪ್ರಮುಖ ಸಾಧನ’

ತುಮಕೂರು

ಮಕ್ಕಳ ಶಿಕ್ಷಣ ಬಡತನ ನಿರ್ಮೂಲನೆಗೆ ಪ್ರಮುಖ ಸಾಧನವಾಗಿದ್ದು, ಮಕ್ಕಳನ್ನು ಶಾಲೆಗೆ ಕಳುಹಿಸಲು ಪ್ರೋತ್ಸಾಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ. ಜಯಂತ್ ಕುಮಾರ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ವತಿಯಿಂದ ಶುಕ್ರವಾರ ನಗರದ ಬಾಲಭವನದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣ ಪಡೆಯುವ ಮಕ್ಕಳು ಜೀವನದ ಮೂಲಭೂತ ಪಾಠಗಳನ್ನು ಕಲಿಯುತ್ತಾರೆ ಎಂದು ಹೇಳಿದರು.

ಮಕ್ಕಳನ್ನು ಕೆಲಸಕ್ಕೆ ಇಡುವುದು ಕಾನೂನುಬಾಹಿರವಾಗಿದ್ದು, ಇದರಿಂದ ಅವರ ಭವಿಷ್ಯ ಹಾನಿಯಾಗುತ್ತದೆ. ಆದ್ದರಿಂದ ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾರ್ವಜನಿಕರು ಸಹಕರಿಸಬೇಕು ಎಂದು ಅವರು ಕರೆ ನೀಡಿದರು.

ಮಕ್ಕಳಿಗೆ ಕಾನೂನು ಅರಿವು ಮೂಡಿಸುವುದು ಅತ್ಯವಶ್ಯಕವಾಗಿದ್ದು, ಯಾರಾದರೂ ಬಾಲಕಾರ್ಮಿಕರನ್ನು ಕಂಡರೆ ತಕ್ಷಣ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬೇಕು. ಇದರಿಂದ ಮಕ್ಕಳ ಭವಿಷ್ಯವನ್ನು ರಕ್ಷಿಸಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ಕುಟುಂಬದ ಆರ್ಥಿಕ ಸಂಕಷ್ಟವನ್ನು ನೆಪವನ್ನಾಗಿ



ಮಾಡಿಕೊಂಡು ಮಕ್ಕಳನ್ನು ಕೆಲಸಕ್ಕೆ ಇಡುವುದು ಸರಿಯಲ್ಲ, ಸರ್ಕಾರ ನೀಡುವ ಸೌಲಭ್ಯಗಳನ್ನು ಬಳಸಿಕೊಂಡು ಮಕ್ಕಳಿಗೆ ಶಿಕ್ಷಣ ನೀಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಗೋಪಾಲ್ ಅವರು, ಇಂದಿನ ಮಕ್ಕಳು ನಾಳೆಯ ಪ್ರಜೆಗಳಾಗಿದ್ದು, ಅವರ ಹಕ್ಕುಗಳನ್ನು ಕಾಪಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದರು. ಬಾಲಕಾರ್ಮಿಕರನ್ನು ದುರುಪಯೋಗಪಡಿಸಿಕೊಂಡರೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.


ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರಾದ ಲೋಕೇಶ್ ಧನಪಾಲ ಹವಲೆ ಪ್ರತಿಜ್ಞಾವಿಧಿ ಬೋಧಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಸಿದ್ದರಾಮಣ್ಣ ಎಸ್., ಕಾರ್ಮಿಕ ಇಲಾಖೆ ಅಧಿಕಾರಿಗಳಾದ ಪೈರಾಜ್ ಪಾಷ, ಇಬ್ರಾಹಿಂ ಹಾಗೂ ಬಾಲಕಾರ್ಮಿಕ ಯೋಜನಾ ನಿರ್ದೇಶಕರು ರವಿಕುಮಾರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಕಟ್ಟಡ ಕಾರ್ಮಿಕರು ಮತ್ತಿತರರು ಇದ್ದರು.

ಇದಕ್ಕೂ ಮುನ್ನ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿಯಿಂದ ನಗರದ ಬಾಲಭವನದ ಸಭಾಂಗಣದವರೆಗೆ ಜಾಥಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

# ಆರ್ಯಭಟರ ವಿಡಂಬನೆ ಆರೋಪ: ಅಮೆಜಾನ್ ಇಂಡಿಯಾಗೆ ಕಾನೂನು ನೋಟಿಸ್

ಮುಂಬೈ/ನವದೆಹಲಿ

ಪ್ರಾಚೀನ ಭಾರತದ ಶ್ರೇಷ್ಠ ಗಣಿತಜ್ಞ ಹಾಗೂ ಖಗೋಳಶಾಸ್ತ್ರಜ್ಞ ಆರ್ಯಭಟ ಅವರ ಹೆಸರನ್ನು ಬಳಸಿಕೊಂಡು ವಾಣಿಜ್ಯ ಜಾಹೀರಾತಿನಲ್ಲಿ ಅವಹೇಳನಕಾರಿ ಚಿತ್ರಣ ನೀಡಲಾಗಿದೆ ಎಂದು ಆರೋಪಿಸಿ ಒಟಚಿದಂಟಿ ಖಟಿಜುಚಿ ವಿರುದ್ಧ ಕಾನೂನು ನೋಟಿಸ್ ಜಾರಿಗೊಳಿಸಲಾಗಿದೆ.



ಸುಪ್ರೀಂ ಕೋರ್ಟ್ ವಕೀಲರು ಹಾಗೂ ಹಿಂದೂ ಜನಜಾಗೃತಿ ಸಮಿತಿಗೆ ಸಂಬಂಧಿಸಿದ ಅಡ್ವೊಕೇಟ್ ಅಮಿತಾ ಸಚದೇವ ಅವರು ಅಮೆಜಾನ್ ಇಂಡಿಯಾಗೆ ನೋಟಿಸ್ ಕಳುಹಿಸಿದ್ದು, 48 ಗಂಟೆಗಳೊಳಗೆ ಭಾರತೀಯ ಜನತೆಯ ಕ್ಷಮೆಯಾಚನೆ ಮಾಡುವುದರ ಜೊತೆಗೆ ವಿವಾದಿತ ಜಾಹೀರಾತನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದ್ದಾರೆ. ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಕ್ರಿಮಿನಲ್ ಹಾಗೂ ಸಿವಿಲ್ ಮೊಕದ್ದಮೆ ಹೂಡುವುದಾಗಿ ಎಚ್ಚರಿಕೆ ನೀಡಲಾಗಿದೆ.

ಸಮಿತಿಯ ಆರೋಪದ ಪ್ರಕಾರ, ಜಾಹೀರಾತಿನಲ್ಲಿ ಆರ್ಯಭಟರ ವೇಷಧಾರಿಯನ್ನು ತೋರಿಸಿ, ಅವರನ್ನು “ಶೂನ್ಯ ಡೆಲಿವರಿ ಶುಲ್ಕದ ಸಂಶೋಧಕ” ಎಂದು ಹಾಸ್ಯಾತ್ಮಕವಾಗಿ ಚಿತ್ರಿಸಲಾಗಿದೆ. ಜಗತ್ತಿಗೆ ‘ಶೂನ್ಯ’ದ ಪರಿಕಲ್ಪನೆಯನ್ನು ನೀಡಿದ ಮಹಾನ್ ವಿಜ್ಞಾನಿಯ ಸಾಧನೆಯನ್ನು ವಾಣಿಜ್ಯ ಉದ್ದೇಶಕ್ಕಾಗಿ ತಿರುಚಿ ಬಳಸಿರುವುದು ಭಾರತದ ಜ್ಞಾನ ಪರಂಪರೆ ಮತ್ತು ರಾಷ್ಟ್ರೀಯ ಗೌರವಕ್ಕೆ ಧಕ್ಕೆ ತಂದಂತಾಗಿದೆ ಎಂದು ನೋಟಿಸ್‌ನಲ್ಲಿ ಉಲ್ಲೇಖಿಸಲಾಗಿದೆ.

ಹಿಂದೂ ಜನಜಾಗೃತಿ ಸಮಿತಿಯು, ಭಾರತೀಯ ಸಂಸ್ಕೃತಿ ಹಾಗೂ ಧಾರ್ಮಿಕ ಸಂಕೇತಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ಅಮೆಜಾನ್ ವಿರುದ್ಧ ಈ ಹಿಂದೆಯೂ ವಿವಾದಗಳು ಉದ್ಭವಿಸಿದ್ದವು ಎಂದು ಹೇಳಿದೆ. ರಾಷ್ಟ್ರೀಯ ಮಹನೀಯರು ಮತ್ತು ಸಾಂಸ್ಕೃತಿಕ ಸಂಕೇತಗಳನ್ನು ವಾಣಿಜ್ಯ ಲಾಭಕ್ಕಾಗಿ ಬಳಸುವುದು ಅಸಮಂಜಸ ಎಂದು ಸಮಿತಿ ಅಭಿಪ್ರಾಯಪಟ್ಟಿದೆ.

ನೋಟಿಸ್‌ನಲ್ಲಿ ಪರಿಷ್ಕೃತ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಕಲಂಗಳನ್ನು ಉಲ್ಲೇಖಿಸಿ, ಈ ಜಾಹೀರಾತು ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವುದು ಹಾಗೂ ಸಮಾಜದಲ್ಲಿ ಅಸಮಾಧಾನ ಉಂಟುಮಾಡುವ ಸಾಧ್ಯತೆಯನ್ನು ಹೊಂದಿದೆ ಎಂದು ವಾದಿಸಲಾಗಿದೆ.

ಸಮಿತಿಯು ಅಮೆಜಾನ್‌ಗೆ ನೀಡಿರುವ ಪ್ರಮುಖ ಬೇಡಿಕೆಗಳಲ್ಲಿ ಜಾಹೀರಾತನ್ನು ಎಲ್ಲಾ ಡಿಜಿಟಲ್ ವೇದಿಕೆಗಳಿಂದ ಶಾಶ್ವತವಾಗಿ ತೆಗೆದುಹಾಕುವುದು, ಅಧಿಕೃತ ಸಾಮಾಜಿಕ ಜಾಲತಾಣಗಳು ಮತ್ತು ವೆಬ್‌ತಾಣದಲ್ಲಿ ಬಹಿರಂಗ ಕ್ಷಮೆಯಾಚನೆ ಪ್ರಕಟಿಸುವುದು ಹಾಗೂ ಭವಿಷ್ಯದಲ್ಲಿ ರಾಷ್ಟ್ರೀಯ ಮಹನೀಯರು ಮತ್ತು ಸಂಕೇತಗಳನ್ನು ಅವಹೇಳನಗೊಳಿಸದಂತೆ ಲಿಖಿತ ಭರವಸೆ ನೀಡುವುದು ಸೇರಿವೆ.

# ‘ಆರ್‌ಎಸ್‌ಎಸ್‌ಗೆ ನೋಂದಣಿ ಅಗತ್ಯವಿಲ್ಲ’

ಕೋಲಾರ

ಆರ್‌ಎಸ್‌ಎಸ್ ಸಂಘಟನೆಗೆ ನೋಂದಣಿ ಅಗತ್ಯವಿಲ್ಲ ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸ್ಪಷ್ಟಪಡಿಸಿದ್ದಾರೆ. ಕೋಲಾರ ಜಿಲ್ಲಾ ಭಾರತೀಯ ಜನತಾ ಪಕ್ಷದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವ ಪ್ರಿಯಾಂಕಾ ಖರ್ಗೆ ಅವರ ಹೇಳಿಕೆಗೆ ತಿರುಗೇಟು ನೀಡಿದರು.

“ಆರ್‌ಎಸ್‌ಎಸ್ ಇವತ್ತು ಹುಟ್ಟಿದ ಸಂಘಟನೆ ಅಲ್ಲ. ಇದು ನೂರು ವರ್ಷಗಳ ಹಿಂದೆಯೇ ಸ್ಥಾಪನೆಯಾಗಿದೆ. ಪ್ರಿಯಾಂಕಾ ಖರ್ಗೆ ಅವರ ತಂದೆ ಹುಟ್ಟುವುದಕ್ಕೂ ಮುಂಚೆಯೇ ಈ ಸಂಘಟನೆ ಅಸ್ತಿತ್ವದಲ್ಲಿತ್ತು” ಎಂದು ಅವರು ಹೇಳಿದರು.

ಆ ಕಾಲದಲ್ಲಿ ಸಂಘಟನೆಗಳ



ನೋಂದಣಿಗೆ ಸಂಬಂಧಿಸಿದ ನಿಯಮಗಳು ಇಂದಿನಂತಿರಲಿಲ್ಲ. ಹೀಗಾಗಿ ಆರ್‌ಎಸ್‌ಎಸ್‌ಗೆ ನೋಂದಣಿ ಅಗತ್ಯವಿರಲಿಲ್ಲ ಮತ್ತು ಈಗಲೂ ನೋಂದಣಿ ಮಾಡಿಸಬೇಕಾದ ಅವಶ್ಯಕತೆ ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಆರ್‌ಎಸ್‌ಎಸ್ ಒಂದು ಸ್ವಯಂಸೇವಕ ಸಂಘಟನೆ ಎಂದು ವಿವರಿಸಿದ ನಾರಾಯಣಸ್ವಾಮಿ, “ಇದು ವ್ಯಕ್ತಿಯ ಸ್ವಯಂ ಇಚ್ಛೆಯ ಆಧಾರದ ಮೇಲೆ ನಡೆಯುವ ಸಂಘಟನೆ. ಇಲ್ಲಿ ಸಾಂಸ್ಥಿಕ ಸದಸ್ಯತ್ವ ಎಂಬ ವ್ಯವಸ್ಥೆಯೇ ಇಲ್ಲ. ಹೀಗಾಗಿ ಸದಸ್ಯತ್ವ ಅಥವಾ ನೋಂದಣಿ ಪ್ರಶ್ನೆಯೇ ಉದ್ಭವಿಸುವುದಿಲ್ಲ” ಎಂದು ಹೇಳಿದರು.

ದೇಶ ಸೇವೆ ಮಾಡುವ ಉದ್ದೇಶದಿಂದ ಕಾರ್ಯಕರ್ತರು ಸ್ವಯಂಪ್ರೇರಿತವಾಗಿ ಕಾರ್ಯನಿರ್ವಹಿಸುತ್ತಾರೆ. ಇಂತಹ ಸೇವಾ ಚಟುವಟಿಕೆಗಳಿಗೆ ಪ್ರತ್ಯೇಕ ನೋಂದಣಿಯ ಅಗತ್ಯವಿಲ್ಲ ಎಂದು ಅವರು ಪ್ರತಿಪಾದಿಸಿದರು.

ರಾಜಕೀಯ ಟೀಕೆಗಳ ಕುರಿತು ಪ್ರತಿಕ್ರಿಯಿಸಿದ ಅವರು, “ಆರ್‌ಎಸ್‌ಎಸ್‌ನ್ನು ಗುರಿಯಾಗಿಸಿ ಟೀಕೆ ಮಾಡುವ ಬದಲು ಆಡಳಿತದಲ್ಲಿರುವವರು ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಬೇಕು” ಎಂದು ಹೇಳಿದರು.

ಸಂವಿಧಾನಬದ್ಧವಾಗಿ ಜನರಿಗೆ ನ್ಯಾಯ ಒದಗಿಸುವುದು ಮತ್ತು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದು ಸರ್ಕಾರದ ಕರ್ತವ್ಯವಾಗಿದೆ. “ಬೇರೆಯವರ ಮೇಲೆ ಪ್ರಕರಣ ದಾಖಲಿಸುವ ಮಾತು ಮಾಡುವ ಮೊದಲು ತಮ್ಮ ಆಡಳಿತದಲ್ಲಿ ಏನು ಸಾಧನೆ ಮಾಡಿದ್ದಾರೆ ಎಂಬುದನ್ನು ತೋರಿಸಲಿ” ಎಂದು ರಾಜ್ಯ ಸರ್ಕಾರಕ್ಕೆ ಸವಾಲು ಹಾಕಿದರು.

# ಬಿಸಿಯೂಟದ ಕುಕ್ಕರ್ ವಿತರಣೆ

ಕೋಲಾರ

ರೈತರಿಗೆ ಗುಣಮಟ್ಟದ ಗೊಬ್ಬರ ಉತ್ಪಾದಿಸಿ ವಿತರಿಸುತ್ತಿರುವ ಕ್ರಿಬ್ಕೋ ಸಂಸ್ಥೆ ಇದೀಗ ಸಾಮಾಜಿಕ ಕಾರ್ಯಗಳಿಗೂ ಮುಂದಾಗಿದ್ದು, ಶಾಲೆಗಳ ಬಲವರ್ಧನೆಗೆ ಸಹಾಯಹಸ್ತ ಚಾಚುತ್ತಿದೆ ಎಂದು ಸಂಸ್ಥೆಯ ರಾಜ್ಯ ಮಾರಾಟ ವ್ಯವಸ್ಥಾಪಕ ಎಂ.ಶ್ರೀನಿವಾಸಬಾಬು ತಿಳಿಸಿದರು.

ಭಾರತಿ ಕೋಆಪರೇಟಿವ್ ಲಿಮಿಟೆಡ್‌ನಿಂದ ತಾಲ್ಲೂಕಿನ ಗರುಡನಹಳ್ಳಿ ಸರ್ಕಾರಿ ಶಾಲೆಯ ಮಕ್ಕಳಿಗೆ ಬ್ಯಾಗ್,ಅಕ್ಷರದಾಸೋಹ ಅಡುಗೆ ಮನೆಗೆ ಕುಕ್ಕರ್ ಮತ್ತಿತರ ಸಲಕರಣೆಗಳನ್ನು ವಿತರಿಸಿ ಅವರು ಮಾತನಾಡುತ್ತಿದ್ದರು.

ಸರ್ಕಾರಿ ಶಾಲೆಗಳು ಉಳಿಯಬೇಕು ಆಗ ಮಾತ್ರ ಸಾಮಾಜಿಕ ನ್ಯಾಯಕ್ಕೆ ಅರ್ಥ ಬರುತ್ತದೆ ಎಂದ ಅವರು, ವಿವಿಧ ಕಂಪನಿಗಳು, ಉಳ್ಳವರು ಸರ್ಕಾರಿ ಶಾಲೆಗಳನ್ನು ಉಳಿಸುವತ್ತ ಚಿಂತನೆ ಮಾಡಬೇಕು, ಮತ್ತಷ್ಟು ನೆರವು ಹರಿಸಬೇಕು ಎಂದರು.

ಮಕ್ಕಳು ಮೊಬೈಲ್‌ಗೆ ಬಲಿಯಾಗದಿರಿ ಎಂದು ಕಿವಿಮಾತು ಹೇಳಿದ ಅವರು,ಶಾಲೆಗೆ ಗೈರಾಗದೇ ಬನ್ನಿ, ಇಲ್ಲಿ ಸಿಗುವ ಸೌಲಭ್ಯಗಳನ್ನು ಬಳಸಿಕೊಂಡು ನೀವು ಸಮಾಜದಲ್ಲಿ ಸಾಧಕರಾಗಿ ಹೊರಹೊಮ್ಮಿ ಎಂದು ತಿಳಿಸಿ, ನೀವು ಉನ್ನತ ಸ್ಥಾನಕ್ಕೆ ಹೋದ ನಂತರ ನೀವು ಕಲಿತ ಶಾಲೆಗೆ ನೆರವು ನೀಡಿ ಎಂದು ಸಲಹೆ ನೀಡಿದರು.

ಶಾಲೆಯ ಮಕ್ಕಳ ಶಿಸ್ತು, ಸಂಯಮದ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಶಿಕ್ಷಣದ ಜತೆಯಲ್ಲಿ ಸಂಸ್ಕಾರ ಕಲಿಯುವುದು ಅತಿ ಮುಖ್ಯವಾಗಿದೆ, ಈ ನಿಟ್ಟಿನಲ್ಲಿ ಮಕ್ಕಳು ಸರ್ಕಾರಿ ಶಾಲೆಯಲ್ಲಿ ಓದುತ್ತಿದ್ದೇನೆಂಬ ಕೀಳರಿಮೆ ತೊರೆದು ಸಾಧಕರಾಗಿ ಹೊರಹೊಮ್ಮಿ ಎಂದು ಕಿವಿಮಾತು ಹೇಳಿದರು.

ಭಾರತಿ ಕೋ ಆಪರೇಟಿವ್ ಲಿಮಿಟೆಡ್ 1980 ರಲ್ಲಿ ಸ್ಥಾಪಿತವಾದ ಪ್ರಮುಖ ಭಾರತೀಯ ರಾಷ್ಟ್ರೀಯ ಸಹಕಾರಿ ಸಂಸ್ಥೆಯಾಗಿದೆ. ಗುಣಮಟ್ಟದ ರಸಗೊಬ್ಬರಗಳ (ಪ್ರಮುಖವಾಗಿ ಯೂರಿಯಾ) ಉತ್ಪಾದನೆ ಮತ್ತು ವಿತರಣೆಯ ಮೂಲಕ ರೈತರನ್ನು ಸಬಲೀಕರಣಗೊಳಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಗುಜರಾತ್‌ನ ಹಜಿರಾದಲ್ಲಿ ಮುಖ್ಯ ಉತ್ಪಾದನಾ ಘಟಕವನ್ನು ಹೊಂದಿರುವ ಸಹಕಾರ ತತ್ವಗಳಡಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಜೈವಿಕ ಗೊಬ್ಬರಗಳು, ಬಿಟಿ ಹತ್ತಿ ಹೈಬ್ರಿಡ್ ಬೀಜಗಳು, ಮತ್ತು ಇತ್ತೀಚೆಗೆ ಕೃಷಿ ಸರಕುಗಳ ಆಮದು–ರಫ್ತಿಗಾಗಿ ಕ್ರಿಬ್ಕೋ ಅಗ್ರಿ ಬಿಸಿನೆಸ್ ಲಿಮಿಟೆಡ್ ಸ್ಥಾಪಿಸಿದೆ. ದೇಶದಾದ್ಯಂತ 9478 ಕ್ಕೂ ಹೆಚ್ಚು ಸಹಕಾರಿ ಸಂಘಗಳು ಇದರ ಷೇರು ಬಂಡವಾಳದಲ್ಲಿ ಪಾಲು ಹೊಂದಿವೆ ಎಂದು ತಿಳಿಸಿದರು.

ಮುಖ್ಯಶಿಕ್ಷಕ ಗಂಗಾಧರಪ್ಪ ಮಾತನಾಡಿ, ಸರ್ಕಾರಿ ಶಾಲೆಗೆ ನೆರವು ನೀಡುವ ಉದ್ದೇಶದಿಂದ ಬೆಂಗಳೂರಿನಿಂದ ಬಂದು ಸಹಾಯಹಸ್ತ ಚಾಚಿದ್ದಾರೆ, ಅವರಿಗೆ ಶಾಲೆಯ ಪರವಾಗಿ ಧನ್ಯವಾದ ತಿಳಿಸುವುದಾಗಿ ತಿಳಿಸಿದ ಅವರು, ಮಕ್ಕಳು ಅವರು ನೀಡಿರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.



ಕೇಂದ್ರ ಹಣಕಾಸು ಖಾತೆ ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಮತ್ತು ದೇವನಹಳ್ಳಿ ಮಂಡಲ ಅಧ್ಯಕ್ಷ ಅಂಬರೀಷ್ ಗೌಡ ಅವರು ಶನಿವಾರ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು.

16/06/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಅಪಘಾತ: ಕಾರ್ಪೆಂಟರ್ ಬಲಿ

ಬೆಂಗಳೂರು

ಅತಿ ವೇಗವಾಗಿ ಹೋಗುತ್ತಿದ್ದ ಕಾರೊಂದು ನಿಯಂತ್ರಣ ತಪ್ಪಿ ಎರಡು ಬೈಕ್‌ಗಳಿಗೆ ಡಿಕ್ಕಿ ಹೊಡೆದು ಪಲ್ಟಿಯಾದ ಪರಿಣಾಮ ಕಾರಿನಲ್ಲಿದ್ದ ವ್ಯಕ್ತಿಯೊಬ್ಬರು ಮೃತಪಟ್ಟಿರುವ ಘಟನೆ ಇಂದು ಬೆಳಗ್ಗೆ ಕೆಂಗೇರಿ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವರದಿಯಾಗಿದೆ.

ಮೃತ ವ್ಯಕ್ತಿಯನ್ನು ಸುಖದೇವ್ (45) ಎಂದು ಗುರುತಿಸಲಾಗಿದೆ. ಇವರು ವೃತ್ತಿಯಲ್ಲಿ ಕಾರ್ಪೆಂಟರ್. ಬೆಳಗ್ಗೆ 6.45 ರ ಸುಮಾರಿನಲ್ಲಿ ನಾಲ್ಕು ಮಂದಿ ಕಾರಿನಲ್ಲಿ ನಗರದಿಂದ ಮೈಸೂರು ಕಡೆಗೆ ತೆರಳುತ್ತಿದ್ದಾಗ ಮೈಸೂರು ರಸ್ತೆಯ ಮೈಲಸಂದ್ರ ಗೇಟ್ ಬಳಿ ಕಾರು ಚಾಲಕನ ನಿಯಂತ್ರಣ ತಪ್ಪಿ ಎರಡು ಬೈಕ್‌ಗಳಿಗೆ ಅಪ್ಪಳಿಸಿ ನಂತರ ಉರುಳಿ ಬಿದ್ದಿದೆ.

ಪರಿಣಾಮ ಕಾರಿನಲ್ಲಿದ್ದ ನಾಲ್ವರ ಪೈಕಿ ಒಬ್ಬರು ಮೃತಪಟ್ಟು, ಮೂವರು ಗಾಯಗೊಂಡಿದ್ದಾರೆ. ಅಪಘಾತದಿಂದಾಗಿ ಬೈಕ್‌ಗಳಲಿದ್ದ ಇಬ್ಬರು ಸವಾರರು ಸಹ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸುದ್ದಿ ತಿಳಿದು ಕೆಂಗೇರಿ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.ಅಪಘಾತಕ್ಕೆ ಚಾಲಕನ ಅತಿ ವೇಗ, ಅಜಾಗರೂಕತೆ ಚಾಲನೆಯೇ ಕಾರಣವೆಂಬುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

# ‘ಮೋದಿಜೀ ನೇತೃತ್ವದಲ್ಲಿ ಅಭಿವೃದ್ಧಿ ಪರ್ವ’

ಮಂಗಳೂರು

ಭಾರತವು ಪ್ರಧಾನಮಂತ್ರಿ ಆದರಣೀಯ ನರೇಂದ್ರ ಮೋದಿಜೀ ಅವರ ನೇತೃತ್ವದಲ್ಲಿ ಅಭಿವೃದ್ಧಿಯಲ್ಲಿ ವಿಶೇಷ ಸಾಧನೆ ಮಾಡಿದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಬಿಜೆಪಿ ಕರ್ನಾಟಕ ರಾಜ್ಯದ ಪ್ರಭಾರಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರು ಮೆಚ್ಚುಗೆ ಸೂಚಿಸಿ ಪ್ರಧಾನಿಯವರನ್ನು ಅಭಿನಂದಿಸಿದರು.

ಇಂದು ಭಾರತೀಯ ಜನತಾ ಪಾರ್ಟಿ, ದಕ್ಷಿಣ ಕನ್ನಡ ಜಿಲ್ಲಾ ವತಿಯಿಂದ ಪಾಲೆಮಾರ್ ಗಾರ್ಡನ್‌ನಲ್ಲಿ ನಡೆದ ವಿಕಸಿತ ಭಾರತ ಸಂಕಲ್ಪ ಸಮಾವೇಶದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಪಕ್ಷ ಸಂಘಟನೆ ಬಲವರ್ಧನೆ, ಕಾರ್ಯಕರ್ತರ ಮಾರ್ಗದರ್ಶನ ಹಾಗೂ



ವಿಕಸಿತ ಭಾರತದ ಸಂಕಲ್ಪ ಸಾಕಾರಗೊಳಿಸುವ ನಿಟ್ಟಿನಲ್ಲಿ ಮೋದಿಜೀ ಅವರ ನಾಯಕತ್ವ ಮತ್ತು ಕೊಡುಗೆಗಳು ಪ್ರೇರಣಾದಾಯಕವಾಗಿವೆ ಎಂದರಲ್ಲದೇ, ಅವನ್ನು ಕಾರ್ಯಕರ್ತರು ಮತ್ತು ಮುಖಂಡರು ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ನಿಜವಾದ ಸಾಧಕರನ್ನು ಗುರುತಿಸಿ ಗೌರವಿಸಲಾಯಿತು. ಭಾರತೀಯ ಸೇನೆಯಲ್ಲಿ ದೇಶಸೇವೆ ಮಾಡಿದ ಯೋಧರು, ನಿವೃತ್ತಿಯ ನಂತರವೂ ಸಮಾಜ ಮತ್ತು ಪಕ್ಷಕ್ಕಾಗಿ ಶ್ರಮಿಸಿದ ಹಿರಿಯರು, ಸ್ಮಶಾನ ಸೇವಕರು, ಪೌರ ಕಾರ್ಮಿಕರು, ಕ್ರೀಡಾಪಟುಗಳು, ಮೀನುಗಾರರು, ತಾರಸಿ ಕೃಷಿ ಹಾಗೂ ಕೃಷಿ ಕ್ಷೇತ್ರದಲ್ಲಿ ಸಾಧನೆಗೈದ ಹಲವಾರು ಗಣ್ಯರನ್ನು ರಾಜ್ಯ ಪ್ರಭಾರಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರ ಸಮ್ಮುಖದಲ್ಲಿ ಸತೀಶ್ ಕುಂಪಲ ಮತ್ತು ಇತರ ಗಣ್ಯರು ಸನ್ಮಾನಿಸಿದರು.

ಸಂಸದ ಕ್ಯಾಪ್ಟನ್ ಬೃಜೇಶ್ ಚೌಟ, ಜಿಲ್ಲಾಧ್ಯಕ್ಷ ಜೆ. ಕೃಷ್ಣ ಪಾಲೇಮಾರ್, ಶಾಸಕರಾದ ವೇದವ್ಯಾಸ ಕಾಮತ್, ಡಾ.ಭರತ್ ಶೆಟ್ಟಿ, ರಾಜೇಶ್ ನಾಯಕ್, ಉಮಾನಾಥ ಕೋಟ್ಯಾನ್, ಹರೀಶ್ ಪೂಂಜ, ಭಾಗೀರಥಿ ಮುರುಳ್ಯ, ವಿಧಾನಪರಿಷತ್ ಸದಸ್ಯರಾದ ಕಿಶೋರ್ ಕುಮಾರ್ ಪುತ್ತೂರು, ಪ್ರತಾಪಸಿಂಹ ನಾಯಕ್, ಮಾಜಿ ಸಚಿವ ಎಸ್.ಅಂಗರ, ವಿಧಾನಪರಿಷತ್ ಮಾಜಿ ಸದಸ್ಯರಾದ ಬಾಲಕೃಷ್ಣ ಭಟ್, ಮೋನಪ್ಪ ಭಂಡಾರಿ, ಸಹ ಪ್ರಭಾರಿ ಜಯಂತ್ ಕೋಟ್ಯಾನ್, ಮಾಜಿ ಶಾಸಕರು, ಜಿಲ್ಲಾ ಮತ್ತು ಮಂಡಲದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು. ಸಮಾವೇಶದ ಸ್ಥಳಕ್ಕೆ ಆಗಮಿಸಿದ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರಿಗೆ ಆತ್ಮೀಯ ಮತ್ತು ಗೌರವಪೂರ್ವಕ ಸ್ವಾಗತ ಕೋರಲಾಯಿತು.

ಬೆಳಿಗ್ಗೆ ಶಾಸಕ ವೇದವ್ಯಾಸ ಕಾಮತ್ ಅವರ ನಿವಾಸದಲ್ಲಿ ಉಪಹಾರ ಕೂಟದಲ್ಲಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರು ಭಾಗವಹಿಸಿದ್ದರು. ಪ್ರಧಾನ ಮಂತ್ರಿ ಮೋದಿಜೀ ಅವರ ಆಶಯದಂತೆ ತಾಯಿಯ ಹೆಸರಿನಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ರಾಷ್ಟ್ರೀಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯ ಪ್ರಭಾರಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರು ಪಾಲ್ಗೊಂಡಿದ್ದರು.

## ‘ಛಲದಿಂದ ವಿದ್ಯಾಭ್ಯಾಸ ಮಾಡಿದರೆ ಉನ್ನತ ಸಾಧನೆ ಸಾಧ್ಯ’

ಚಿಕ್ಕಬಳ್ಳಾಪುರ

ಸಮುದಾಯದ ವಿದ್ಯಾರ್ಥಿಗಳು ಛಲ ಮತ್ತು ಶ್ರದ್ಧೆಯಿಂದ ವಿದ್ಯಾಭ್ಯಾಸ ಮಾಡಿದರೆ ಮಾತ್ರ ಉನ್ನತ ವ್ಯಾಸಂಗ ಹಾಗೂ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ವಿದ್ಯಾ ಕಲಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಬಿಜಿ ಹರೀಶ್ ಹೇಳಿದರು.

ನಗರದ ಸರ್ ಎಂ.ವಿ. ರಸ್ತೆಯಲ್ಲಿರುವ ವಿದ್ಯಾ ಕಲಾಭಿವೃದ್ಧಿ ಟ್ರಸ್ಟ್ ಕಚೇರಿಯಲ್ಲಿ 2026–27ನೇ ಸಾಲಿನ ತಾಲೂಕು ಸವಿತಾ ಸಮಾಜದ ಬಡ ವಿದ್ಯಾರ್ಥಿಗಳಿಗೆ 1ರಿಂದ 7ನೇ ತರಗತಿವರೆಗಿನ ಉಚಿತ ಬ್ಯಾಗ್ ಹಾಗೂ ಶಿಕ್ಷಣ ಪರಿಕರಗಳ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಕಲಿಕೆಯ ಅವಧಿಯಲ್ಲಿ ಮನಸ್ಸನ್ನು ಬೇರೆಡೆಗೆ ಹರಿಸದೆ ಶ್ರದ್ಧೆ ಹಾಗೂ ಛಲದಿಂದ ವ್ಯಾಸಂಗ ಮಾಡಬೇಕು. ಕಳೆದ ಐದು–ಆರು ವರ್ಷಗಳಿಂದ ಟ್ರಸ್ಟ್ ವತಿಯಿಂದ ವಿದ್ಯಾರ್ಥಿಗಳಿಗೆ ಶಿಕ್ಷಣ ಪರಿಕರಗಳು, ವಿದ್ಯಾರ್ಥಿವೇತನ ಹಾಗೂ ಪ್ರೋತ್ಸಾಹಧನ ನೀಡಲಾಗುತ್ತಿದ್ದು, ಇದು ಬಡ ವಿದ್ಯಾರ್ಥಿಗಳಿಗೆ ಸಹಕಾರಿಯಾಗಿದೆ ಎಂದು ಹೇಳಿದರು.

ಸಮುದಾಯದ ವಿದ್ಯಾರ್ಥಿಗಳು ಎಲ್ಲ ಕ್ಷೇತ್ರಗಳಲ್ಲೂ ತಮ್ಮದೇ ಆದ ಗುರುತು ಮೂಡಿಸಬೇಕು. ಉನ್ನತ ವ್ಯಾಸಂಗದತ್ತ ಗಮನ ಹರಿಸಿ ಉತ್ತಮ ಸಾಧನೆ ಮಾಡಬೇಕು ಎಂದು ಕರೆ ನೀಡಿದರು.

ಟ್ರಸ್ಟ್ ಕಾರ್ಯದರ್ಶಿ ಬಿ.ವೆಂಕಟೇಶ್ ಮಾತನಾಡಿ, “ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳು ದೊಡ್ಡ ಗುರಿ ಇಟ್ಟುಕೊಂಡು ಮುನ್ನಡೆಯಬೇಕು. ಆಗ ಮಾತ್ರ ಪೋಷಕರ ಕನಸು ನನಸು ಮಾಡಲು ಸಾಧ್ಯವಾಗುತ್ತದೆ” ಎಂದು ಹೇಳಿದರು.

ಖಜಾಂಚಿ ಆರ್. ಮೋಹನ್ ಮಾತನಾಡಿ, ವಿದ್ಯಾ ಕಲಾಭಿವೃದ್ಧಿ ಟ್ರಸ್ಟ್ ಜಿಲ್ಲೆಯಲ್ಲಿ ಮಾದರಿಯಾಗಿ ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದೆ. ಸಮಾಜದ ಜನರು ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಮುನ್ನಡೆಯಬೇಕು. ಸರ್ಕಾರದ ವಿವಿಧ ಸೌಲಭ್ಯಗಳನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.ಮ

ಈ ಸಂದರ್ಭದಲ್ಲಿ ಟ್ರಸ್ಟ್ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗ್ ಹಾಗೂ ಶಿಕ್ಷಣ ಪರಿಕರಗಳನ್ನು ವಿತರಿಸಲಾಯಿತು.

## ‘ಬಾಲಕಾರ್ಮಿಕ ಪದ್ಧತಿ ಒಂದು ಸಾಮಾಜಿಕ ಪಿಡುಗು’

ಮುಳಬಾಗಿಲು

ಬಾಲಕಾರ್ಮಿಕ ಪದ್ಧತಿ ಸಮಾಜಕ್ಕೆ ದೊಡ್ಡ ಪಿಡುಗಾಗಿದ್ದು, ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಪ್ರತಿಯೊಬ್ಬರೂ ಸಹಕಾರ ನೀಡಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಗೌಡ ಜಗದೀಶ್ ರುದ್ರೆ ಹೇಳಿದರು.

ತಾಲೂಕಿನ ಕೊತ್ತೂರು ಗ್ರಾಮದ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಹಾಗೂ ಅರಣ್ಯ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಹಾಗೂ ಕಾನೂನು ಅರಿವು–ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲಕಾರ್ಮಿಕ ಪದ್ಧತಿ ವಿರುದ್ಧ




ಸಮಾಜದಲ್ಲಿ ಜಾಗೃತಿ ಮೂಡಿಸುವುದು ಮತ್ತು ಮಕ್ಕಳ ಹಕ್ಕುಗಳನ್ನು ರಕ್ಷಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಅವರು ತಿಳಿಸಿದರು.

ಪ್ರಿನ್ಸಿಪಲ್ ಸಿವಿಲ್ ನ್ಯಾಯಾಧೀಶ ಹರೀಶ್ ಜಿ. ಮಾತನಾಡಿ, ಮಕ್ಕಳು ದೇಶದ ಆಸ್ತಿ ಹಾಗೂ ಭವಿಷ್ಯದ ನಿರ್ಮಾತೃಗಳು. ಅಂತಹ ಮಕ್ಕಳನ್ನು ದುಡಿಮೆಗೆ ತಳ್ಳದೆ, ಉತ್ತಮ ಶಿಕ್ಷಣ ನೀಡಿ ಸಮಾಜಮುಖಿಯಾಗಿ ಬೆಳೆಸುವುದು ಪೋಷಕರ ಕರ್ತವ್ಯ ಎಂದು ಹೇಳಿದರು.

ತಾಲೂಕು ವಕೀಲರ ಸಂಘದ ಅಧ್ಯಕ್ಷ ಪಿ.ಎಂ. ಸದಾಶಿವಯ್ಯ ಮಾತನಾಡಿ, ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಹಲವು ವರ್ಷಗಳಿಂದ ಆಚರಿಸಲಾಗುತ್ತಿ ದೆಯಾದರೂ, ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದರೂ ಬಾಲಕಾರ್ಮಿಕ ಪದ್ಧತಿಯಿಂದ ಸಂಪೂರ್ಣ ಮುಕ್ತವಾಗಲು ಇನ್ನೂ ಸಾಧ್ಯವಾಗಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಎಪಿಪಿ ನಾಗರಾಜ್, ಪ್ರಧಾನ ಕಾರ್ಯದರ್ಶಿ ಎಂ. ರಮೇಶ್, ಹಿರಿಯ ವಕೀಲರಾದ ಶೇಖರ್, ಎಂ. ವೆಂಕಟರವಣಪ್ಪ, ನಟರಾಜ್, ಸಿ. ಸುಬ್ರಮಣ್ಯಂ, ವೆಂಕಟಕೃಷ್ಣ ರೆಡ್ಡಿ, ಶ್ಯಾಲಿನಿ ರಾಜೇಶ್ವರಿ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಕಾಲೇಜು ಅವ್ಯವಸ್ಥೆ, ಅಕ್ಕಿ ಹಗರಣ ವಿಚಾರವಾಗಿ ಕಿಡಿ

ಬೆಂಗಳೂರು

ಕಲಬುರಗಿಯ ಸರ್ಕಾರಿ ಕಾಲೇಜಿನಲ್ಲಿ ಮೇಲ್ಛಾವಣಿ ಕುಸಿದು ವಿದ್ಯಾರ್ಥಿನಿಯರು ಗಾಯಗೊಂಡ ಘಟನೆ ಹಿನ್ನೆಲೆಯಲ್ಲಿ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಅವರು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.



ಸಾಮಾಜಿಕ ಜಾಲತಾಣ ‘ಎಕ್ಸ್’ನಲ್ಲಿ ಪೋಸ್ಟ್ ಮಾಡಿರುವ ಅವರು, “ಸಂವಿಧಾನ, ಪ್ರಜಾಪ್ರಭುತ್ವ ಮತ್ತು ರಾಜಕೀಯ ವಿಚಾರಗಳ ಬಗ್ಗೆ ಪ್ರತಿದಿನ ಉಪದೇಶ ನೀಡುವ ಪ್ರಿಯಾಂಕ್ ಖರ್ಗೆ ಅವರಿಗೆ, ತಮ್ಮ ಸ್ವಂತ ಜಿಲ್ಲೆಯ ಸರ್ಕಾರಿ ಕಾಲೇಜಿನ ಮೇಲ್ಛಾವಣಿಯನ್ನೇ ಸುರಕ್ಷಿತವಾಗಿಡಲು ಸಾಧ್ಯವಾಗಿಲ್ಲ” ಎಂದು ಟೀಕಿಸಿದ್ದಾರೆ.

ಕಲಬುರಗಿ ನಗರದ ಸರ್ಕಾರಿ ಪದವಿಪೂರ್ವ ಬಾಲಕಿಯರ ಕಾಲೇಜಿನಲ್ಲಿ ತರಗತಿ ನಡೆಯುತ್ತಿದ್ದಾಗಲೇ ಮೇಲ್ಛಾವಣಿಯ ಸಿಮೆಂಟ್ ಪದರು ಕುಸಿದು ಐದು ವಿದ್ಯಾರ್ಥಿನಿಯರು ಗಾಯಗೊಂಡಿರುವ ಘಟನೆ ಸರ್ಕಾರದ ನಿರ್ಲಕ್ಷ್ಯದ ಪರಮಾವಧಿ ಎಂದು ಅಶೋಕ್ ಆರೋಪಿಸಿದ್ದಾರೆ.

“80ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ತರಗತಿಯಲ್ಲಿ ಇದ್ದ ಸಂದರ್ಭದಲ್ಲಿ ಈ ಘಟನೆ ನಡೆದಿರುವುದು ಅತ್ಯಂತ ಗಂಭೀರ ಸಂಗತಿ. ಇದು ಕೇವಲ ಅಪಘಾತವಲ್ಲ, ಸರ್ಕಾರದ ಆಡಳಿತ ವೈಫಲ್ಯದ ಸಂಕೇತ” ಎಂದು ಅವರು ಹೇಳಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರು ಸಾಮಾಜಿಕ ಜಾಲತಾಣಗಳಲ್ಲಿ ರಾಜಕೀಯ ಚರ್ಚೆಗಳಲ್ಲಿ ತೊಡಗಿರುವ ಬದಲು ತಮ್ಮ ಜಿಲ್ಲೆಯ ಶಿಕ್ಷಣ ಸಂಸ್ಥೆಗಳ ಸ್ಥಿತಿಗತಿಗಳತ್ತ ಗಮನ ಹರಿಸಬೇಕು ಎಂದು ಅವರು ಆಗ್ರಹಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಉದ್ದೇಶಿಸಿ ಮಾತನಾಡಿದ ಅಶೋಕ್, ಗಾಯಗೊಂಡ ವಿದ್ಯಾರ್ಥಿನಿಯರಿಗೆ ತಕ್ಷಣ ಉಚಿತ ಹಾಗೂ ಗುಣಮಟ್ಟದ ಚಿಕಿತ್ಸೆ ಒದಗಿಸಬೇಕು. ಘಟನೆಯಲ್ಲಿ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಎಲ್ಲಾ ಸರ್ಕಾರಿ ಶಾಲೆ ಹಾಗೂ ಕಾಲೇಜುಗಳ ಸುರಕ್ಷತಾ ಲೆಕ್ಕಪರಿಶೋಧನೆಯನ್ನು ತಕ್ಷಣ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಇನ್ನೊಂದು ಪೋಸ್ಟ್‌ನಲ್ಲಿ ಪಡಿತರ ಅಕ್ಕಿ ಹಗರಣ ವಿಚಾರವನ್ನೂ ಉಲ್ಲೇಖಿಸಿದ ಆರ್.ಅಶೋಕ್, ಶಾಂತಿನಗರದ ನಿಗಮದ ಗೋದಾಮಿನಲ್ಲಿ ದಾಖಲೆ ಇಲ್ಲದ ನೂರಾರು ಅಕ್ಕಿ ಚೀಲಗಳು ಪತ್ತೆಯಾಗಿರುವುದನ್ನು ಪ್ರಶ್ನಿಸಿದ್ದಾರೆ.

“ಗೋದಾಮುಗಳಲ್ಲಿ ಸಿಸಿಟಿವಿ ವ್ಯವಸ್ಥೆಯೇ ಇಲ್ಲ. ಬಡವರ ಪಡಿತರ ಅಕ್ಕಿಯನ್ನು ಪಾಲಿಶ್ ಮಾಡಿ ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡುವ ಮಾಫಿಯಾಕ್ಕೆ ಸರ್ಕಾರದ ರಕ್ಷಣೆ ಇಲ್ಲದೆ ಇದು ಸಾಧ್ಯವೇ?” ಎಂದು ಪ್ರಶ್ನಿಸಿದರು.

ಅಕ್ಕಿ ಹಗರಣದಲ್ಲಿ ಭಾಗಿಯಾಗಿರುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು, ಸೂತ್ರಧಾರರನ್ನು ಜೈಲಿಗೆ ಕಳುಹಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

## ‘ಆರ್ಥಿಕ ಬೆಳವಣಿಗೆಗೆ ಸಹಕಾರಿ ಸಂಸ್ಥೆಗಳು ಸಹಕಾರಿ’

ತುಮಕೂರು

ಸಂಘಜೀವಿ ಮನುಷ್ಯ ಸಹಕಾರ ಜೀವಿಯಾಗಿ ಪರಸ್ಪರ ಬೆಳವಣಿಗೆಯಾಗಲು ಸಹಕಾರ ಕ್ಷೇತ್ರ ಸಹಕಾರಿಯಾಗಿದೆ. ಸಹಕಾರ ಸಂಸ್ಥೆಗಳಿಂದ ಸಾಲಸೌಲಭ್ಯ ಪಡೆದು ತಾನೂ ಬೆಳೆದು ಸಂಸ್ಥೆಯ ಬೆಳವಣಿಗೆಗೂ ನೆರವಾಗುವ ಈ ಕ್ಷೇತ್ರವು ಮತ್ತಷ್ಟು ವಿಸ್ತಾರವಾಗಿ ಬೆಳೆದು ಹೆಚ್ಚು ಜನರಿಗೆ ಸಹಾಯವಾಗಲಿ ಎಂದು ಹಿರೇಮಠದ ಡಾ. ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಆಶಿಸಿದರು.

ಶನಿವಾರ ನಗರದಲ್ಲಿ ತುಮಕೂರು ಸಿಟಿ ಕ್ರೆಡಿಟ್ ಸೌಹಾರ್ದ ಕೋ–ಆಪರೇಟಿವ್ ಸೊಸೈಟಿಯ 14ನೇ ವರ್ಷದ ಸರ್ವಸದಸ್ಯರ ಸಭೆ ಉದ್ಘಾಟಿಸಿ ಮಾತನಾಡಿದ ಸ್ವಾಮೀಜಿ, ತುಮಕೂರು ಜಿಲ್ಲೆಯು ಸಹಕಾರಿ ಕ್ಷೇತ್ರದಲ್ಲಿ ತನ್ನದೇ ಆದ ವಿಶಿಷ್ಟತೆ ಹೊಂದಿದೆ. ಜಿಲ್ಲೆಯ ಸಹಕಾರಿ ಪಿತಾಮಹರಾಗಿರುವ ಕೆ.ಎನ್. ರಾಜಣ್ಣನವರ ಕಾಳಜಿ, ಪ್ರೋತ್ಸಾಹದಿಂದಾಗಿ ಜಿಲ್ಲೆಯಲ್ಲಿ 3 ಸಾವಿರಕ್ಕೂ ಹೆಚ್ಚು ಸಹಕಾರಿ ಸಂಸ್ಥೆಗಳು ಸ್ಥಾಪನೆಯಾಗಿ ಲಕ್ಷಾಂತರ ಜನರಿಗೆ ಸಹಕಾರಿಯಾಗಿವೆ ಎಂದರು.

ನೀವು ಚೆನ್ನಾಗಿದ್ದರೆ ನಾವೂ ಚೆನ್ನಾಗಿರುತ್ತೇವೆ ಎಂಬುದು ಸಹಕಾರಿಯ ಉದ್ದೇಶ. ಸರ್ವಜನರೂ ಸುಖವಾಗಿರಬೇಕು ಎಂಬ ಬಹುಜನರ ಹಿತ ಬಯಸುವ ಸಹಕಾರಿ ಕ್ಷೇತ್ರ ಪರಸ್ಪರ ಬೆಳವಣಿಗೆಗೆ ಪೂರಕವಾಗಿದೆ. ಸಹಾಯಾಸ್ತವು ಈಗ ಸಹಕಾರಿ ಹಸ್ತವಾಗಿದೆ. ಸಹಕಾರಿ ಸಂಸ್ಥೆಗಳನ್ನು ಬಳಸಿಕೊಂಡು ಆರ್ಥಿಕವಾಗಿ ಬೆಳವಣಿಗೆಯಾಗಬಹುದು, ಸಕಾಲದಲ್ಲಿ ಸಾಲ ಮರುಪಾವತಿ ಮಾಡಿ ಸಂಸ್ಥೆಯನ್ನೂ ಉಳಿಸಿ ಬೆಳೆಸಬೇಕು ಎಂದು ಹೇಳಿದರು.

14 ವರ್ಷಗಳ ಹಿಂದೆ ಸಮಾನಮನಸ್ಕರು ಸ್ಥಾಪನೆ ಮಾಡಿದ



ತುಮಕೂರು ಸಿಟಿ ಕ್ರೆಡಿಟ್ ಸೌಹಾರ್ದ ಕೋ–ಆಪರೇಟಿವ್ ಸೊಸೈಟಿ ದೊಡ್ಡ ಪ್ರಮಾಣದಲ್ಲಿ ಆರ್ಥಿಕ ಚಟುವಟಿಕೆ ನಡೆಸಿ ಬಹಳಷ್ಟು ಜನರ ಆರ್ಥಿಕ ಬದಲಾವಣೆಗೆ ಕಾರಣವಾಗಿದೆ. ಸಂಸ್ಥೆಗಳು ನಿರಂತರ ಬೆಳವಣಿಗೆ ಆಗುತ್ತಿರಬೇಕು. ಆಗ ಮತ್ತಷ್ಟು ಜನರಿಗೆ ಅವುಗಳಿಂದ ಸಹಾಯವಾಗುತ್ತದೆ ಎಂದು ಸ್ವಾಮೀಜಿ ಹೇಳಿದರು.

ತುಮಕೂರು ಸಿಟಿ ಕ್ರೆಡಿಟ್ ಸೌಹಾರ್ದ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ಕೆ.ಎನ್. ಶಶಿಧರ್ ಮಾತನಾಡಿ, ನಮ್ಮ ಸಹಕಾರಿಯು ಕಡಿಮೆ ಅವಧಿಯಲ್ಲಿ ಹೆಚ್ಚಿನ ಪ್ರಗತಿ ಸಾಧಿಸಲು ಸದಸ್ಯರ ಹಾಗೂ ಆಡಳಿತ ಮಂಡಳಿಯವರ ಸಹಕಾರವೇ ಕಾರಣ. ಪ್ರಸ್ತುತ 2046 ಸದಸ್ಯರನ್ನು ಹೊಂದಿರುವ ಸಂಸ್ಥೆ 86,69,147 ರೂ.ಗಳ ನಿವ್ವಳ ಲಾಭ ಗಳಿಸಿದೆ. 2,22,15,80,826 ರೂ.ಗಳ ವಹಿವಾಟು ನಡೆಸಿದೆ ಎಂದರು.

ಸಹಕಾರಿಯು ಮೂರು ಶಾಖೆಗಳನ್ನು ಹೊಂದಿದ್ದು ಎಲ್ಲವೂ ಪ್ರಗತಿಯಲ್ಲಿವೆ. ಸಂಸ್ಥೆಯಿಂದ ಸದಸ್ಯರಿಗೆ ಹಲವು ರೀತಿಯ ಸಹಾಯ ದೊರೆಯುತ್ತಿದೆ. 10 ಸಾವಿರ ರೂ. ಮರಣೋತ್ತರ ನಿಧಿ ಹಾಗೂ ಸದಸ್ಯರ ಆರೋಗ್ಯ ಸೇವೆಯಲ್ಲಿ ಸಹಾಯ ಮಾಡಲು, ಯಾವುದಾದರೂ ಶಸ್ತ್ರ ಚಿಕಿತ್ಸೆ ಮಾಡಿಸಿಕೊಂಡಲ್ಲಿ 10ರಿಂದ 25 ಸಾವಿರ ರೂ. ಸಹಾಯ ಪಡೆಯಬಹುದು ಎಂದು ಹೇಳಿದರು.

ಸಹಕಾರಿಯ ಉಪಾಧ್ಯಕ್ಷ ಎಂ.ಎಸ್. ಚಿದಾನಂದ, ನಿರ್ದೇಶಕರಾದ ಕೆ.ಎನ್.ರಾಮಚಂದ್ರಬಾಬು, ಎಂ.ಎಸ್. ಕಲ್ಲೇಶಯ್ಯ, ರವಿಶಂಕರ್, ಎಸ್.ಬಿ.ಶಿವಬಸಪ್ಪ, ಕೆ.ಎಸ್. ಗಿರೀಶ್, ಜೆ.ಟಿ.ಜಗದೀಶ್, ಕೆ.ಎಸ್.ವಿಕಾಸ್, ಪದ್ಮ ಪಾಲನೇತ್ರ, ಜಿ.ಮಾನಸ, ಸಿಇಓ ಕೆ.ಪಿ.ಶಿಲ್ಪಶ್ರೀ, ಶಾಖಾ ವ್ಯವಸ್ಥಾಪಕರಾದ ಕೆ.ಜಿ.ಹರ್ಷಿತ, ಮನೋಜ್‌ಕುಮಾರ್ ಮೊದಲಾದವರು ಭಾಗವಹಿಸಿದ್ದರು.

## ವಿದ್ಯುತ್ ಕಂಬ ಧರೆಗೆ: ತಪ್ಪಿದ ಭಾರಿ ಅನಾಹುತ

ಚಿಂತಾಮಣಿ

ಶುಕ್ರವಾರ ಸಂಜೆ ಸುರಿದ ಭಾರಿ ಮಳೆಗೆ ಮುರಗಮಲ್ಲಾ–ಯಗವಕೋಟೆ ರಸ್ತೆಯ ಯರ್ರಕೋಟೆ ಸರ್ಕಲ್‌ನಲ್ಲಿ ಮರವೊಂದು ಉರುಳಿ ಬಿದ್ದ ಪರಿಣಾಮ ವಿದ್ಯುತ್ ಕಂಬ ಮುರಿದು ಬಿದ್ದ ಘಟನೆ ನಡೆದಿದೆ. ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

ಸಂಜೆ ಸುರಿದ ಅಕಾಲಿಕ ಜೋರು ಮಳೆಯಿಂದಾಗಿ ರಸ್ತೆ ಬದಿಯಲ್ಲಿದ್ದ ಮರವು ಅಕಸ್ಮಾತ್ತಾಗಿ ವಿದ್ಯುತ್ ತಂತಿಗಳ ಮೇಲೆ ಧರೆಗುರುಳಿದೆ. ಮರದ ಭಾರವನ್ನು ತಾಳಲಾರದೆ ವಿದ್ಯುತ್ ಕಂಬವು ಮುರಿದು ರಸ್ತೆಗೆ ಅಡ್ಡಲಾಗಿ ಬಿದ್ದಿದೆ. ವಿದ್ಯುತ್ ತಂತಿಗಳು ರಸ್ತೆಯ ಮೇಲೆ ಬಿದ್ದಿದ್ದರಿಂದಾಗಿ ಭಾರಿ ಅನಾಹುತ ತಪ್ಪಿದಂತಾಗಿದೆ.

ರಸ್ತೆಯ ಮಧ್ಯೆ ಮರ ಮತ್ತು ಕಂಬ ಬಿದ್ದಿದ್ದರಿಂದ ಈ ಮಾರ್ಗದಲ್ಲಿ ಸಾಗುವ ವಾಹನ ಸಂಚಾರ ಕೆಲಕಾಲ ಸಂಪೂರ್ಣವಾಗಿ ಸ್ಥಗಿತಗೊಂಡಿದ್ದು, ಪ್ರಯಾಣಿಕರು ಪರದಾಡುವಂತಾಯಿತು.

ಘಟನೆಯ ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಬೆಸ್ಕಾಂ ಅಧಿಕಾರಿಗಳು ಮತ್ತು ಸಿಬ್ಬಂದಿ ಕೂಡಲೇ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಿ ಮುನ್ನೆಚ್ಚರಿಕೆ ವಹಿಸಿದರು. ನಂತರ ರಸ್ತೆಗೆ ಅಡ್ಡಲಾಗಿ ಬಿದ್ದಿದ್ದ ಮರ ಹಾಗೂ ಮುರಿದ ವಿದ್ಯುತ್ ಕಂಬವನ್ನು ತೆರವುಗೊಳಿಸಿದರು. ಸಿಬ್ಬಂದಿಯ ತ್ವರಿತ ಕಾರ್ಯಾಚರಣೆಯಿಂದಾಗಿ ಸಂಚಾರ ದಟ್ಟಣೆ ನಿವಾರಣೆಯಾಗಿ ವಾಹನಗಳು ಎಂದಿನಂತೆ ಸಂಚರಿಸಲು ಅನುವು ಮಾಡಿಕೊಡಲಾಯಿತು.

## ಅಪಘಾತ: ತಾಯಿ ಬಲಿ

ಬೆಂಗಳೂರು

ಮಗಳನ್ನು ಕಾಲೇಜಿಗೆ ಬಿಡಲು ಸ್ಕೂಟರ್‌ನಲ್ಲಿ ಕರೆದುಕೊಂಡು ಹೋಗುತ್ತಿದ್ದಾಗ ಶಾಲಾ ಬಸ್ ಡಿಕ್ಕಿ ಹೊಡೆದ ಪರಿಣಾಮ ತಾಯಿ ಮೃತಪಟ್ಟಿರುವ ಘಟನೆ ವೈಟ್‌ಫೀಲ್ಡ್ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದೆ.

ನಲ್ಲೂರಹಳ್ಳಿ ನಿವಾಸಿ ಕಾಂತಾ (42) ಮೃತಪಟ್ಟ ದುರ್ದೈವಿ. ಇವರ ಮಗಳು ನೇಹಾ ಸಣ್ಣಪುಟ್ಟ ಗಾಯಗೊಂಡು ಪ್ರಾಣಾಪಾಯದಿಂದ ಪಾರಾಗಿದ್ದಾರೆ.ಇಂದು ಬೆಳಗ್ಗೆ 7.45 ರ ಸುಮಾರಿನಲ್ಲಿ ಮಗಳನ್ನು ಕಾಲೇಜಿಗೆ ಬಿಡಲು ಕಾಂತಾ ಅವರು ಸ್ಕೂಟರ್‌ನಲ್ಲಿ ಕರೆದುಕೊಂಡು ವರ್ತೂರಿನಿಂದ ಮಾರತಹಳ್ಳಿ ಕಡೆಗೆ ಹೋಗುತ್ತಿದ್ದರು.

ಸಿದ್ದಾಪುರದ ಮೀನಾಕ್ಷಿ ಲೇಔಟ್ ಬಳಿ ರಸ್ತೆಯ ಗುಂಡಿಯಲ್ಲಿ ಮಳೆ ನೀರು ನಿಂತಿರುವುದು ಗಮನಿಸಿದ ಕಾಂತಾ ಅವರು ತಮ ಸ್ಕೂಟರ್‌ನನ್ನು ಪಕ್ಕಕ್ಕೆ ತೆಗೆದುಕೊಳ್ಳುತ್ತಿದ್ದಂತೆ ಹಿಂದಿನಿಂದ ವೇಗವಾಗಿ ಬಂದ ಶಾಲಾ ಬಸ್ ಡಿಕ್ಕಿ ಹೊಡೆದಿದೆ. ಪರಿಣಾಮ ಕಾಂತಾ ಅವರು ಗಂಭೀರ ಗಾಯಗೊಂಡು ಮೃತಪಟ್ಟಿದ್ದಾರೆ.

ಸುದ್ದಿ ತಿಳಿದು ವೈಟ್‌ಫೀಲ್ಡ್ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮೃತದೇಹವನ್ನು ಆಸ್ಪತ್ರೆಗೆ ರವಾನಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

## ‘ಸಸ್ಯ ಸಂಪತ್ತು ಉಳಿಸಿದರೆ ಮುಂದಿನ ಪೀಳಿಗೆಯ ಬದುಕು ಸಮೃದ್ಧಿ’

ಚಿಕ್ಕಬಳ್ಳಾಪುರ

ಸಸ್ಯಸಂಪತ್ತನ್ನು ಸಮೃದ್ಧಿಗೊಳಿಸಿದಾಗ ಮಾತ್ರ ನಮ್ಮ ಬದುಕು ಹಾಗೂ ಮುಂದಿನ ಪೀಳಿಗೆಯ ಭವಿಷ್ಯ ಸಮೃದ್ಧಿಯಾಗಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬರೂ ಜವಾಬ್ದಾರಿಯಿಂದ ಪರಿಸರ ಮತ್ತು ಸಸ್ಯಸಂಪತ್ತನ್ನು ಉಳಿಸಬೇಕು ಎಂದು ರಾಜ್ಯ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಅಭಿಪ್ರಾಯಪಟ್ಟರು.

ಜಿಲ್ಲೆಯ ಮುದ್ದೇನಹಳ್ಳಿಯ ಸತ್ಯ ಸಾಯಿ ಗ್ರಾಮದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಚಿಕ್ಕಬಳ್ಳಾಪುರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಪ್ರಶಾಂತಿ ಬಾಲಮಂದಿರ ವಿಶ್ವಸ್ಥ ಮಂಡಳಿ ಹಾಗೂ ವಂದೇಭಾರತ್ ಪ್ರತಿಷ್ಠಾನದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಐದು ಕೋಟಿ ಸಸಿ ನೆಡುವ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಐದು ಕೋಟಿಗೂ ಹೆಚ್ಚು ಸಸಿಗಳನ್ನು ನೆಡುವ ಮಹತ್ವಾಕಾಂಕ್ಷಿ ಕಾರ್ಯಕ್ರಮಕ್ಕೆ ಚಾಲನೆ ನೀಡುತ್ತಿರುವುದು ಸಂತಸದ ಸಂಗತಿಯಾಗಿದೆ. ಪರಿಸರ ಸಂರಕ್ಷಣೆ ಎಂಬುದು ಕೇವಲ ಇಂದಿನ ಅಗತ್ಯವಲ್ಲ, ಅದು ಸಮಾಜ ಹಾಗೂ ಸಮುದಾಯದ ಅಸ್ತಿತ್ವಕ್ಕೆ ಮೂಲಭೂತ ಅವಶ್ಯಕತೆಯಾಗಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಸಮಾಜಮುಖಿ ಸಂಸ್ಥೆಗಳು ಕೈಜೋಡಿಸಿ ನಡೆಸುತ್ತಿರುವ ಈ ಅಭಿಯಾನ ಶ್ಲಾಘನೀಯವಾಗಿದೆ ಎಂದ ಅವರು, ಹವಾಮಾನ ಬದಲಾವಣೆ, ನೈಸರ್ಗಿಕ ಸಂಪತ್ತಿನ ಇಳಿಕೆ ಮತ್ತು ಜಲಕ್ಷಾಮ ಮುಂದಿನ ಪೀಳಿಗೆಗೆ ದೊಡ್ಡ ಸವಾಲಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.



ಈ ಸಮಸ್ಯೆಗಳನ್ನು ಕೇವಲ ಸರ್ಕಾರ ಮಾತ್ರ ಪರಿಹರಿಸಲು ಸಾಧ್ಯವಿಲ್ಲ. ಜನರು ಸಹ ಕ್ರಿಯಾಶೀಲವಾಗಿ ಭಾಗವಹಿಸಬೇಕು. ಗಾಳಿ, ನೀರು ಮತ್ತು ಅರಣ್ಯ ಸಂಪತ್ತು ಪ್ರಕೃತಿಯ ಸಮತೋಲನ ಕಾಪಾಡುವ ಪ್ರಮುಖ ಅಂಶಗಳಾಗಿವೆ ಎಂದು ಹೇಳಿದರು.

ದೇಶ ಮತ್ತು ವಿಶ್ವವು ಹೆಚ್ಚುತ್ತಿರುವ ತಾಪಮಾನ, ಅನಿಯಮಿತ ಮಳೆ ಹಾಗೂ ಅಂತರ್ಜಲ ಮಟ್ಟ ಕುಸಿತದಂತಹ ಸಮಸ್ಯೆಗಳನ್ನು ಎದುರಿಸುತ್ತಿದೆ. ಪರಿಸರ ಅಸಮತೋಲನದ ಬಗ್ಗೆ ಕೇವಲ ವೈಜ್ಞಾನಿಕ ವೇದಿಕೆಗಳಲ್ಲಿ ಚರ್ಚೆ ನಡೆಸುವುದಷ್ಟೇ ಸಾಲದು, ಸಮಾಜದ ಎಲ್ಲಾ ಹಂತಗಳಲ್ಲೂ ಜಾಗೃತಿ ಮೂಡಿಸಿ ಕಾರ್ಯಪ್ರವೃತ್ತರಾಗಬೇಕು ಎಂದು ಅವರು ಕರೆ ನೀಡಿದರು.

ಪರಿಸರ ಸಂರಕ್ಷಣೆ ಎಂದರೆ ಕೇವಲ ಪ್ರಕೃತಿ ಉಳಿಸುವ ಕಾರ್ಯವಲ್ಲ, ಅದು ಸಾಮಾಜಿಕ ನ್ಯಾಯ ಮತ್ತು ಮಾನವ ಘನತೆಯ ಪ್ರತೀಕವೂ ಆಗಿದೆ. ಇಂದು ನೆಡುವ ಪ್ರತಿಯೊಂದು ಸಸಿಯೂ ಮುಂದಿನ ಪೀಳಿಗೆಗೆ ಅಮೂಲ್ಯ ಆಸ್ತಿಯಾಗಲಿದೆ ಎಂದು ಹೇಳಿದರು.

ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಹಂಚಾಟೆ ಸಂಜೀವಕುಮಾರ್ ಮಾತನಾಡಿ, ಪರಿಸರ ಸಂರಕ್ಷಣೆ, ಹಸಿರು ಅಭಿವೃದ್ಧಿ ಹಾಗೂ ಆರೋಗ್ಯಕರ ಜೀವನಶೈಲಿಗೆ ಸಸಿ ನೆಡುವಿಕೆ ಮತ್ತು ಸಾವಯವ ಕೃಷಿ ಅನಿವಾರ್ಯವಾಗಿದೆ ಎಂದು ಹೇಳಿದರು.

ಅರಣ್ಯ ನಾಶ, ಮಾಲಿನ್ಯ ಮತ್ತು ಹವಾಮಾನ ಬದಲಾವಣೆಯನ್ನು ತಡೆಯಲು ಹೆಚ್ಚಿನ ಪ್ರಮಾಣದಲ್ಲಿ ಸಸಿ ನೆಡುವುದು ಅಗತ್ಯ. ಆದರೆ ನೆಟ್ಟ ಸಸಿಗಳನ್ನು ಸಮರ್ಪಕವಾಗಿ ಆರೈಕೆ ಮಾಡಿದಾಗ ಮಾತ್ರ ಪರಿಸರ ಸಂರಕ್ಷಣೆಯ ಗುರಿ ಸಾಧಿಸಬಹುದು ಎಂದು ತಿಳಿಸಿದರು.

ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಅತಿಯಾದ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಸಿಯುತ್ತಿದ್ದು, ಕ್ಯಾನ್ಸರ್ ಸೇರಿದಂತೆ ಅನೇಕ ಮಾರಕ ರೋಗಗಳಿಗೂ ಕಾರಣವಾಗುತ್ತಿದೆ.

ಸಾವಯವ ಕೃಷಿಯಿಂದ ಮಣ್ಣಿನ ಆರೋಗ್ಯ ಕಾಪಾಡಿ ಸುರಕ್ಷಿತ ಆಹಾರ ಉತ್ಪಾದನೆ ಸಾಧ್ಯವಾಗುತ್ತದೆ ಎಂದು ಹೇಳಿದರು.

ಪರಿಸರವನ್ನು ಕಾಪಾಡುವುದು ಸರ್ಕಾರದ ಜವಾಬ್ದಾರಿಯಷ್ಟೇ ಅಲ್ಲ, ಪ್ರತಿಯೊಬ್ಬ ನಾಗರಿಕನ ಕರ್ತವ್ಯವೂ ಆಗಿದೆ. ಪ್ರತಿಯೊಬ್ಬರೂ ಕನಿಷ್ಠ ಒಂದು ಸಸಿಯನ್ನು ನೆಟ್ಟು ಬೆಳೆಸಬೇಕು ಹಾಗೂ ನೀರು ಮತ್ತು ಪ್ರಕೃತಿ ಸಂಪನ್ಮೂಲಗಳನ್ನು ಮಿತವಾಗಿ ಬಳಸುವ ಮೂಲಕ ಹಸಿರು ಪರಿಸರ ಉಳಿಸಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಅನು ಶಿವರಾಮನ್, ರಾಜ್ಯ ಉಚ್ಚ ನ್ಯಾಯಾಲಯದ ಪ್ರಧಾನ ಕಾರ್ಯದರ್ಶಿ ಎಂ. ಚಂದ್ರಶೇಖರ ರೆಡ್ಡಿ, ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ಟಿ.ಪಿ. ರಾಮಲಿಂಗೇಗೌಡ, ಪ್ರಶಾಂತಿ ಬಾಲಮಂದಿರ ವಿಶ್ವಸ್ಥ ಮಂಡಳಿಯ ಅಧ್ಯಕ್ಷ ಡಾ. ಬಿ.ಎನ್. ನರಸಿಂಹಮೂರ್ತಿ, ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಚ್. ಶಶಿಧರಶೆಟ್ಟಿ, ವಂದೇಭಾರತಂ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಬಿಜ್ಜವಾರ ಎಚ್. ಲೋಕೇಶ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕೆ.ವಿ. ಅಭಿಲಾಷ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಶನಿವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಬೆಂಗಳೂರಿನ ಅವರ ನಿವಾಸದಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ ಕೆ ಹರಿಪ್ರಸಾದ್ ಅವರು ಭೇಟಿ ಮಾಡಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy